ಸತ್ಯ ಮತ್ತು ಧೈರ್ಯದ ಧ್ವನಿ

ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 127 | ರಾಯಚೂರು Raichur 29-10-2026 | ಗುರುವಾರ Thursday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685



ಬ್ಯಾಲೆಟ್ ಪೇಪರ್ ಫಲಿತಾಂಶ ಮುಂದಿಟ್ಟು ಪ್ರಧಾನಿ ಮೋದಿ ವ್ಯಂಗ್ಯ

ನವದೆಹಲಿ, ಅ.28: ಕರ್ನಾಟಕ ಸೇರಿದಂತೆ ನಾಲ್ಕು ರಾಜ್ಯಗಳ ವಿಧಾನ ಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಒಂದೇ ಒಂದು ಸ್ಥಾನ ಗೆಲ್ಲಲು ಸಾಧ್ಯವಾಗದಿರುವುದನ್ನು ಮುಂದಿಟ್ಟುಕೊಂಡು ಪ್ರಧಾನಿ ನರೇಂದ್ರ ಮೋದಿ ಅವರು ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ವಿಶೇಷವಾಗಿ ವಿದ್ಯುನ್ಮಾನ ಮತಯಂತ್ರಗಳ (ಇವಿಎಂ) ಬದಲಿಗೆ ಬ್ಯಾಲೆಟ್ ಪೇಪರ್ ಬಳಸಿ ಚುನಾವಣೆ ನಡೆಸಲಾಗಿದ್ದರೂ ಕಾಂಗ್ರೆಸ್‌ಗೆ ಗೆಲುವು ದೊರೆತಿಲ್ಲ ಎಂದು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ವ್ಯಂಗ್ಯವಾಡಿದ್ದಾರೆ.



ಉತ್ತರ ಪ್ರದೇಶ, ಮಹಾರಾಷ್ಟ್ರ, ಬಿಹಾರ ಮತ್ತು ಕರ್ನಾಟಕ ರಾಜ್ಯಗಳ ಒಟ್ಟು 28 ವಿಧಾನ ಪರಿಷತ್ ಸ್ಥಾನಗಳಿಗೆ ಅಕ್ಟೋಬರ್ 23ರಂದು ಮತದಾನ ನಡೆದಿದ್ದು, ಅಕ್ಟೋಬರ್ 27ರಿಂದ ಮತ ಎಣಿಕೆ ಆರಂಭವಾಗಿದೆ. ಈ ಚುನಾವಣೆಯಲ್ಲಿ ಕಾಂಗ್ರೆಸ್ ಸ್ಪರ್ಧಿಸಿದ್ದ 12 ಸ್ಥಾನಗಳಲ್ಲಿಯೂ ಗೆಲುವು ಸಾಧಿಸಲು ವಿಫಲವಾಗಿದೆ ಎಂದು ವರದಿಯಾಗಿದೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ ಮೋದಿ, ಉತ್ತರ ಪ್ರದೇಶ, ಮಹಾರಾಷ್ಟ್ರ, ಬಿಹಾರ ಹಾಗೂ ಕರ್ನಾಟಕದಂತಹ ನಾಲ್ಕು ಪ್ರಮುಖ ರಾಜ್ಯಗಳ 28 ವಿಧಾನ ಪರಿಷತ್ ಸ್ಥಾನಗಳಿಗೆ ಚುನಾವಣೆ ನಡೆದಿದೆ. ಈ ಎಲ್ಲ ಚುನಾವಣೆಗಳಲ್ಲಿಯೂ ಬ್ಯಾಲೆಟ್ ಪೇಪರ್ ಬಳಸಲಾಗಿದೆ. ಇಂತಹ ಚುನಾವಣೆಯಲ್ಲಿ ಕಾಂಗ್ರೆಸ್ ಎಷ್ಟು ಸ್ಥಾನಗಳನ್ನು ಗೆದ್ದಿದೆ ಎಂಬುದನ್ನು ಊಹಿಸಿ ಎಂದು ಪ್ರಶ್ನಿಸುವ ಮೂಲಕ ಕಾಂಗ್ರೆಸ್ ನಾಯಕತ್ವವನ್ನು ಟೀಕಿಸಿದ್ದಾರೆ.

ಲೋಕಸಭೆ ಹಾಗೂ ವಿಧಾನಸಭಾ ಚುನಾವಣೆಗಳಲ್ಲಿ ವಿದ್ಯುನ್ಮಾನ ಮತಯಂತ್ರಗಳ ಬಳಕೆಯ ಕುರಿತು ಕಾಂಗ್ರೆಸ್ ಸೇರಿದಂತೆ ಕೆಲವು ವಿರೋಧ ಪಕ್ಷಗಳು ಅನುಮಾನ ವ್ಯಕ್ತಪಡಿಸುತ್ತಿರುವ ಹಿನ್ನೆಲೆಯಲ್ಲಿ ಪ್ರಧಾನಿ ಮೋದಿ ಅವರ ಹೇಳಿಕೆ ರಾಜಕೀಯ ಮಹತ್ವ ಪಡೆದುಕೊಂಡಿದೆ.

ನಾಲ್ಕು ರಾಜ್ಯಗಳಲ್ಲಿ ನಡೆದ ವಿಧಾನ ಪರಿಷತ್ ಚುನಾವಣೆಗಳ ಪೈಕಿ ಉತ್ತರ ಪ್ರದೇಶದಲ್ಲಿ 11, ಬಿಹಾರದಲ್ಲಿ 8, ಮಹಾರಾಷ್ಟ್ರದಲ್ಲಿ 5 ಹಾಗೂ ಕರ್ನಾಟಕದಲ್ಲಿ 4 ಸ್ಥಾನಗಳಿಗೆ ಮತದಾನ ನಡೆದಿತ್ತು. ಮುಖ್ಯವಾಗಿ ಶಿಕ್ಷಕರ ಹಾಗೂ ಪದವೀಧರರ ಕ್ಷೇತ್ರಗಳಿಗೆ 2ನೇ ಪುಟಕ್ಕೆ

ಗಾಂಜಾ ಬೆಳೆ ಮೇಲೆ ಪೊಲೀಸರ ದಾಳಿ: ₹11.94 ಲಕ್ಷ ಮೌಲ್ಯದ ಗಾಂಜಾ ಜಪ್ತಿ, ಆರೋಪಿ ಬಂಧನ

ಜಾಲಹಳ್ಳಿ: ದೇವದುರ್ಗ ತಾಲೂಕಿನ ಜಾಲಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯ ದೇವರಗುಡ್ಡ ಗ್ರಾಮದ ಸೀಮಾಂತರ ಪ್ರದೇಶದಲ್ಲಿ ಅಕ್ರಮವಾಗಿ ಗಾಂಜಾ ಬೆಳೆದಿದ್ದ ಸ್ಥಳದ ಮೇಲೆ ಪೊಲೀಸರು ದಾಳಿ ನಡೆಸಿ, ಸುಮಾರು ₹11.94 ಲಕ್ಷ ಮೌಲ್ಯದ 51 ಗಾಂಜಾ ಗಿಡಗಳನ್ನು ವಶಪಡಿಸಿಕೊಂಡು ಓರ್ವ ಆರೋಪಿಯನ್ನು ಬಂಧಿಸಿದ್ದಾರೆ.



ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಕ್ಷು ಗಿರಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ. ಹರೀಶ್ ಹಾಗೂ ಲಿಂಗಸುಗೂರು ಪೊಲೀಸ್ ಉಪಾಧೀಕ್ಷಕ ಸುಲೇಮಾನ ತಹಸೀಲ್ದಾರ್ ಅವರ ಮಾರ್ಗದರ್ಶನದಲ್ಲಿ ದೇವದುರ್ಗ ಗ್ರಾಮೀಣ ವೃತ್ತದ ಸಿಪಿಐ ಪುಂಡಲೀಕ ಎಂ. ಪಟಾತರ ನೇತೃತ್ವದ ಪೊಲೀಸ್ ತಂಡ ಕಾರ್ಯಾಚರಣೆ ನಡೆಸಿದೆ.

ದೇವರಗುಡ್ಡ ಗ್ರಾಮದ ಸೀಮಾಂತರ ಪ್ರದೇಶದಲ್ಲಿ ಅಕ್ರಮವಾಗಿ ಗಾಂಜಾ ಬೆಳೆಸುತ್ತಿರುವ ಬಗ್ಗೆ ದೊರೆತ ಮಾಹಿತಿಯ ಮೇರೆಗೆ ಪೊಲೀಸರು ದಾಳಿ ನಡೆಸಿ ಪರಿಶೀಲನೆ ಕೈಗೊಂಡಿದ್ದಾರೆ. ಈ ವೇಳೆ ಬೆಳೆದಿದ್ದ 51 ಗಾಂಜಾ ಗಿಡಗಳನ್ನು ಪತ್ತೆಹಚ್ಚಿ ವಶಪಡಿಸಿಕೊಂಡಿದ್ದಾರೆ.

ಜಪ್ತಿ ಮಾಡಲಾದ ಹಸಿ ಗಾಂಜಾದ ಒಟ್ಟು ತೂಕ 23 ಕೆ.ಜಿ. 890 ಗ್ರಾಂ ಆಗಿದ್ದು, ಅದರ ಅಂದಾಜು ಮೌಲ್ಯ ₹11,94,500 ಎಂದು ಪೊಲೀಸರು ತಿಳಿಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಮದರಕಲ್ ಗ್ರಾಮದ ನಿವಾಸಿ ಸಾಬಣ್ಣ (45), ತಂದೆ ಮಹಾದೇವಪ್ಪ ಎಂಬಾತನನ್ನು ಪೊಲೀಸರು ಬಂಧಿಸಿದ್ದಾರೆ. ಆರೋಪಿಯ 2ನೇ ಪುಟಕ್ಕೆ

ವಿಧಾನ ಪರಿಷತ್ ಚುನಾವಣೆ ಫಲಿತಾಂಶ ಕಾಂಗ್ರೆಸ್ ಸರ್ಕಾರಕ್ಕೆ ಎಚ್ಚರಿಕೆಯ ಸಂದೇಶ: ಎನ್. ರವಿಕುಮಾರ್

ರಾಯಚೂರು, ಅ. 28: ವಿಧಾನ ಪರಿಷತ್ತಿನ ಶಿಕ್ಷಕರ ಹಾಗೂ ಪದವೀಧರರ ಕ್ಷೇತ್ರಗಳ ಚುನಾವಣೆಯಲ್ಲಿ ಬಿಜೆಪಿಜೆಡಿಎಸ್ ಮೈತ್ರಿಕೂಟದ ಅಭ್ಯರ್ಥಿಗಳಿಗೆ ದೊರೆತ ಗೆಲುವು ರಾಜ್ಯ ಕಾಂಗ್ರೆಸ್ ಸರ್ಕಾರದ ಆಡಳಿತದ ವಿರುದ್ಧ ಮತದಾರರು ವ್ಯಕ್ತಪಡಿಸಿರುವ ಅಸಮಾಧಾನದ ಸಂಕೇತವಾಗಿದೆ. ಜನರ ನಿರೀಕ್ಷೆಗಳಿಗೆ ತಕ್ಕಂತೆ ಆಡಳಿತ ನಡೆಸದ ಸರ್ಕಾರಕ್ಕೆ ಈ ಫಲಿತಾಂಶ ಎಚ್ಚರಿಕೆಯ ಸಂದೇಶ ನೀಡಿದೆ ಎಂದು ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಅಭಿಪ್ರಾಯಪಟ್ಟರು.




ನಗರದ ಬಿಜೆಪಿ ಜಿಲ್ಲಾ ಕಚೇರಿಯಲ್ಲಿ ಬುಧವಾರ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಧಾನ ಪರಿಷತ್ತಿನ ನಾಲ್ಕು ಕ್ಷೇತ್ರಗಳ ಚುನಾವಣೆಯಲ್ಲಿ ಎನ್‌ಡಿಎ ಬೆಂಬಲಿತ ಅಭ್ಯರ್ಥಿಗಳು ಜಯಗಳಿಸಿರುವುದು ರಾಜ್ಯ ರಾಜಕೀಯದಲ್ಲಿ ಮಹತ್ವದ ಬೆಳವಣಿಗೆಯಾಗಿದೆ. ಶಿಕ್ಷಕರು ಹಾಗೂ ಪದವೀಧರರು ಸರ್ಕಾರದ ಕಾರ್ಯವೈಖರಿ, ಉದ್ಯೋಗಾವಕಾಶಗಳ ಕೊರತೆ ಮತ್ತು ಅಭಿವೃದ್ಧಿ ಯೋಜನೆಗಳ ಅನುಷ್ಠಾನದಲ್ಲಿನ ವಿಳಂಬವನ್ನು ಗಮನದಲ್ಲಿಟ್ಟುಕೊಂಡು ಮತದಾನ ಮಾಡಿದ್ದಾರೆ. ಈ ಜನಾದೇಶವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕಾಗಿದೆ ಎಂದರು.

ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ನೆಪವಾಗಿಟ್ಟುಕೊಂಡು ಅಭಿವೃದ್ಧಿ ಚಟುವಟಿಕೆಗಳಿಗೆ ಅನುದಾನ ಒದಗಿಸುವಲ್ಲಿ ಸರ್ಕಾರ ನಿರ್ಲಕ್ಷ್ಯ ತೋರುತ್ತಿದೆ. ಗೃಹಲಕ್ಷ್ಮಿ ಯೋಜನೆಯ ಹಣ ಬಿಡುಗಡೆ, ವಿಧವಾ ವೇತನ ಪಾವತಿ ಹಾಗೂ ರೈತರಿಗೆ ಘೋಷಿಸಿರುವ ನೆರವಿನ ವಿತರಣೆಯಲ್ಲಿ ವಿಳಂಬವಾಗುತ್ತಿದೆ. ರೈತರಿಗೆ ನೀಡುವುದಾಗಿ ತಿಳಿಸಿದ್ದ ₹2,500 ಆರ್ಥಿಕ ನೆರವು ಕೂಡ ಸಮರ್ಪಕವಾಗಿ ತಲುಪುತ್ತಿಲ್ಲ ಎಂದು ಆರೋಪಿಸಿದರು.

ರಾಜ್ಯದಲ್ಲಿ ಬರ ಪರಿಸ್ಥಿತಿಯಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ತುರ್ತಾಗಿ ಪರಿಹಾರ ವಿತರಿಸಬೇಕು. ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ಕ್ರಮ ಕೈಗೊಳ್ಳಬೇಕು. ರೈತರ ಬದುಕಿಗೆ ಆಧಾರವಾಗಿರುವ ನೀರಾವರಿ ಮತ್ತು ಕೃಷಿ ಕ್ಷೇತ್ರಗಳಿಗೆ 2ನೇ ಪುಟಕ್ಕೆ

ಜಿಲ್ಲೆಯ ಅಂತಿಮ ಮತದಾರರ ಪಟ್ಟಿ ಪ್ರಕಟ: ಜಿಲ್ಲಾ ಚುನಾವಣಾಧಿಕಾರಿ ಪೂವಿತಾ ಎಸ್

ರಾಯಚೂರು, ಅ.28: ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ 2026ರ ಅಕ್ಟೋಬರ್ 1ನ್ನು ಅರ್ಹತಾ ದಿನಾಂಕವನ್ನಾಗಿ ಪರಿಗಣಿಸಿ ಕೈಗೊಂಡ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್)-2026ರ ಬಳಿಕ ರಾಯಚೂರು ಜಿಲ್ಲೆಯ ಅಂತಿಮ ಮತದಾರರ ಪಟ್ಟಿಯನ್ನು ಅಕ್ಟೋಬರ್ 27ರಂದು ಅಧಿಕೃತವಾಗಿ ಪ್ರಕಟಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಪೂವಿತಾ ಎಸ್. ತಿಳಿಸಿದ್ದಾರೆ.



ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರಗಳಲ್ಲಿ ಒಟ್ಟು 1,892 ಮತಗಟ್ಟೆಗಳಿದ್ದು, 14,24,909 ಮತದಾರರು ನೋಂದಣಿಯಾಗಿದ್ದಾರೆ. ಇವರಲ್ಲಿ 7,05,951 ಪುರುಷ ಮತದಾರರು, 7,18,825 ಮಹಿಳಾ ಮತದಾರರು ಹಾಗೂ 133 ಇತರೆ ಲಿಂಗದ ಮತದಾರರು ಸೇರಿದ್ದಾರೆ.

ವಿಧಾನಸಭಾ ಕ್ಷೇತ್ರವಾರು ಮತದಾರರ ವಿವರಗಳ ಪ್ರಕಾರ, 53-ರಾಯಚೂರು ಗ್ರಾಮೀಣ ಕ್ಷೇತ್ರದಲ್ಲಿ 2,03,686 ಮತದಾರರು, 54-ರಾಯಚೂರು ನಗರ ಕ್ಷೇತ್ರದಲ್ಲಿ 1,84,678 ಮತದಾರರು, 55-ಮಾನ್ವಿ ಕ್ಷೇತ್ರದಲ್ಲಿ 2,04,511 ಮತದಾರರು, 56-ದೇವದುರ್ಗ ಕ್ಷೇತ್ರದಲ್ಲಿ 2,15,059 ಮತದಾರರು, 57-ಲಿಂಗಸುಗೂರು ಕ್ಷೇತ್ರದಲ್ಲಿ 2,25,916 ಮತದಾರರು, 58-ಸಿಂಧನೂರು ಕ್ಷೇತ್ರದಲ್ಲಿ 2,03,712 ಮತದಾರರು ಹಾಗೂ 59-ಮಸ್ಕಿ ಕ್ಷೇತ್ರದಲ್ಲಿ 1,87,347 ಮತದಾರರು ನೋಂದಣಿಯಾಗಿದ್ದಾರೆ.

ವಿಶೇಷ ತೀವ್ರ ಪರಿಷ್ಕರಣೆ (ಎಸ್ ಐಆರ್)-2026ರ ಅಂಗವಾಗಿ ರಾಯಚೂರು ಜಿಲ್ಲೆಯ ಅಂತಿಮ ಮತದಾರರ ಪಟ್ಟಿಯನ್ನು ಅಕ್ಟೋಬರ್ 27ರಂದು ಪ್ರಕಟಿಸಲಾಗಿದೆ. ಕರಡು ಮತದಾರರ ಪಟ್ಟಿಯನ್ನು ಅಕ್ಟೋಬರ್ 1ರಂದು ಪ್ರಕಟಿಸಲಾಗಿದ್ದು, ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಆಗಸ್ಟ್ 24ರಿಂದ ಸೆಪ್ಟೆಂಬರ್ 23ರವರೆಗೆ ಅವಕಾಶ ಕಲ್ಪಿಸಲಾಗಿತ್ತು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಅಂತಿಮ ಮತದಾರರ ಪಟ್ಟಿಯನ್ನು ಸಂಬಂಧಪಟ್ಟ ಮತದಾರರ ನೋಂದಣಾಧಿಕಾರಿಗಳ (ಇಆರ್‌ಒ) ಕಚೇರಿಗಳು, ಸಹಾಯಕ ಮತದಾರರ ನೋಂದಣಾಧಿಕಾರಿಗಳ (ಎಇಆರ್‌ಒ) ಕಚೇರಿಗಳು ಹಾಗೂ ಗೊತ್ತುಪಡಿಸಿದ ಸ್ಥಳಗಳಲ್ಲಿ ಸಾರ್ವಜನಿಕರ ಪರಿಶೀಲನೆಗೆ ಲಭ್ಯವಾಗುವಂತೆ ಮಾಡಲಾಗಿದೆ.

ಸಾರ್ವಜನಿಕರು ಕರ್ನಾಟಕ ಮುಖ್ಯ ಚುನಾವಣಾಧಿಕಾರಿಗಳ ಅಧಿಕೃತ ಜಾಲತಾಣ https://ceo.karnataka.gov.in/en ಮೂಲಕವೂ ಮತದಾರರ ಪಟ್ಟಿಯನ್ನು ಪರಿಶೀಲಿಸಬಹುದು.

ಜಿಲ್ಲೆಯ ಎಲ್ಲ ಅರ್ಹ ಮತದಾರರು ಅಂತಿಮ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ನೋಂದಣಿಯಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು. ಹೆಸರು ಸೇರ್ಪಡೆ, ತಿದ್ದುಪಡಿ ಹಾಗೂ ಮತದಾರರ ಪಟ್ಟಿಗೆ ಸಂಬಂಧಿಸಿದ ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಚುನಾವಣಾಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಪೂವಿತಾ ಎಸ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎರಡು ವಾರಕ್ಕಿಂತ ಹೆಚ್ಚು ಕೆಮ್ಮು ಇದ್ದರೆ ಕ್ಷಯರೋಗ ಪರೀಕ್ಷೆ ಮಾಡಿಸಿಕೊಳ್ಳಿ: ಡಾ. ನಂದಿತಾ ಎಂ.ಎನ್

ರಾಯಚೂರು, ಅ. 28: ಎರಡು ವಾರಗಳಿಗಿಂತ ಹೆಚ್ಚು ಕಾಲ ನಿರಂತರವಾಗಿ ಕೆಮ್ಮು ಕಾಣಿಸಿಕೊಂಡರೆ ನಿರ್ಲಕ್ಷ್ಯ ಮಾಡದೆ ಕ್ಷಯರೋಗ ಪರೀಕ್ಷೆಗೆ ಒಳಗಾಗಬೇಕು. ಆರಂಭಿಕ ಹಂತದಲ್ಲಿಯೇ ರೋಗ ಪತ್ತೆಹಚ್ಚಿ ನಿಗದಿತ ಅವಧಿಯ ಚಿಕಿತ್ಸೆ ಪಡೆದರೆ ಕ್ಷಯರೋಗದಿಂದ ಸಂಪೂರ್ಣ ಗುಣಮುಖರಾಗಲು ಸಾಧ್ಯವಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಂದಿತಾ ಎಂ.ಎನ್. ತಿಳಿಸಿದರು.




ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕ್ಷಯರೋಗ ನಿರ್ಮೂಲನಾ ಘಟಕ, ತಾಲೂಕು ಆರೋಗ್ಯಾಧಿಕಾರಿಗಳ ಕಾರ್ಯಾಲಯ ಹಾಗೂ ನಗರದ ಸಿಯಾ ತಲಾಬ್ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಮಂಗಳವಾರ ಆಯೋಜಿಸಿದ್ದ ಸಕ್ರಿಯ ಕ್ಷಯರೋಗ ಪತ್ತೆ ಮತ್ತು ಚಿಕಿತ್ಸಾ ಆಂದೋಲನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಅಕ್ಟೋಬರ್ 27ರಿಂದ ಡಿಸೆಂಬರ್ 8ರವರೆಗೆ ವಿಶೇಷ ಕ್ಷಯರೋಗ ಪತ್ತೆ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಆರೋಗ್ಯ ಇಲಾಖೆಯ ಕ್ಷೇತ್ರಮಟ್ಟದ ವೈದ್ಯಕೀಯ ಸಿಬ್ಬಂದಿ ತಂಡಗಳು ಮನೆಮನೆಗೆ ಭೇಟಿ ನೀಡಿ ಕ್ಷಯರೋಗದ ಲಕ್ಷಣಗಳಿರುವವರನ್ನು ಗುರುತಿಸಲಿವೆ. ಅಗತ್ಯವಿರುವವರಿಗೆ ಕಫ ಪರೀಕ್ಷೆ ಸೇರಿದಂತೆ ಸೂಕ್ತ ತಪಾಸಣೆ ನಡೆಸಿ, ರೋಗ ದೃಢಪಟ್ಟವರಿಗೆ ಉಚಿತ ಚಿಕಿತ್ಸೆ ಒದಗಿಸಲಾಗುವುದು ಎಂದು ವಿವರಿಸಿದರು.

ಕ್ಷಯರೋಗವು ಸಾಂಕ್ರಾಮಿಕ ಕಾಯಿಲೆಯಾಗಿದ್ದು, ಮುಖ್ಯವಾಗಿ ಶ್ವಾಸಕೋಶದ ಕ್ಷಯರೋಗ ಹೊಂದಿರುವ ವ್ಯಕ್ತಿ ಕೆಮ್ಮಿದಾಗ ಅಥವಾ ಸೀನಿದಾಗ ಗಾಳಿಗೆ ಬಿಡುಗಡೆಯಾಗುವ ಸೂಕ್ಷ್ಮ ಸೋಂಕುಕಾರಕ ಕಣಗಳ ಮೂಲಕ ಇತರರಿಗೆ ಹರಡುವ ಸಾಧ್ಯತೆಯಿದೆ. ವಿಶೇಷವಾಗಿ ಕುಟುಂಬದ ಸದಸ್ಯರು ಹಾಗೂ ರೋಗಿಯೊಂದಿಗೆ ನಿಕಟ ಸಂಪರ್ಕದಲ್ಲಿರುವವರಿಗೆ ಸೋಂಕು ತಗಲುವ ಅಪಾಯ ಹೆಚ್ಚಿರುತ್ತದೆ. ಆದ್ದರಿಂದ ರೋಗಲಕ್ಷಣಗಳು 2ನೇ ಪುಟಕ್ಕೆ

ಜಾನೇಕಲ್ ಶಾಲೆಗೆ ಎರಡು ಎಕರೆ ಭೂಮಿ ಮಂಜೂರು ಮಾಡಲು ಎನ್.ಎಸ್. ಬೋಸರಾಜು ಸೂಚನೆ

ಮಾನ್ವಿ: ತಾಲೂಕಿನ ಜಾನೇಕಲ್ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಹೆಚ್ಚುವರಿ ಕೊಠಡಿಗಳ ನಿರ್ಮಾಣಕ್ಕೆ ಅಗತ್ಯ ಸ್ಥಳಾವಕಾಶ ಕಲ್ಪಿಸುವುದರ ಜೊತೆಗೆ ಗ್ರಾಮದಲ್ಲಿನ ವಸತಿರಹಿತ ಕುಟುಂಬಗಳಿಗೆ ನಿವೇಶನಗಳನ್ನು ಮಂಜೂರು ಮಾಡಬೇಕೆಂದು ಗ್ರಾಮಸ್ಥರು ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಅವರಿಗೆ ಮನವಿ ಸಲ್ಲಿಸಿದರು.



ಗ್ರಾಮಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಬೋಸರಾಜು ಅವರನ್ನು ಭೇಟಿಯಾದ ಗ್ರಾಮಸ್ಥರು, ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಹೆಚ್ಚುವರಿ ಕೊಠಡಿಗಳನ್ನು ನಿರ್ಮಿಸುವ ಅಗತ್ಯವಿದೆ. ಆದರೆ ಶಾಲಾ ಆವರಣದಲ್ಲಿ ಸಾಕಷ್ಟು ಜಾಗವಿಲ್ಲದ ಕಾರಣ ಹೊಸ ಕಟ್ಟಡಗಳ ನಿರ್ಮಾಣಕ್ಕೆ ಅಡಚಣೆಯಾಗಿದೆ. ಇದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳಿಗೂ ತೊಂದರೆಯಾಗುತ್ತಿದ್ದು, ಶಾಲೆಯ ಅಭಿವೃದ್ಧಿಗಾಗಿ ಸೂಕ್ತ ಭೂಮಿಯನ್ನು ಮಂಜೂರು ಮಾಡಬೇಕು ಎಂದು ಒತ್ತಾಯಿಸಿದರು.

ಇದೇ ವೇಳೆ ಗ್ರಾಮದಲ್ಲಿ ಸ್ವಂತ ನಿವೇಶನವಿಲ್ಲದೆ ವಾಸಿಸುತ್ತಿರುವ ಬಡ ಹಾಗೂ ವಸತಿರಹಿತ ಕುಟುಂಬಗಳಿಗೆ ಸರ್ಕಾರಿ ಯೋಜನೆಗಳಡಿ ನಿವೇಶನಗಳನ್ನು ಹಂಚಿಕೆ ಮಾಡಬೇಕು. ನಿವೇಶನ ದೊರೆತಲ್ಲಿ ಅರ್ಹ ಫಲಾನುಭವಿಗಳು ಮನೆ ನಿರ್ಮಿಸಿಕೊಂಡು ನೆಮ್ಮದಿಯ ಜೀವನ ನಡೆಸಲು ಸಾಧ್ಯವಾಗುತ್ತದೆ ಎಂದು ಗ್ರಾಮಸ್ಥರು ಮನವಿ ಮಾಡಿದರು.

ಗ್ರಾಮಸ್ಥರ ಅಹವಾಲು ಆಲಿಸಿದ ಎನ್. ಎಸ್. ಬೋಸರಾಜು ಮಾತನಾಡಿ, ತಾವು ಶಾಸಕರಾಗಿದ್ದ ಅವಧಿಯಲ್ಲಿ ಜಾನೇಕಲ್ ಗ್ರಾಮದ ಬಡ ಕುಟುಂಬಗಳಿಗೆ ವಸತಿ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ಎರಡು ಎಕರೆ ಭೂಮಿಯನ್ನು ರಾಜೀವ್ ಗಾಂಧಿ ವಸತಿ ನಿಗಮಕ್ಕೆ ನೀಡಲಾಗಿತ್ತು. ಆದರೆ ಇದುವರೆಗೂ ಸಂಬಂಧಿಸಿದ ಅಧಿಕಾರಿಗಳು ಆ ಭೂಮಿಯನ್ನು ಉದ್ದೇಶಿತ ವಸತಿ ಯೋಜನೆಗೆ ಬಳಸಿಕೊಳ್ಳದಿರುವುದು 2ನೇ ಪುಟಕ್ಕೆ

ನಂದಿಹಾಳ್ ಹಳ್ಳಕ್ಕೆ ನೀರು ಹರಿಸಲು ಕ್ರಮ ಕೈಗೊಳ್ಳುವ ಭರವಸೆ: ಎನ್.ಎಸ್. ಬೋಸರಾಜು

ಮಾನ್ವಿ: ತಾಲೂಕಿನ ನಂದಿಹಾಳ್ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಬರಗಾಲದ ಪರಿಣಾಮ ಕುಡಿಯುವ ನೀರಿನ ಸಮಸ್ಯೆ ತೀವ್ರಗೊಂಡಿದ್ದು, ಜನರು ಹಾಗೂ ಜಾನುವಾರುಗಳಿಗೆ ನೀರಿನ ಸೌಲಭ್ಯ ಕಲ್ಪಿಸಲು ಗೋಲದಿನ್ನಿ ಎಸ್ಕೇಪ್ ಮೂಲಕ ನಂದಿಹಾಳ್ ಹಳ್ಳಕ್ಕೆ ತಕ್ಷಣ ನೀರು ಹರಿಸಬೇಕೆಂದು ಗ್ರಾಮಸ್ಥರು ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಅವರಿಗೆ ಮನವಿ ಸಲ್ಲಿಸಿದರು.



ನಂದಿಹಾಳ್ ಗ್ರಾಮಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಬೋಸರಾಜು ಅವರನ್ನು ಭೇಟಿಯಾದ ಗ್ರಾಮಸ್ಥರು, ತಾಲೂಕಿನಲ್ಲಿ ಮಳೆಯ ಕೊರತೆಯಿಂದಾಗಿ ಜಲಮೂಲಗಳಲ್ಲಿ ನೀರಿನ ಲಭ್ಯತೆ ಕಡಿಮೆಯಾಗಿದೆ. ಇದರಿಂದ ಗ್ರಾಮೀಣ ಪ್ರದೇಶದ ಜನರು ಕುಡಿಯುವ ನೀರಿಗಾಗಿ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಜಾನುವಾರುಗಳಿಗೂ ಸಮರ್ಪಕವಾಗಿ ನೀರು ದೊರೆಯದೆ ರೈತರು ಸಂಕಷ್ಟ ಎದುರಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಗೋಲದಿನ್ನಿ ಎಸ್ಕೇಪ್‌ನಿಂದ ನಂದಿಹಾಳ್ ಹಳ್ಳಕ್ಕೆ ನೀರು ಬಿಡುಗಡೆ ಮಾಡುವ ಮೂಲಕ ಸುತ್ತಮುತ್ತಲಿನ ಗ್ರಾಮಗಳ ಕುಡಿಯುವ ನೀರಿನ ಸಮಸ್ಯೆಗೆ ಪರಿಹಾರ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಇದೇ ವೇಳೆ ಸಿಂಧನೂರು ಹೆದ್ದಾರಿಯಲ್ಲಿ ನಂದಿಹಾಳ್ ಗ್ರಾಮದ ಸಮೀಪ ಪ್ರಯಾಣಿಕರಿಗೆ ಅನುಕೂಲವಾಗುವಂತೆ ಸೂಕ್ತ ಬಸ್ ನಿಲ್ದಾಣ ನಿರ್ಮಿಸಬೇಕು. ಗ್ರಾಮಸ್ಥರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಬಸ್‌ಗಳಿಗಾಗಿ ಕಾಯಲು ಅಗತ್ಯ ವ್ಯವಸ್ಥೆ ಇಲ್ಲದಿರುವುದರಿಂದ ತೊಂದರೆ ಅನುಭವಿಸುತ್ತಿದ್ದಾರೆ ಎಂದು ಗಮನ ಸೆಳೆದರು.

ಗ್ರಾಮದ ಮುಂಭಾಗದಲ್ಲಿರುವ ಹೆದ್ದಾರಿಯ ತಿರುವಿನಲ್ಲಿ ರಾತ್ರಿ ವೇಳೆ ಸಮರ್ಪಕ ಬೆಳಕಿನ ವ್ಯವಸ್ಥೆ ಇಲ್ಲದಿರುವುದರಿಂದ ವಾಹನ ಸವಾರರಿಗೆ ರಸ್ತೆ ಸ್ಪಷ್ಟವಾಗಿ ಕಾಣುತ್ತಿಲ್ಲ. ಇದರಿಂದ ಅಪಘಾತ ಸಂಭವಿಸುವ ಆತಂಕವಿದ್ದು, 2ನೇ ಪುಟಕ್ಕೆ

ಬೆಳೆ ನಷ್ಟಕ್ಕೆ ಎಕರೆಗೆ ₹50 ಸಾವಿರ ಪರಿಹಾರಕ್ಕೆ ಆಗ್ರಹಿಸಿ ಶಿವಸೇನಾ ಕರ್ನಾಟಕದಿಂದ ಪ್ರತಿಭಟನೆ

ರಾಯಚೂರು: ಬರಗಾಲ, ಬೆಳೆ ಹಾನಿ, ನೀರಾವರಿ ಸಮಸ್ಯೆ ಹಾಗೂ ಸಾಲದ ಹೊರೆಯಿಂದ ತತ್ತರಿಸಿರುವ ರೈತರ ನೆರವಿಗೆ ಸರ್ಕಾರ ತಕ್ಷಣ ಧಾವಿಸಬೇಕು. ಕೃಷಿ ಕಾರ್ಮಿಕರ ಬದುಕಿಗೆ ಆರ್ಥಿಕ ಭದ್ರತೆ ಒದಗಿಸುವುದರ ಜೊತೆಗೆ ಜಾನುವಾರುಗಳ ರಕ್ಷಣೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಶಿವಸೇನಾ ಕರ್ನಾಟಕದ ರಾಯಚೂರು ಜಿಲ್ಲಾ ಘಟಕದ ನೇತೃತ್ವದಲ್ಲಿ ಬುಧವಾರ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.



ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಿಂದ ಟಿಪ್ಪು ಸುಲ್ತಾನ್ ಗಾರ್ಡನ್ ವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದ ಸಂಘಟನೆಯ ಮುಖಂಡರು ಹಾಗೂ ಕಾರ್ಯಕರ್ತರು, ರೈತರು ಮತ್ತು ಕೃಷಿ ಕೂಲಿಕಾರರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿದರು. ಬಳಿಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಸರ್ಕಾರದ ಗಮನ ಸೆಳೆಯುವಂತೆ ಕೋರಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಶಿವಸೇನಾ ಕರ್ನಾಟಕದ ಜಿಲ್ಲಾಧ್ಯಕ್ಷ ರಾಜಾಚಂದ್ರ ರಾಮನಗೌಡ, ಕೃಷಿಯನ್ನೇ ನಂಬಿ ಜೀವನ ಸಾಗಿಸುತ್ತಿರುವ ಜಿಲ್ಲೆಯ ಸಾವಿರಾರು ಕುಟುಂಬಗಳು ಸಂಕಷ್ಟದ ಪರಿಸ್ಥಿತಿಯನ್ನು ಎದುರಿಸುತ್ತಿವೆ. ಒಂದೆಡೆ ಮಳೆಯ ಅಭಾವದಿಂದ ಬೆಳೆಗಳು ಹಾನಿಗೊಳಗಾಗುತ್ತಿದ್ದರೆ, ಮತ್ತೊಂದೆಡೆ ನೀರಾವರಿ ಸೌಲಭ್ಯಗಳ ಕೊರತೆ ಮತ್ತು ವಿದ್ಯುತ್ ಸಮಸ್ಯೆಯಿಂದ ರೈತರು ನಿರೀಕ್ಷಿತ ಇಳುವರಿ ಪಡೆಯಲು ಸಾಧ್ಯವಾಗುತ್ತಿಲ್ಲ. ಬೆಳೆದ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಬೆಲೆಯೂ ಸಿಗದಿರುವುದು ರೈತರ ಆರ್ಥಿಕ ಸ್ಥಿತಿಯನ್ನು ಮತ್ತಷ್ಟು ಹದಗೆಡಿಸಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಬೆಳೆ ನಷ್ಟ ಅನುಭವಿಸಿರುವ ರೈತರ ಜಮೀನುಗಳಿಗೆ ಅಧಿಕಾರಿಗಳು ಭೇಟಿ ನೀಡಿ ವಾಸ್ತವ ಪರಿಸ್ಥಿತಿಯನ್ನು ಆಧರಿಸಿ ವೈಜ್ಞಾನಿಕ ಸಮೀಕ್ಷೆ ಕೈಗೊಳ್ಳಬೇಕು. ಹಾನಿಯ ಪ್ರಮಾಣಕ್ಕೆ ಅನುಗುಣವಾಗಿ ಎಕರೆಗೆ ₹50 ಸಾವಿರದವರೆಗೆ ಪರಿಹಾರ ಘೋಷಿಸಬೇಕು. ಸಾಲದ ಸುಳಿಗೆ ಸಿಲುಕಿರುವ ಅರ್ಹ 2ನೇ ಪುಟಕ್ಕೆ

ಬೆಳೆ ನಷ್ಟಕ್ಕೆ ಎಕರೆಗೆ ₹50 ಸಾವಿರ ಪರಿಹಾರಕ್ಕೆ ಆಗ್ರಹಿಸಿ ಶಿವಸೇನಾ ಕರ್ನಾಟಕದಿಂದ ಪ್ರತಿಭಟನೆ

ರೈತರ ಕೃಷಿ ಸಾಲವನ್ನು ಮನ್ನಾ ಮಾಡಬೇಕು. ಬೆಳೆ ವಿಮೆ ಪರಿಹಾರ ಹಾಗೂ ಸರ್ಕಾರದ ವಿವಿಧ ಯೋಜನೆಗಳಡಿ ರೈತರಿಗೆ ಬರಬೇಕಾದ ಬಾಕಿ ಹಣವನ್ನು ಕೂಡಲೇ ಬಿಡುಗಡೆಗೊಳಿಸಬೇಕು ಎಂದು ಒತ್ತಾಯಿಸಿದರು.

ರಾಯಚೂರು ಜಿಲ್ಲೆಯ ಕೃಷಿ ಚಟುವಟಿಕೆಗಳಿಗೆ ಜೀವನಾಡಿಯಾಗಿರುವ ತುಂಗಭದ್ರಾ ಎಡದಂಡೆ ಮತ್ತು ನಾರಾಯಣಪುರ ಬಲದಂಡೆ ಕಾಲುವೆಗಳಲ್ಲಿ ನೀರಿನ ಸಮರ್ಪಕ ನಿರ್ವಹಣೆಗೆ ಆದ್ಯತೆ ನೀಡಬೇಕು. ಮುಖ್ಯ ಕಾಲುವೆಗಳ ಜೊತೆಗೆ ವಿತರಣಾ ಕಾಲುವೆಗಳು ಹಾಗೂ ಉಪಕಾಲುವೆಗಳ ಕೊನೆಯ ಭಾಗದ ಜಮೀನುಗಳಿಗೂ ನೀರು ತಲುಪುವಂತೆ ವ್ಯವಸ್ಥೆ ಮಾಡಬೇಕು. ನೀರಿನ ಹರಿವಿಗೆ ಅಡ್ಡಿಯಾಗಿರುವ ಹೂಳು ತೆರವುಗೊಳಿಸಿ, ಹಾನಿಗೊಂಡ ಕಾಲುವೆಗಳನ್ನು ದುರಸ್ತಿಪಡಿಸಬೇಕು. ನೀರು ಪೋಲಾಗುವುದನ್ನು ತಡೆಯಲು ಅಗತ್ಯ ಕಾಮಗಾರಿಗಳನ್ನು ವಿಳಂಬವಿಲ್ಲದೆ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಕೃಷಿ ಪಂಪ್‌ಸೆಟ್‌ಗಳಿಗೆ ನಿರಂತರ ವಿದ್ಯುತ್ ಸಿಗದಿರುವುದರಿಂದ ನೀರಾವರಿ ಬೆಳೆಗಳನ್ನು ಉಳಿಸಿಕೊಳ್ಳಲು ರೈತರು ಪರದಾಡುವಂತಾಗಿದೆ. ಹೀಗಾಗಿ ಪ್ರತಿದಿನ ಕನಿಷ್ಠ 12 ಗಂಟೆಗಳ ಕಾಲ ಸಮರ್ಪಕ ವಿದ್ಯುತ್ ಪೂರೈಕೆ ಖಚಿತಪಡಿಸಬೇಕು. ಕೃಷಿ ಋತುವಿನಲ್ಲಿ ಗುಣಮಟ್ಟದ ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಇತರ ಕೃಷಿ ಪರಿಕರಗಳ ಕೊರತೆ ಉಂಟಾಗದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ಪ್ರಮುಖವಾಗಿ ಬೆಳೆಯುವ ಭತ್ತ, ಹತ್ತಿ, ಜೋಳ, ತೊಗರಿ ಹಾಗೂ ಮೆಣಸಿನಕಾಯಿ ಬೆಳೆಗಳಿಗೆ ರೈತರಿಗೆ ಲಾಭದಾಯಕವಾಗುವ ರೀತಿಯಲ್ಲಿ ನ್ಯಾಯಯುತ ದರ ದೊರೆಯಬೇಕು. ಕೃಷಿ ಉತ್ಪನ್ನಗಳ ಖರೀದಿ ವ್ಯವಸ್ಥೆಯನ್ನು ಬಲಪಡಿಸಿ, ಸರ್ಕಾರಿ ಖರೀದಿ ಕೇಂದ್ರಗಳಲ್ಲಿ ಬೆಳೆ ಮಾರಾಟ ಮಾಡಿರುವ ರೈತರಿಗೆ ಪಾವತಿಸಬೇಕಾದ ಹಣವನ್ನು ತಕ್ಷಣ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ಗ್ರಾಮೀಣ ಪ್ರದೇಶಗಳಲ್ಲಿ ಕೃಷಿ ಕೆಲಸಗಳ ಕೊರತೆಯಿಂದ ಕೂಲಿಕಾರರು ಉದ್ಯೋಗಕ್ಕಾಗಿ ಪರದಾಡುವ ಪರಿಸ್ಥಿತಿ ಎದುರಾಗಿದೆ. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಹೆಚ್ಚಿನ ಉದ್ಯೋಗಾವಕಾಶಗಳನ್ನು ಸೃಷ್ಟಿಸಿ, ಬರಪೀಡಿತ ಗ್ರಾಮಗಳಲ್ಲಿ ಅಗತ್ಯ ಅಭಿವೃದ್ಧಿ ಕಾಮಗಾರಿಗಳನ್ನು ಆರಂಭಿಸಬೇಕು. ಕಾರ್ಮಿಕರಿಗೆ ಕೆಲಸದ ಜೊತೆಗೆ ನಿಗದಿತ ಅವಧಿಯಲ್ಲಿ ಕೂಲಿ ಪಾವತಿಯಾಗುವಂತೆ ನೋಡಿಕೊಳ್ಳಬೇಕು. ಆರ್ಥಿಕವಾಗಿ ಹಿಂದುಳಿದ ಅರ್ಹ ಕೃಷಿ ಕಾರ್ಮಿಕ ಕುಟುಂಬಗಳಿಗೆ ಉಚಿತ ಪಡಿತರ ಸೌಲಭ್ಯ ಒದಗಿಸಬೇಕು ಎಂದು ಮನವಿ ಮಾಡಿದರು.

ಬರದ ಪರಿಣಾಮ ಜಾನುವಾರುಗಳಿಗೆ ಮೇವು ಹಾಗೂ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸುವ ಆತಂಕವಿದೆ. ಈ ಹಿನ್ನೆಲೆಯಲ್ಲಿ ಅಗತ್ಯವಿರುವ ಗ್ರಾಮಗಳಲ್ಲಿ ಗೋಶಾಲೆ ಮತ್ತು ಮೇವು ವಿತರಣಾ ಕೇಂದ್ರಗಳನ್ನು ಸ್ಥಾಪಿಸಬೇಕು. ಪಶುಗಳಿಗೆ ಶುದ್ಧ ಕುಡಿಯುವ ನೀರು ಹಾಗೂ ತುರ್ತು ಪಶುವೈದ್ಯಕೀಯ ಚಿಕಿತ್ಸಾ ಸೌಲಭ್ಯಗಳನ್ನು ಕಲ್ಪಿಸಬೇಕು. ಜಾನುವಾರುಗಳ ಸಂರಕ್ಷಣೆಯನ್ನೂ ಸರ್ಕಾರ ಆದ್ಯತೆಯ ವಿಷಯವಾಗಿ ಪರಿಗಣಿಸಬೇಕು ಎಂದು ಆಗ್ರಹಿಸಿದರು.

ರೈತರ ಸಮಸ್ಯೆಗಳಿಗೆ ಕೇವಲ ಭರವಸೆ ನೀಡುವುದರಿಂದ ಪರಿಹಾರ ಸಿಗುವುದಿಲ್ಲ. ಜಿಲ್ಲಾಧಿಕಾರಿಗಳು ಕೃಷಿ, ನೀರಾವರಿ, ವಿದ್ಯುತ್, ಪಶುಸಂಗೋಪನೆ ಹಾಗೂ ಗ್ರಾಮೀಣಾಭಿವೃದ್ಧಿ ಇಲಾಖೆಗಳ ಅಧಿಕಾರಿಗಳೊಂದಿಗೆ ಸಮನ್ವಯ ಸಭೆ ನಡೆಸಬೇಕು. ರೈತ ಸಂಘಟನೆಗಳ ಪ್ರತಿನಿಧಿಗಳ ಅಭಿಪ್ರಾಯ ಪಡೆದು ಪ್ರತಿಯೊಂದು ಬೇಡಿಕೆಯ ಈಡೇರಿಕೆಗೆ ನಿರ್ದಿಷ್ಟ ಕಾಲಮಿತಿ ನಿಗದಿಪಡಿಸಬೇಕು ಎಂದು ರಾಜಾಚಂದ್ರ ರಾಮನಗೌಡ ಒತ್ತಾಯಿಸಿದರು.

ಸರ್ಕಾರ ಮತ್ತು ಜಿಲ್ಲಾಡಳಿತ ರೈತರು ಹಾಗೂ ಕೃಷಿ ಕಾರ್ಮಿಕರ ಸಂಕಷ್ಟಕ್ಕೆ ಸ್ಪಂದಿಸದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ವಿಸ್ತರಿಸಲಾಗುವುದು. ನ್ಯಾಯಯುತ ಬೇಡಿಕೆಗಳು ಈಡೇರುವವರೆಗೂ ಶಾಂತಿಯುತ ಹಾಗೂ ಪ್ರಜಾಸತ್ತಾತ್ಮಕ ಮಾರ್ಗದಲ್ಲಿ ಹೋರಾಟ ಮುಂದುವರಿಯಲಿದೆ ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಶಿವಸೇನಾ ಕರ್ನಾಟಕದ ಗ್ರಾಮಾಂತರ ಅಧ್ಯಕ್ಷ ಸಂತೋಷ್ ಗೌಡ ಗುಡಿ, ಪ್ರಭು ಮಡಿವಾಳ, ರಾಮು, ಅಮೀನ ರೆಡ್ಡಿ ಗೌಡ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು, ರೈತರು, ಕೃಷಿ ಕಾರ್ಮಿಕರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

ಅಮೃತ ವಾಣಿ

ಅಹಂಕಾರದ ಆಟ ಆಡಿದರೆ ಎಂದಿಗೂ ವಿಜಯ ಹೊಂದುವುದಿಲ್ಲ.

1631 ನೇಯ ದಿನಕ್ಕೆ ಏಮ್ಸ್ ಹೋರಾಟ

ನಂದಿಹಾಳ್ ಹಳ್ಳಕ್ಕೆ ನೀರು ಹರಿಸಲು ಕ್ರಮ ಕೈಗೊಳ್ಳುವ ಭರವಸೆ: ಎನ್.ಎಸ್. ಬೋಸರಾಜು

ಸಾರ್ವಜನಿಕರ ಸುರಕ್ಷತೆಯ ದೃಷ್ಟಿಯಿಂದ ತಿರುವಿನ ರಸ್ತೆ ಹಾಗೂ ಗ್ರಾಮದ ಪ್ರವೇಶ ಭಾಗದಲ್ಲಿ ಅಗತ್ಯ ವಿದ್ಯುತ್ ದೀಪಗಳನ್ನು ಅಳವಡಿಸಬೇಕೆಂದು ಮನವಿ ಮಾಡಿದರು.

ಗ್ರಾಮಸ್ಥರ ಅಹವಾಲು ಸ್ವೀಕರಿಸಿದ ಎನ್.ಎಸ್. ಬೋಸರಾಜು ಮಾತನಾಡಿ, ನಂದಿಹಾಳ್ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಎದುರಾಗಿರುವ ಕುಡಿಯುವ ನೀರಿನ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ಈ ಕುರಿತು ಜಿಲ್ಲಾಧಿಕಾರಿಗಳು ಹಾಗೂ ರಾಜ್ಯ ನೀರಾವರಿ ಸಚಿವರೊಂದಿಗೆ ಚರ್ಚಿಸಿ, ಗೋಲದಿನ್ನಿ ಎಸ್ಕೇಪ್ ಮೂಲಕ ನಂದಿಹಾಳ್ ಹಳ್ಳಕ್ಕೆ ನೀರು ಹರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಬರಗಾಲದ ಸಂದರ್ಭದಲ್ಲಿ ಜನರು ಹಾಗೂ ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸುವುದು ಅತ್ಯಂತ ಅಗತ್ಯವಾಗಿದೆ. ನೀರಿನ ಕೊರತೆಯಿಂದ ಗ್ರಾಮೀಣ ಜನಜೀವನಕ್ಕೆ ತೊಂದರೆಯಾಗದಂತೆ ಸಂಬಂಧಿಸಿದ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಸಮಸ್ಯೆ ಪರಿಹರಿಸಲು ಪ್ರಯತ್ನಿಸಲಾಗುವುದು ಎಂದು ತಿಳಿಸಿದರು.

ಸಿಂಧನೂರು ಹೆದ್ದಾರಿಯಲ್ಲಿರುವ ನಂದಿಹಾಳ್ ಗ್ರಾಮದ ಬಳಿ ಬಸ್‌ಗಳ ನಿಲುಗಡೆಗೆ ಸೂಕ್ತ ವ್ಯವಸ್ಥೆ ಕಲ್ಪಿಸುವುದರ ಜೊತೆಗೆ ಅಪಾಯಕಾರಿ ತಿರುವಿನ ಪ್ರದೇಶದಲ್ಲಿ ವಿದ್ಯುತ್ ದೀಪಗಳನ್ನು ಅಳವಡಿಸಬೇಕು. ಈ ಎರಡೂ ಕಾಮಗಾರಿಗಳನ್ನು ಒಂದು ವಾರದೊಳಗೆ ಕೈಗೊಳ್ಳುವಂತೆ ಚತುಷ್ಪಥ ರಸ್ತೆ ನಿರ್ಮಾಣ ಸಂಸ್ಥೆಯ ಅಧಿಕಾರಿಗಳು ಹಾಗೂ ಲೋಕೋಪಯೋಗಿ ಇಲಾಖೆಯ ಕಿರಿಯ ಎಂಜಿನಿಯರ್ ಸ್ವಾಮೇಲಪ್ಪ ಅವರಿಗೆ ಸೂಚಿಸಿದರು.

ಹೆದ್ದಾರಿಯಲ್ಲಿ ಸಂಚರಿಸುವ ವಾಹನ ಸವಾರರು ಹಾಗೂ ಗ್ರಾಮಸ್ಥರ ಸುರಕ್ಷತೆಗೆ ಆದ್ಯತೆ ನೀಡಬೇಕು. ವಿಶೇಷವಾಗಿ ರಾತ್ರಿ ವೇಳೆ ಅಪಘಾತಗಳ ಸಂಭವವನ್ನು ತಡೆಯಲು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಶಾಸಕ ಹಂಪಯ್ಯ ನಾಯಕ, ಮಾನ್ವಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಬ್ದುಲ್ ಗಫೂರ್ ಸಾಬ್, ಬಿ.ಕೆ. ಅಂಬರೇಶಪ್ಪ ವಕೀಲರು, ಮಹಾಂತೇಶ ಸ್ವಾಮಿ, ಎ. ಬಾಲಸ್ವಾಮಿ ಕೊಡ್ಲಿ, ರಾಜಾ ಸುಭಾಷ್ ಚಂದ್ರ ನಾಯಕ, ಜಿ. ನಾಗರಾಜ್, ಸತ್ತಾರ್ ಬಂಗ್ಲೆವಾಲೆ, ಎಸ್.ಎಂ. ಪಾಟೀಲ್ ರಾಜಲದಿನ್ನಿ ಸೇರಿದಂತೆ ನಂದಿಹಾಳ್ ಗ್ರಾಮದ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಜಾನೇಕಲ್ ಶಾಲೆಗೆ ಎರಡು ಎಕರೆ ಭೂಮಿ ಮಂಜೂರು ಮಾಡಲು ಎನ್.ಎಸ್. ಬೋಸರಾಜು ಸೂಚನೆ

ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ವಸತಿ ನಿಗಮಕ್ಕೆ ನೀಡಿರುವ ಭೂಮಿಯ ಪ್ರಸ್ತುತ ಸ್ಥಿತಿಗತಿ ಪರಿಶೀಲಿಸಿ, ಅರ್ಹ ವಸತಿರಹಿತ ಕುಟುಂಬಗಳಿಗೆ ನಿವೇಶನ ಹಂಚಿಕೆ ಮಾಡುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಬೇಕು. ಸರ್ಕಾರದ ಯೋಜನೆಗಳ ಪ್ರಯೋಜನಗಳು ನಿಜವಾದ ಫಲಾನುಭವಿಗಳಿಗೆ ತಲುಪುವಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಗ್ರಾಮದ ಸಮೀಪದ ಮತ್ತೊಂದು ಸರ್ವೆ ಸಂಖ್ಯೆಯಲ್ಲಿ ಒಂಬತ್ತು ಎಕರೆ ಭೂಮಿ ಲಭ್ಯವಿರುವ ಕುರಿತು ಮಾಹಿತಿ ಪಡೆದ ಅವರು, ಅದರಲ್ಲಿ ಎರಡು ಎಕರೆ ಭೂಮಿಯನ್ನು ಸರ್ಕಾರಿ ಪ್ರಾಥಮಿಕ ಶಾಲೆಯ ಅಭಿವೃದ್ಧಿಗೆ ಮಂಜೂರು ಮಾಡಲು ಕ್ರಮ ಕೈಗೊಳ್ಳುವಂತೆ ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಅವರಿಗೆ ಸೂಚಿಸಿದರು.

ಶಾಲೆಗೆ ಅಗತ್ಯ ಭೂಮಿ ದೊರೆತರೆ ಹೆಚ್ಚುವರಿ ತರಗತಿ ಕೊಠಡಿಗಳ ನಿರ್ಮಾಣದ ಜೊತೆಗೆ ಮುಂದಿನ ದಿನಗಳಲ್ಲಿ ಇತರ ಶೈಕ್ಷಣಿಕ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಅನುಕೂಲವಾಗಲಿದೆ. ಮಕ್ಕಳ ಶಿಕ್ಷಣಕ್ಕೆ ಸಂಬಂಧಿಸಿದ ಸಮಸ್ಯೆಗಳನ್ನು ಆದ್ಯತೆಯ ಮೇರೆಗೆ ಪರಿಹರಿಸುವುದು ಅಗತ್ಯವಾಗಿದೆ ಎಂದು ಹೇಳಿದರು.

ಗ್ರಾಮದ ಶಾಲಾ ಅಭಿವೃದ್ಧಿ ಹಾಗೂ ವಸತಿರಹಿತ ಕುಟುಂಬಗಳ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಕಂದಾಯ ಇಲಾಖೆ, ತಾಲೂಕು ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಖಾಲಿದ್ ಅಹಮ್ಮದ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಅಕ್ತಾರ್ ಸಾಬ್, ಮಾನ್ವಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಬ್ದುಲ್ ಗಫೂರ್ ಸಾಬ್, ಬಿ.ಕೆ. ಅಂಬರೇಶಪ್ಪ ವಕೀಲರು, ಮಹಾಂತೇಶ ಸ್ವಾಮಿ, ಸೈಯದ್ ಖಾಲಿದ್ ಖಾದ್ರಿ, ಜಿ. ನಾಗರಾಜ್, ಎ. ಬಾಲಸ್ವಾಮಿ ಕೊಡ್ಲಿ, ರಾಜಾ ಸುಭಾಷ್ಚಂದ್ರ ನಾಯಕ, ರಾಜಶೇಖರ್ ಪಾಟೀಲ್ ಜಾನೇಕಲ್, ಸಿದ್ದಲಿಂಗಪ್ಪ ವಕೀಲರು, ಗ್ರಾಮದ ಮುಖಂಡರಾದ ನೀಲಪ್ಪಗೌಡ ಜಾನೇಕಲ್, ಮೌನೇಶಗೌಡ ಜಾನೇಕಲ್, ಲಕ್ಷ್ಮಣ್, ಮಲ್ಲಿಕಾರ್ಜುನ್, ಅರ್ಜುನಪ್ಪ, ಚನ್ನಪ್ಪಗೌಡ ಬೆಟ್ಟದೂರು, ಸತ್ತಾರ್ ಬಂಗ್ಲೆವಾಲೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಎರಡು ವಾರಕ್ಕಿಂತ ಹೆಚ್ಚು ಕೆಮ್ಮು ಇದ್ದರೆ ಕ್ಷಯರೋಗ ಪರೀಕ್ಷೆ ಮಾಡಿಸಿಕೊಳ್ಳಿ: ಡಾ. ನಂದಿತಾ ಎಂ.ಎನ್

ಕಂಡುಬಂದ ತಕ್ಷಣ ಪರೀಕ್ಷೆ ಮಾಡಿಸಿಕೊಂಡು, ಕ್ಷಯರೋಗ ದೃಢಪಟ್ಟಲ್ಲಿ ವೈದ್ಯರ ಸಲಹೆಯಂತೆ ಚಿಕಿತ್ಸೆಯನ್ನು ಪೂರ್ಣಗೊಳಿಸಬೇಕು ಎಂದು ಸಲಹೆ ನೀಡಿದರು.

ಸರ್ಕಾರಿ ಆರೋಗ್ಯ ಸಂಸ್ಥೆಗಳಲ್ಲಿ ಕ್ಷಯರೋಗ ಪತ್ತೆ ಮತ್ತು ಚಿಕಿತ್ಸೆಗೆ ಉಚಿತ ಸೌಲಭ್ಯಗಳಿದ್ದು, ಸಾಮಾನ್ಯವಾಗಿ ಆರು ತಿಂಗಳ ಚಿಕಿತ್ಸೆಯಿಂದ ಔಷಧಿಗಳಿಗೆ ಸ್ಪಂದಿಸುವ ಕ್ಷಯರೋಗವನ್ನು ಗುಣಪಡಿಸಬಹುದು. ಆದರೆ ಮಧ್ಯದಲ್ಲಿಯೇ ಔಷಧ ಸೇವನೆ ನಿಲ್ಲಿಸುವುದರಿಂದ ರೋಗ ಮರುಕಳಿಸುವ ಅಥವಾ ಔಷಧ ನಿರೋಧಕ ಕ್ಷಯರೋಗ ಉಂಟಾಗುವ ಅಪಾಯವಿದೆ. ಹೀಗಾಗಿ ವೈದ್ಯರು ಸೂಚಿಸಿದ ಅವಧಿಯವರೆಗೆ ನಿಯಮಿತವಾಗಿ ಔಷಧ ಸೇವಿಸುವುದು ಅತ್ಯಂತ ಮುಖ್ಯವಾಗಿದೆ ಎಂದು ತಿಳಿಸಿದರು.

ಎರಡು ವಾರಗಳಿಗಿಂತ ಹೆಚ್ಚು ಕಾಲ ಕೆಮ್ಮು ಮುಂದುವರಿಯುವುದು, ಕಫದಲ್ಲಿ ರಕ್ತ ಕಾಣಿಸಿಕೊಳ್ಳುವುದು, ವಿಶೇಷವಾಗಿ ಸಂಜೆ ವೇಳೆಯಲ್ಲಿ ಜ್ವರ ಬರುವುದು, ರಾತ್ರಿ ವೇಳೆ ಅತಿಯಾಗಿ ಬೆವರುವುದು, ಯಾವುದೇ ಸ್ಪಷ್ಟ ಕಾರಣವಿಲ್ಲದೆ ದೇಹದ ತೂಕ ಕಡಿಮೆಯಾಗುವುದು, ಹಸಿವು ಕುಂಠಿತಗೊಳ್ಳುವುದು, ನಿರಂತರ ಆಯಾಸ, ದೌರ್ಬಲ್ಯ ಹಾಗೂ ಎದೆನೋವು ಕ್ಷಯರೋಗದ ಪ್ರಮುಖ ಲಕ್ಷಣಗಳಾಗಿವೆ. ಇಂತಹ ಲಕ್ಷಣಗಳು ಕಂಡುಬಂದರೆ ಸಮೀಪದ ಸರ್ಕಾರಿ ಆರೋಗ್ಯ ಕೇಂದ್ರಕ್ಕೆ ತೆರಳಿ ಪರೀಕ್ಷೆ ಮಾಡಿಸಿಕೊಳ್ಳಬೇಕು ಎಂದು ಸಾರ್ವಜನಿಕರಿಗೆ ಕರೆ ನೀಡಿದರು.

ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ. ಯಶೋಧಾ ಮಾತನಾಡಿ, ಕ್ಷಯರೋಗವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ರೋಗದ ಆರಂಭಿಕ ಪತ್ತೆ, ಸಕಾಲಿಕ ಚಿಕಿತ್ಸೆ ಹಾಗೂ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಅಗತ್ಯವಾಗಿದೆ. ವಿಶೇಷವಾಗಿ ಸೋಂಕಿನ ಅಪಾಯ ಹೆಚ್ಚಿರುವ ವ್ಯಕ್ತಿಗಳನ್ನು ಗುರುತಿಸಿ ತಪಾಸಣೆಗೆ ಒಳಪಡಿಸುವುದರಿಂದ ರೋಗ ಹರಡುವಿಕೆಯನ್ನು ನಿಯಂತ್ರಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಕ್ಷಯರೋಗಿಗಳ ಕುಟುಂಬದ ಸದಸ್ಯರು, ಅವರೊಂದಿಗೆ ನಿಕಟ ಸಂಪರ್ಕ ಹೊಂದಿರುವವರು, ಎಚ್ಐವಿ ಸೋಂಕಿತರು, ಮಧುಮೇಹಿಗಳು, ಧೂಮಪಾನಿಗಳು, ತಂಬಾಕು ಸೇವಿಸುವವರು, ಅಪೌಷ್ಟಿಕತೆಯಿಂದ ಬಳಲುತ್ತಿರುವವರು ಹಾಗೂ ಕಡಿಮೆ ದೇಹತೂಕ ಹೊಂದಿರುವವರು ಕ್ಷಯರೋಗದ ಅಪಾಯದ ಬಗ್ಗೆ ಹೆಚ್ಚಿನ ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದರು.

ಅದೇ ರೀತಿ ಕ್ಯಾನ್ಸರ್ ರೋಗಿಗಳು, ಅಂಗಾಂಗ ಕಸಿ ಮಾಡಿಸಿಕೊಂಡವರು, ದೀರ್ಘಕಾಲ ಸ್ಟೀರಾಯ್ಡ್ ಔಷಧ ಬಳಸುವವರು, ರೋಗನಿರೋಧಕ ಶಕ್ತಿ ಕಡಿಮೆಯಿರುವವರು, ವಯೋವೃದ್ಧರು ಹಾಗೂ ಐದು ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಕೂಡ ವಿಶೇಷ ಗಮನ ಹರಿಸಬೇಕಾದ ಗುಂಪುಗಳಾಗಿವೆ. ಜೈಲುಗಳು, ಆಶ್ರಮಗಳು ಮತ್ತು ಜನದಟ್ಟಣೆಯ ಪ್ರದೇಶಗಳಲ್ಲಿ ವಾಸಿಸುವವರು, ಕ್ಷಯರೋಗಿಗಳ ಸಂಪರ್ಕಕ್ಕೆ ಬರುವ ಆರೋಗ್ಯ ಸಿಬ್ಬಂದಿ, ಡಯಾಲಿಸಿಸ್ ಚಿಕಿತ್ಸೆಗೆ ಒಳಗಾಗುವವರು ಹಾಗೂ ಧೂಳುಪೂರಿತ ವಾತಾವರಣದಲ್ಲಿ ಕೆಲಸ ಮಾಡುವ ಕಾರ್ಮಿಕರು ಅಗತ್ಯವಿದ್ದಲ್ಲಿ ವೈದ್ಯಕೀಯ ಸಲಹೆಯಂತೆ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ವಿವರಿಸಿದರು.

ಕ್ಷಯರೋಗದ ಬಗ್ಗೆ ಅನಗತ್ಯ ಭಯ ಅಥವಾ ಸಾಮಾಜಿಕ ಕಳಂಕ ಹೊಂದದೆ, ರೋಗಲಕ್ಷಣಗಳಿರುವವರು ಮುಕ್ತವಾಗಿ ಆರೋಗ್ಯ ಸಿಬ್ಬಂದಿಯನ್ನು ಸಂಪರ್ಕಿಸಬೇಕು. ಮನೆಮನೆಗೆ ಭೇಟಿ ನೀಡುವ ಆರೋಗ್ಯ ಕಾರ್ಯಕರ್ತರಿಗೆ ಸಾರ್ವಜನಿಕರು ಸಹಕರಿಸಿ ಅಗತ್ಯ ಮಾಹಿತಿ ನೀಡಬೇಕು. ರೋಗವನ್ನು ಆರಂಭದಲ್ಲಿಯೇ ಗುರುತಿಸುವುದರಿಂದ ಸೋಂಕಿತರಿಗೆ ಸೂಕ್ತ ಚಿಕಿತ್ಸೆ ಒದಗಿಸುವುದರ ಜೊತೆಗೆ ಕುಟುಂಬದ ಇತರ ಸದಸ್ಯರ ಆರೋಗ್ಯವನ್ನೂ ರಕ್ಷಿಸಬಹುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ತಾಲೂಕು ಆರೋಗ್ಯಾಧಿಕಾರಿ ಡಾ. ಸತೀಶ್, ವೈದ್ಯಾಧಿಕಾರಿ ಗುಂಡಮ್ಮ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಜಿಲ್ಲಾ ಆರೋಗ್ಯ ಮೇಲ್ವಿಚಾರಕ ಪುಂಡಲೀಕ ಗಂಜಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಸರೋಜಾ ಕೆ., ಡಿಪಿಸಿ ಅಮರೇಶ್ ಕುರ್ಮಾ, ಪಿಪಿಎಂ ಮೋಹಿನ್ ಪಾಷಾ, ಡಿಪಿಎಸ್ ಪ್ರವೀಣಕುರ್ಮಾ, ಎಸ್‌ಟಿಎಸ್ ಅಮೀರ್, ಟಿಬಿಎಚ್‌ಪಿ ಯೂಸುಫ್ ಉದ್ದೀನ್, ಪ್ರದೀಪ್ ಕುರ್ಮಾ, ಎಸ್‌ಟಿಎಲ್‌ಎಸ್ ಅಬ್ದುಲ್ ನಬಿಸಾಬ್, ಫಾರ್ಮಸಿ ಅಧಿಕಾರಿ ಸೋಮಶೇಖರ್, ಎಲ್‌ಟಿಓ ರಮೇಶ್, ಎಂಟಿಎಸ್ ಸಂಧ್ಯಾ, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳಾದ ಅನಿತಾ, ಮೈನು ಬೇಗಂ, ರೇಣುಕಾ, ರೇಣುಕಾ ಡಿ., ಸುನೀತಾ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ನಿಶಾಂತ್, ಬಸವರಾಜ ಸೇರಿದಂತೆ ಆಶಾ ಕಾರ್ಯಕರ್ತೆಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ

ಬ್ಯಾಲೆಟ್ ಪೇಪರ್ ಫಲಿತಾಂಶ ಮುಂದಿಟ್ಟು ಪ್ರಧಾನಿ ಮೋದಿ ವ್ಯಂಗ್ಯ

ಸಂಬಂಧಿಸಿದಂತೆ ಈ ಚುನಾವಣೆಗಳನ್ನು ನಡೆಸಲಾಗಿತ್ತು.

ಕರ್ನಾಟಕದ ನಾಲ್ಕೂ ಸ್ಥಾನಗಳಲ್ಲಿ ಬಿಜೆಪಿ ಮತ್ತು ಜೆಡಿಎಸ್ ನೇತೃತ್ವದ ಎನ್‌ಡಿಎ ಮೈತ್ರಿಕೂಟ ಗೆಲುವು ಸಾಧಿಸಿದೆ. ಬಿಜೆಪಿ ಮೂರು ಸ್ಥಾನಗಳನ್ನು ಪಡೆದರೆ, ಮೈತ್ರಿ ಪಕ್ಷ ಜೆಡಿಎಸ್ ಒಂದು ಸ್ಥಾನದಲ್ಲಿ ಜಯಗಳಿಸಿದೆ. ಈ ಫಲಿತಾಂಶವು ರಾಜ್ಯದ ಆಡಳಿತಾರೂಢ ಕಾಂಗ್ರೆಸ್‌ಗೆ ರಾಜಕೀಯ ಹಿನ್ನಡೆಯಾಗಿದೆ.

ಉತ್ತರ ಪ್ರದೇಶದಲ್ಲಿ ಪ್ರಕಟವಾದ ಫಲಿತಾಂಶಗಳ ಪ್ರಕಾರ ಬಿಜೆಪಿ ನಾಲ್ಕು ಹಾಗೂ ಸಮಾಜವಾದಿ ಪಕ್ಷ ಎರಡು ಸ್ಥಾನಗಳಲ್ಲಿ ಗೆಲುವು ಸಾಧಿಸಿವೆ. ಉಳಿದ ಕ್ಷೇತ್ರಗಳ ಮತ ಎಣಿಕೆ ಪ್ರಕ್ರಿಯೆಯೂ ಮುಂದುವರಿದಿದೆ.

ವಿಧಾನ ಪರಿಷತ್ತಿನ ಶಿಕ್ಷಕರ ಮತ್ತು ಪದವೀಧರರ ಕ್ಷೇತ್ರಗಳ ಚುನಾವಣೆಯು ಸಾಮಾನ್ಯ ವಿಧಾನಸಭಾ ಚುನಾವಣೆಯಿಂದ ಭಿನ್ನವಾಗಿದೆ. ಈ ಕ್ಷೇತ್ರಗಳಲ್ಲಿ ಎಲ್ಲ ಸಾರ್ವಜನಿಕರು ಮತದಾನ ಮಾಡುವುದಿಲ್ಲ. ಬದಲಾಗಿ ಚುನಾವಣಾ ಆಯೋಗದ ನಿಯಮಗಳ ಪ್ರಕಾರ ನೋಂದಣಿಯಾಗಿರುವ ಅರ್ಹ ಶಿಕ್ಷಕರು ಹಾಗೂ ಪದವೀಧರರು ಮಾತ್ರ ಮತದಾನದ ಹಕ್ಕು ಹೊಂದಿರುತ್ತಾರೆ.

ಬ್ಯಾಲೆಟ್ ಪೇಪರ್ ಮೂಲಕ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಗೆಲುವು ದೊರೆಯದಿರುವುದನ್ನು ಪ್ರಧಾನಿ ಮೋದಿ ಪ್ರಸ್ತಾಪಿಸಿರುವುದು ಇವಿಎಂ ಬಳಕೆ ಕುರಿತ ರಾಜಕೀಯ ಚರ್ಚೆಗೆ ಮತ್ತೊಂದು ಆಯಾಮ ನೀಡಿದೆ.

ಮತ್ತೊಂದೆಡೆ, ಕಾಂಗ್ರೆಸ್ ನಾಯಕ ಪವನ್ ಖೇರಾ ಅವರು ಪ್ರಧಾನಿ ಮೋದಿ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ್ದು, ಬ್ಯಾಲೆಟ್ ಪೇಪರ್ ವ್ಯವಸ್ಥೆಯ ಬಗ್ಗೆ ಬಿಜೆಪಿಗೆ ವಿಶ್ವಾಸವಿದ್ದರೆ ಮುಂದಿನ ಲೋಕಸಭೆ ಹಾಗೂ ವಿಧಾನಸಭಾ ಚುನಾವಣೆಗಳನ್ನೂ ಅದೇ ಪದ್ಧತಿಯಲ್ಲಿ ನಡೆಸಲು ಮುಂದಾಗಲಿ ಎಂದು ಸವಾಲು ಹಾಕಿದ್ದಾರೆ.

ಒಟ್ಟಾರೆ, ನಾಲ್ಕು ರಾಜ್ಯಗಳ ವಿಧಾನ ಪರಿಷತ್ ಚುನಾವಣಾ ಫಲಿತಾಂಶಗಳು ಬಿಜೆಪಿ ಮತ್ತು ಕಾಂಗ್ರೆಸ್ ನಡುವೆ ಹೊಸ ರಾಜಕೀಯ ವಾಕ್ಸಮರಕ್ಕೆ ಕಾರಣವಾಗಿದ್ದು, ಬ್ಯಾಲೆಟ್ ಪೇಪರ್ ಹಾಗೂ ಇವಿಎಂ ಬಳಕೆಯ ಕುರಿತ ಚರ್ಚೆ ಮತ್ತೆ ಮುನ್ನೆಲೆಗೆ ಬಂದಿದೆ.

ಗಾಂಜಾ ಬೆಳೆ ಮೇಲೆ ಪೊಲೀಸರ ದಾಳಿ: ₹11.94 ಲಕ್ಷ ಮೌಲ್ಯದ ಗಾಂಜಾ ಜಪ್ತಿ, ಆರೋಪಿ ಬಂಧನ

ವಿರುದ್ಧ ಜಾಲಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಳ್ಳಲಾಗಿದೆ.

ಈ ಕಾರ್ಯಾಚರಣೆಯಲ್ಲಿ ದೇವದುರ್ಗ ಗ್ರಾಮೀಣ ವೃತ್ತದ ಸಿಪಿಐ ಪುಂಡಲೀಕ ಎಂ. ಪಟಾತರ, ಎಎಸ್‌ಐ ಸೈಯದ್ ಚಾಂದ್ ಪಾಶಾ, ಮುಖ್ಯಪೇದೆ ನರಸಪ್ಪ ಹಾಗೂ ಪೊಲೀಸ್ ಸಿಬ್ಬಂದಿಯಾದ ಪ್ರಕಾಶ, ಉಮೇಶ, ಮುರಿಗೆಪ್ಪ, ಸಂತೋಷ, ರಂಗಪ್ಪ, ಶ್ರೀಶೈಲ, ಅಯ್ಯಪ್ಪ, ಅಕ್ಕಮ್ಮ ಮತ್ತು ಗುರುರಾಜ ಭಾಗವಹಿಸಿದ್ದರು.

ಅಕ್ರಮ ಮಾದಕ ವಸ್ತುಗಳ ಬೆಳೆ ಹಾಗೂ ಮಾರಾಟ ಚಟುವಟಿಕೆಗಳ ವಿರುದ್ಧ ಪೊಲೀಸ್ ಇಲಾಖೆಯ ಕಾರ್ಯಾಚರಣೆಯ ಭಾಗವಾಗಿ ಈ ದಾಳಿ ನಡೆಸಲಾಗಿದೆ ಎಂದು ರಾಯಚೂರು ಜಿಲ್ಲಾ ಪೊಲೀಸ್ ಇಲಾಖೆ ತಿಳಿಸಿದೆ.

ವಿಧಾನ ಪರಿಷತ್ ಚುನಾವಣೆ ಫಲಿತಾಂಶ ಕಾಂಗ್ರೆಸ್ ಸರ್ಕಾರಕ್ಕೆ ಎಚ್ಚರಿಕೆಯ ಸಂದೇಶ: ಎನ್. ರವಿಕುಮಾರ್

ಹೆಚ್ಚಿನ ಆದ್ಯತೆ ನೀಡುವ ಬದಲು ಸರ್ಕಾರ ಸಮಸ್ಯೆಗಳನ್ನು ನಿರ್ಲಕ್ಷಿಸುತ್ತಿದೆ ಎಂದು ಟೀಕಿಸಿದರು.

ಶಿಕ್ಷಣ ಇಲಾಖೆಯಲ್ಲಿನ ಸಿಬ್ಬಂದಿ ಕೊರತೆ ಕುರಿತು ಪ್ರಸ್ತಾಪಿಸಿದ ಅವರು, ರಾಜ್ಯಾದ್ಯಂತ ಸುಮಾರು 71 ಸಾವಿರ ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಹುದ್ದೆಗಳು ಖಾಲಿ ಉಳಿದಿರುವುದರಿಂದ ಸರ್ಕಾರಿ ಶಾಲೆಗಳ ಶೈಕ್ಷಣಿಕ ಚಟುವಟಿಕೆಗಳ ಮೇಲೆ ಪರಿಣಾಮ ಬೀರುತ್ತಿದೆ. ಆದರೂ ನೇಮಕಾತಿ ಪ್ರಕ್ರಿಯೆಗೆ ಸರ್ಕಾರ ಮುಂದಾಗದಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಹೇಳಿದರು.

ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ಅಗತ್ಯವಿರುವ ಶೂ, ಸಾಕ್ಸ್ ಹಾಗೂ ಇತರ ಮೂಲ ಸೌಲಭ್ಯಗಳನ್ನು ಸಮಯಕ್ಕೆ ಸರಿಯಾಗಿ ಒದಗಿಸಬೇಕು. ಶಿಕ್ಷಕರನ್ನು ಬೋಧನೇತರ ಕೆಲಸಗಳಿಗೆ ನಿಯೋಜಿಸುವುದರಿಂದ ಪಾಠಪ್ರವಚನಗಳಿಗೆ ಅಡ್ಡಿಯಾಗುತ್ತಿದೆ. ಶಿಕ್ಷಣದ ಗುಣಮಟ್ಟ ಸುಧಾರಿಸಲು ಶಿಕ್ಷಕರ ಮೇಲಿನ ಹೆಚ್ಚುವರಿ ಕೆಲಸದ ಒತ್ತಡವನ್ನು ಕಡಿಮೆ ಮಾಡುವುದು ಅಗತ್ಯವಾಗಿದೆ ಎಂದು ತಿಳಿಸಿದರು.

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣದ ಜೊತೆಗೆ ಕಾಲೇಜುಗಳು ಹಾಗೂ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಯ ಖಾಲಿ ಹುದ್ದೆಗಳನ್ನು ಭರ್ತಿ ಮಾಡಬೇಕು. ಹಿಂದಿ, ಉರ್ದು, ತಮಿಳು ಮತ್ತು ತೆಲುಗು ಭಾಷಾ ಶಿಕ್ಷಕರ ನೇಮಕಾತಿಗೆ ಸಂಬಂಧಿಸಿದ ಸಮಸ್ಯೆಗಳಿಗೂ ಸರ್ಕಾರ ಸ್ಪಷ್ಟ ಪರಿಹಾರ ಕಂಡುಕೊಳ್ಳಬೇಕು ಎಂದು ಒತ್ತಾಯಿಸಿದರು.

ರಾಜ್ಯದಲ್ಲಿ ಹೊಸ ಕೈಗಾರಿಕೆಗಳ ಸ್ಥಾಪನೆಗೆ ಪೂರಕ ವಾತಾವರಣ ನಿರ್ಮಿಸುವಲ್ಲಿ ಸರ್ಕಾರ ವಿಫಲವಾಗಿದೆ. ಕೆಲವು ಕೈಗಾರಿಕೆಗಳು ಹಾಗೂ ಕಂಪನಿಗಳು ಬೇರೆ ರಾಜ್ಯಗಳತ್ತ ಮುಖ ಮಾಡುತ್ತಿರುವುದರಿಂದ ಉದ್ಯೋಗಾವಕಾಶಗಳ ಮೇಲೆ ಪ್ರತಿಕೂಲ ಪರಿಣಾಮ ಬೀರುವ ಆತಂಕ ಎದುರಾಗಿದೆ. ಯುವಜನರಿಗೆ ಉದ್ಯೋಗ ಸೃಷ್ಟಿಸುವ ನಿಟ್ಟಿನಲ್ಲಿ ಪರಿಣಾಮಕಾರಿ ಯೋಜನೆಗಳನ್ನು ರೂಪಿಸಬೇಕಾದ ಸರ್ಕಾರ, ತನ್ನ ವೈಫಲ್ಯಗಳನ್ನು ಮರೆಮಾಚಲು ವಿರೋಧ ಪಕ್ಷಗಳ ವಿರುದ್ಧ ಆರೋಪ ಮಾಡುತ್ತಿದೆ ಎಂದು ದೂರಿದರು.

ಚುನಾವಣೆಯಲ್ಲಿ ಗೆಲುವು ಸಾಧಿಸಿರುವ ನಾಲ್ವರು ಅಭ್ಯರ್ಥಿಗಳಲ್ಲಿ ಮೂವರು ಲಿಂಗಾಯತ ಸಮುದಾಯಕ್ಕೆ ಹಾಗೂ ಒಬ್ಬರು ಒಕ್ಕಲಿಗ ಸಮುದಾಯಕ್ಕೆ ಸೇರಿದವರಾಗಿದ್ದಾರೆ. ಆದರೆ ಅವರ ಗೆಲುವನ್ನು ನಿರ್ದಿಷ್ಟ ಸಮುದಾಯದ ಮತಗಳಿಗೆ ಮಾತ್ರ ಸೀಮಿತಗೊಳಿಸಿ ನೋಡುವುದು ಸರಿಯಲ್ಲ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳು ಸೇರಿದಂತೆ ವಿವಿಧ ಸಮುದಾಯಗಳ ಮತದಾರರು ಮೈತ್ರಿಕೂಟದ ಅಭ್ಯರ್ಥಿಗಳನ್ನು ಬೆಂಬಲಿಸಿದ್ದಾರೆ. ಇದು ಸರ್ಕಾರದ ವಿರುದ್ಧ ವ್ಯಾಪಕ ಅಸಮಾಧಾನವಿದೆ ಎಂಬುದನ್ನು ತೋರಿಸುತ್ತದೆ ಎಂದು ಪ್ರತಿಪಾದಿಸಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗಾಗಿ ಮೀಸಲಿಟ್ಟಿರುವ ಉಪಯೋಜನೆಗಳ ಅನುದಾನ ಬಳಕೆಯಲ್ಲಿಯೂ ಸರ್ಕಾರದ ನಿಲುವು ಪ್ರಶ್ನಾರ್ಹವಾಗಿದೆ. ಮೀಸಲಾತಿ ಪ್ರಮಾಣ ಹೆಚ್ಚಳಕ್ಕೆ ಸಂಬಂಧಿಸಿದ ನ್ಯಾಯಾಂಗ ಪ್ರಕ್ರಿಯೆಯಲ್ಲಿ ಸರ್ಕಾರ ಸಮರ್ಪಕವಾಗಿ ತನ್ನ ವಾದ ಮಂಡಿಸಿಲ್ಲ. ಸಾಮಾಜಿಕ ನ್ಯಾಯದ ಬಗ್ಗೆ ಮಾತನಾಡುವ ಸರ್ಕಾರ, ಅದಕ್ಕೆ ಪೂರಕವಾದ ಕ್ರಮಗಳನ್ನು ಕೈಗೊಳ್ಳುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿದರು.

ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಕುರಿತು ಪ್ರತಿಕ್ರಿಯಿಸಿದ ಅವರು, ಪಾರದರ್ಶಕ ಹಾಗೂ ನ್ಯಾಯಸಮ್ಮತ ಚುನಾವಣೆಗೆ ದೋಷರಹಿತ ಮತದಾರರ ಪಟ್ಟಿ ಅತ್ಯಗತ್ಯವಾಗಿದೆ. ಮೃತಪಟ್ಟವರ ಹೆಸರುಗಳು ಪಟ್ಟಿಯಲ್ಲಿ ಮುಂದುವರಿಯುವುದು, ನಕಲಿ ನೋಂದಣಿ ಹಾಗೂ ಒಬ್ಬರ ಹೆಸರಿನಲ್ಲಿ ಒಂದಕ್ಕಿಂತ ಹೆಚ್ಚು ನೋಂದಣಿಗಳಿರುವ ಪ್ರಕರಣಗಳನ್ನು ಪರಿಶೀಲಿಸಿ ಸರಿಪಡಿಸಬೇಕು. ಅರ್ಹ ಮತದಾರರ ಹಕ್ಕುಗಳಿಗೆ ಧಕ್ಕೆಯಾಗದಂತೆ ಮತದಾರರ ಪಟ್ಟಿಯ ಶುದ್ಧೀಕರಣ ನಡೆಯಬೇಕು ಎಂದು ಅಭಿಪ್ರಾಯಪಟ್ಟರು.

ನವೆಂಬರ್ 2ರಿಂದ 6ರವರೆಗೆ ಕಲಬುರಗಿ, ಕೋಲಾರ, ಮೈಸೂರು, ಬಳ್ಳಾರಿ, ಕೊಪ್ಪಳ, ಮಂಗಳೂರು ಮತ್ತು ಶಿವಮೊಗ್ಗ ಸೇರಿದಂತೆ ರಾಜ್ಯದ ವಿವಿಧ ಭಾಗಗಳಲ್ಲಿ ಪ್ರವಾಸ ಕೈಗೊಳ್ಳಲಾಗುವುದು. ಈ ಸಂದರ್ಭದಲ್ಲಿ 'ಪ್ರಜಾಪ್ರಭುತ್ವವನ್ನು ಉಳಿಸಿ, ಅರಾಜಕತೆಯನ್ನು ಅಳಿಸಿ' ಎಂಬ ಘೋಷವಾಕ್ಯದಡಿ ಜನಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಿ, ರಾಜ್ಯದ ಪ್ರಸ್ತುತ ರಾಜಕೀಯ ಬೆಳವಣಿಗೆಗಳು ಹಾಗೂ ಆಡಳಿತದ ವೈಫಲ್ಯಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಲಾಗುವುದು ಎಂದು ತಿಳಿಸಿದರು.

ರಾಜ್ಯ ಸರ್ಕಾರ ಚುನಾವಣಾ ಫಲಿತಾಂಶದಿಂದ ಪಾಠ ಕಲಿತು ಆಡಳಿತದಲ್ಲಿ ಅಗತ್ಯ ಬದಲಾವಣೆಗಳನ್ನು ತರಬೇಕು. ರೈತರಿಗೆ ಬರ ಪರಿಹಾರ ವಿತರಣೆ, ಶಿಕ್ಷಕರ ನೇಮಕಾತಿ, ಯುವಜನರಿಗೆ ಉದ್ಯೋಗಾವಕಾಶಗಳ ಸೃಷ್ಟಿ ಹಾಗೂ ಅಭಿವೃದ್ಧಿ ಯೋಜನೆಗಳ ಅನುಷ್ಠಾನಕ್ಕೆ ಆದ್ಯತೆ ನೀಡಬೇಕು. ಇಲ್ಲದಿದ್ದರೆ ಮುಂಬರುವ ಚುನಾವಣೆಗಳಲ್ಲಿ ಮತದಾರರು ಮತ್ತಷ್ಟು ಸ್ಪಷ್ಟವಾದ ತೀರ್ಪು ನೀಡಲಿದ್ದಾರೆ ಎಂದು ಎಚ್ಚರಿಸಿದರು.

ಮುಂದಿನ 14 ತಿಂಗಳಲ್ಲಿ ನಡೆಯಲಿರುವ ಚುನಾವಣೆಗಳು ರಾಜ್ಯ ರಾಜಕೀಯದ ದಿಕ್ಕನ್ನು ನಿರ್ಧರಿಸಲಿವೆ. ಕಾಂಗ್ರೆಸ್ ಸರ್ಕಾರದ ವಿರುದ್ಧ ಜನರಲ್ಲಿ ಅಸಮಾಧಾನ ಹೆಚ್ಚುತ್ತಿದ್ದು, ಮುಂದಿನ ದಿನಗಳಲ್ಲಿ ಕರ್ನಾಟಕದಲ್ಲಿ ಬಿಜೆಪಿಜೆಡಿಎಸ್ ಮೈತ್ರಿಕೂಟ ಅಧಿಕಾರಕ್ಕೆ ಬರಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ವಿಧಾನ ಪರಿಷತ್ತಿನ ಮಾಜಿ ಸದಸ್ಯ ಎನ್. ಶಂಕ್ರಪ್ಪ, ಬಿಜೆಪಿ ರಾಜ್ಯ ಕಾರ್ಯಕಾರಿಣಿ ಸದಸ್ಯರಾದ ಕೆ.ಎಂ. ಪಾಟೀಲ್, ರಾಜಕುಮಾರ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ರವೀಂದ್ರ ಜಲ್ದಾರ್, ಸಂತೋಷ ರಾಜಗೂರು, ಜಂಬಣ್ಣ ನೀಲೋಗಲ್, ಜಿಲ್ಲಾ ವಕ್ತಾರ ಸಿದ್ದನಗೌಡ ನೆಲಹಾಳ್ ಸೇರಿದಂತೆ ಪಕ್ಷದ ವಿವಿಧ ಹಂತದ ಪದಾಧಿಕಾರಿಗಳು ಹಾಗೂ ಮುಖಂಡರು ಉಪಸ್ಥಿತರಿದ್ದರು.

11,513 ವೃದ್ಧಾಪ್ಯ ವೇತನ ಫಲಾನುಭವಿಗಳ ಪರಿಶೀಲನೆ ಪೂರ್ಣ: ತಹಶೀಲ್ದಾರ್ ಭೀಮರಾಯ ರಾಮಸಮುದ್ರ



ಮಾನ್ವಿ: ಆದಾಯ ಮಿತಿಗೆ ಸಂಬಂಧಿಸಿದ ಕಾರಣಗಳಿಂದ ಕಳೆದ ನಾಲ್ಕು ತಿಂಗಳಿಂದ ಸ್ಥಗಿತಗೊಂಡಿರುವ ವೃದ್ಧಾಪ್ಯ ವೇತನವನ್ನು ಅರ್ಹ ಫಲಾನುಭವಿಗಳಿಗೆ ಪುನರಾರಂಭಿಸುವ ನಿಟ್ಟಿನಲ್ಲಿ ಪರಿಶೀಲನಾ ಪ್ರಕ್ರಿಯೆ ಕೈಗೊಳ್ಳಲಾಗಿದ್ದು, ಮಾನ್ವಿ ತಾಲೂಕಿನಲ್ಲಿ ಇದುವರೆಗೆ 11,513 ಫಲಾನುಭವಿಗಳ ದಾಖಲೆಗಳ ಪರಿಶೀಲನೆ ಪೂರ್ಣಗೊಂಡಿದೆ ಎಂದು ತಹಶೀಲ್ದಾರ್ ಭೀಮರಾಯ ರಾಮಸಮುದ್ರ ತಿಳಿಸಿದರು.

ವೃದ್ಧಾಪ್ಯ ವೇತನ ಪಡೆಯುವ ಫಲಾನುಭವಿಗಳ ವಾರ್ಷಿಕ ಆದಾಯ ₹30 ಸಾವಿರಕ್ಕಿಂತ ಹೆಚ್ಚಿರುವ ಕಾರಣದಿಂದ ಹಲವರ ಪಿಂಚಣಿ ಪಾವತಿ ಸ್ಥಗಿತಗೊಂಡಿತ್ತು. ಇದೀಗ ಆದಾಯ ಅರ್ಹತಾ ಮಿತಿಯನ್ನು ₹1.20 ಲಕ್ಷಕ್ಕೆ ಹೆಚ್ಚಿಸಿರುವ ಹಿನ್ನೆಲೆಯಲ್ಲಿ ಈ ವ್ಯಾಪ್ತಿಗೆ ಒಳಪಡುವ ಅರ್ಹ ಫಲಾನುಭವಿಗಳಿಗೂ ವೃದ್ಧಾಪ್ಯ ವೇತನ ದೊರೆಯಲು ಅವಕಾಶ ಕಲ್ಪಿಸಲಾಗಿದೆ ಎಂದು ಅವರು ವಿವರಿಸಿದರು.

ಮಾನ್ವಿ ತಾಲೂಕಿನಲ್ಲಿ ಒಟ್ಟು 13,333 ಫಲಾನುಭವಿಗಳ ಪರಿಶೀಲನೆ ಕೈಗೊಳ್ಳಬೇಕಿದ್ದು, ಈ ಪೈಕಿ 11,513 ಫಲಾನುಭವಿಗಳ ಪರಿಶೀಲನಾ ಕಾರ್ಯ ಪೂರ್ಣಗೊಂಡಿದೆ. ಉಳಿದ 1,820 ಫಲಾನುಭವಿಗಳ ದಾಖಲೆಗಳ ಪರಿಶೀಲನೆ ಬಾಕಿ ಇದ್ದು, ಅದನ್ನು ಶೀಘ್ರ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಈಗಾಗಲೇ ಪರಿಶೀಲನೆ ಪೂರ್ಣಗೊಂಡಿರುವ ಫಲಾನುಭವಿಗಳ ಮಾಹಿತಿಯನ್ನು ಸಂಬಂಧಪಟ್ಟ ಇಲಾಖೆಯ ಅನುಮೋದನೆಗಾಗಿ ಸಿದ್ಧಪಡಿಸಲಾಗಿದೆ. ಪರಿಶೀಲನಾ ವರದಿಗೆ ಅನುಮೋದನೆ ದೊರೆತ ತಕ್ಷಣ ಅರ್ಹ ಫಲಾನುಭವಿಗಳ ವೃದ್ಧಾಪ್ಯ ವೇತನದ ಮೊತ್ತವನ್ನು ನೇರವಾಗಿ ಅವರ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಲಾಗುವುದು ಎಂದು ತಹಶೀಲ್ದಾರ್ ಸ್ಪಷ್ಟಪಡಿಸಿದರು.

ಕಳೆದ ನಾಲ್ಕು ತಿಂಗಳಿಂದ ಪಿಂಚಣಿ ಸ್ಥಗಿತಗೊಂಡಿರುವುದರಿಂದ ವೃದ್ಧರು ಆರ್ಥಿಕ ತೊಂದರೆ ಎದುರಿಸುತ್ತಿದ್ದಾರೆ. ವಿಶೇಷವಾಗಿ ದಿನನಿತ್ಯದ ಜೀವನ ನಿರ್ವಹಣೆ, ಔಷಧೋಪಚಾರ ಹಾಗೂ ಇತರ ಅಗತ್ಯ ಖರ್ಚುಗಳಿಗೆ ಪಿಂಚಣಿ ಹಣವನ್ನೇ ಅವಲಂಬಿಸಿರುವ ಹಿರಿಯ ನಾಗರಿಕರಿಗೆ ತೊಂದರೆಯಾಗಿದೆ. ಈ ಹಿನ್ನೆಲೆಯಲ್ಲಿ ಪರಿಶೀಲನೆ ಮತ್ತು ಅನುಮೋದನೆ ಪ್ರಕ್ರಿಯೆ ಪೂರ್ಣಗೊಂಡು ಅರ್ಹ ಫಲಾನುಭವಿಗಳಿಗೆ ಶೀಘ್ರವೇ ವೇತನ ಪಾವತಿಯಾಗುವ ನಿರೀಕ್ಷೆಯಿದೆ.

ನಶಾಮುಕ್ತ ಭಾರತ ಅಭಿಯಾನದ ನುಕ್ಕಡ್ ನಾಟಕ ಸ್ಪರ್ಧೆಯಲ್ಲಿ ಸೀತಾ ಸುಬ್ಬರಾಜು ಸ್ಮಾರಕ ಕಾಲೇಜಿಗೆ ಪ್ರಥಮ ಸ್ಥಾನ



ರಾಯಚೂರು: ಜಿಲ್ಲಾ ಮಟ್ಟದ ನಶಾಮುಕ್ತ ಭಾರತ ಅಭಿಯಾನದ ಬೀದಿನಾಟಕ (ನುಕ್ಕಡ್ ನಾಟಕ) ಸ್ಪರ್ಧೆಯಲ್ಲಿ ನಗರದ ಸೀತಾ ಸುಬ್ಬರಾಜು ಸ್ಮಾರಕ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಪ್ರಥಮ ಸ್ಥಾನ ಗಳಿಸಿ ರಾಜ್ಯಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ. ಇದೇ ವೇಳೆ ಜಿಲ್ಲಾ ಮಟ್ಟದ ಯುವಜನೋತ್ಸವದ ಜಾನಪದ ನೃತ್ಯ ಸ್ಪರ್ಧೆಯಲ್ಲಿಯೂ ದ್ವಿತೀಯ ಸ್ಥಾನ ಪಡೆಯುವ ಮೂಲಕ ಗಮನಾರ್ಹ ಸಾಧನೆ ಮಾಡಿದ್ದಾರೆ.

ಜಿಲ್ಲಾ ಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ನಗರದ ವೇದಾಂತ್ ಕಾಲೇಜಿನಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ ಸೀತಾ ಸುಬ್ಬರಾಜು ಸ್ಮಾರಕ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸುವ ಬೀದಿನಾಟಕವನ್ನು ಪ್ರದರ್ಶಿಸಿದರು.

ಮಾದಕ ವ್ಯಸನದಿಂದ ಯುವಜನರ ಆರೋಗ್ಯ, ಶಿಕ್ಷಣ ಹಾಗೂ ಭವಿಷ್ಯದ ಮೇಲೆ ಉಂಟಾಗುವ ದುಷ್ಪರಿಣಾಮಗಳು, ಕುಟುಂಬಗಳು ಎದುರಿಸುವ ಸಂಕಷ್ಟಗಳು ಮತ್ತು ಸಮಾಜದ ಮೇಲಾಗುವ ಪರಿಣಾಮಗಳನ್ನು ವಿದ್ಯಾರ್ಥಿಗಳು ನಾಟಕದ ಮೂಲಕ ಪರಿಣಾಮಕಾರಿಯಾಗಿ ಬಿಂಬಿಸಿದರು.

ವ್ಯಸನಮುಕ್ತ ಜೀವನದ ಮಹತ್ವವನ್ನು ಸಾರುವ ಸಂಭಾಷಣೆಗಳು, ವಿದ್ಯಾರ್ಥಿಗಳ ಅಭಿನಯ ಹಾಗೂ ಸಾಮಾಜಿಕ ಕಳಕಳಿಯ ಸಂದೇಶವು ಪ್ರೇಕ್ಷಕರ ಗಮನ ಸೆಳೆಯಿತು. ವಿದ್ಯಾರ್ಥಿಗಳ ಪ್ರದರ್ಶನಕ್ಕೆ ತೀರ್ಪುಗಾರರಿಂದ ಮೆಚ್ಚುಗೆ ವ್ಯಕ್ತವಾಗಿದ್ದು, ಪ್ರಥಮ ಸ್ಥಾನ ಲಭಿಸಿತು. ಇದರೊಂದಿಗೆ ಕಾಲೇಜಿನ ತಂಡ ರಾಜ್ಯಮಟ್ಟದ ನುಕ್ಕಡ್ ನಾಟಕ ಸ್ಪರ್ಧೆಗೆ ಅರ್ಹತೆ ಪಡೆದುಕೊಂಡಿದೆ.

ಇದೇ ಸಂದರ್ಭದಲ್ಲಿ ನಡೆದ ಜಿಲ್ಲಾ ಮಟ್ಟದ ಯುವಜನೋತ್ಸವದ ಜಾನಪದ ನೃತ್ಯ ಸ್ಪರ್ಧೆಯಲ್ಲಿ ಕಾಲೇಜಿನ ವಿದ್ಯಾರ್ಥಿಗಳು ಕರ್ನಾಟಕದ ಜನಪದ ಕಲೆ, ಸಂಸ್ಕೃತಿ ಹಾಗೂ ಪರಂಪರೆಯನ್ನು ಪ್ರತಿಬಿಂಬಿಸುವ ನೃತ್ಯ ಪ್ರದರ್ಶಿಸಿ ದ್ವಿತೀಯ ಸ್ಥಾನ ಪಡೆದುಕೊಂಡರು.

ನೃತ್ಯದಲ್ಲಿ ವಿದ್ಯಾರ್ಥಿಗಳ ಸಮನ್ವಯ, ಕಲಾತ್ಮಕ ಅಭಿವ್ಯಕ್ತಿ ಹಾಗೂ ಪ್ರದರ್ಶನ ಕೌಶಲ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಯಿತು. ಒಂದೇ ವೇದಿಕೆಯಲ್ಲಿ ನಾಟಕ ಮತ್ತು ಜಾನಪದ ನೃತ್ಯ ಸ್ಪರ್ಧೆಗಳಲ್ಲಿ ಪ್ರಶಸ್ತಿ ಗಳಿಸಿರುವುದು ಕಾಲೇಜಿನ ಸಾಂಸ್ಕೃತಿಕ ಚಟುವಟಿಕೆಗಳಿಗೆ ಮತ್ತಷ್ಟು ಪ್ರೋತ್ಸಾಹ ನೀಡಿದೆ.

ವಿದ್ಯಾರ್ಥಿಗಳ ಸಾಧನೆಗೆ ಮಹಾವಿದ್ಯಾಲಯದ ಆಡಳಿತ ಮಂಡಳಿ, ಪ್ರಾಚಾರ್ಯ ಪ್ರೊ. ಬಸವಂತರಾಯ ಪಾಟೀಲ, ರಾಜ್ಯಶಾಸ್ತ್ರ ಉಪನ್ಯಾಸಕಿ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳ ಅಧಿಕಾರಿ ಸ್ನೇಹ ಕುಲಕರ್ಣಿ ಮತ್ತು ರಾಷ್ಟ್ರೀಯ ಸೇವಾ ಯೋಜನೆಯ ಅಧಿಕಾರಿ ಡಾ. ಶಿವಪುತ್ರಪ್ಪ ಕಂಬಳಿ ಅಭಿನಂದನೆ ಸಲ್ಲಿಸಿದ್ದಾರೆ.

ವಿದ್ಯಾರ್ಥಿಗಳ ಪರಿಶ್ರಮ, ಶಿಸ್ತು, ಸೃಜನಶೀಲತೆ ಹಾಗೂ ಸಂಘಟಿತ ಪ್ರಯತ್ನದಿಂದ ಈ ಸಾಧನೆ ಸಾಧ್ಯವಾಗಿದೆ. ಪಠ್ಯ ಚಟುವಟಿಕೆಗಳ ಜೊತೆಗೆ ಸಾಮಾಜಿಕ ಜಾಗೃತಿ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ವಿದ್ಯಾರ್ಥಿಗಳು ಸಕ್ರಿಯವಾಗಿ ಭಾಗವಹಿಸುತ್ತಿರುವುದು ಸಂತಸದ ಸಂಗತಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ರಾಜ್ಯಮಟ್ಟದ ನುಕ್ಕಡ್ ನಾಟಕ ಸ್ಪರ್ಧೆಯಲ್ಲಿಯೂ ವಿದ್ಯಾರ್ಥಿಗಳು ಉತ್ತಮ ಪ್ರದರ್ಶನ ನೀಡಿ ಮಹಾವಿದ್ಯಾಲಯಕ್ಕೆ ಮತ್ತಷ್ಟು ಕೀರ್ತಿ ತರಲಿ ಎಂದು ಶುಭ ಹಾರೈಸಿದ್ದಾರೆ.

ಸರ್ಕಾರಿ ಭೂಮಿಯನ್ನು ಮರಳಿ ಸರ್ಕಾರದ ಹೆಸರಿಗೆ ದಾಖಲಿಸಲು ಕ್ರಮ ಕೈಗೊಳ್ಳಿ: ಮಾಹಿತಿ ಆಯುಕ್ತ ಬಿ. ವೆಂಕಟಸಿಂಗ್ ಆದೇಶ



ರಾಯಚೂರು, ಅ.28: ಸರ್ಕಾರದ ಯಾವುದೇ ಮಂಜೂರಾತಿ ಆದೇಶ ಅಥವಾ ಅಧಿಕೃತ ದಾಖಲೆಗಳಿಲ್ಲದೆ ಖಾಸಗಿ ವ್ಯಕ್ತಿಯ ಹೆಸರಿಗೆ ನೋಂದಣಿಯಾಗಿರುವ ಸರ್ಕಾರಿ ಭೂಮಿಯನ್ನು ಮರಳಿ ಸರ್ಕಾರದ ಹೆಸರಿಗೆ ದಾಖಲಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತ ಬಿ. ವೆಂಕಟಸಿಂಗ್ ಅವರು ಕಲಬುರಗಿ ಉಪವಿಭಾಗದ ಸಹಾಯಕ ಆಯುಕ್ತರಿಗೆ ಆದೇಶಿಸಿದ್ದಾರೆ.

ಕಲಬುರಗಿ ತಾಲೂಕಿನ ಕಾಳನೂರು ಮತ್ತು ಜಾಪೂರ ಗ್ರಾಮಗಳ ವ್ಯಾಪ್ತಿಯಲ್ಲಿ ಒಂದೇ ಜಮೀನು ಎರಡು ಪ್ರತ್ಯೇಕ ಸರ್ವೆ ನಂಬರ್‌ಗಳಲ್ಲಿ ದಾಖಲಾಗಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಸುಮಾರು 13 ವರ್ಷಗಳ ಕಾಲ ನಡೆದ ವಿಚಾರಣೆಯ ಬಳಿಕ ಮಾಹಿತಿ ಆಯೋಗವು ಈ ಆದೇಶ ಹೊರಡಿಸಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಮಾಹಿತಿ ಆಯೋಗದ ಬೆಂಗಳೂರು ಹಾಗೂ ಕಲಬುರಗಿ ಪೀಠಗಳಲ್ಲಿ ಒಟ್ಟು 30 ಬಾರಿ ವಿಚಾರಣೆ ನಡೆದಿದ್ದು, ಅಂತಿಮವಾಗಿ ಅಕ್ಟೋಬರ್ 15, 2026ರಂದು ವಿಚಾರಣೆ ನಡೆಸಿ ಮಹತ್ವದ ನಿರ್ದೇಶನಗಳನ್ನು ನೀಡುವ ಮೂಲಕ ಪ್ರಕರಣವನ್ನು ವಿಲೇವಾರಿ ಮಾಡಲಾಗಿದೆ.

ಕಲಬುರಗಿ ತಾಲೂಕಿನ ಕಾಳನೂರು ಗ್ರಾಮದ ಹನುಮಂತ ಎಂಬುವವರು ಒಂದೇ ಜಮೀನು ಎರಡು ಗ್ರಾಮಗಳ ಪ್ರತ್ಯೇಕ ಸರ್ವೆ ನಂಬರ್‌ಗಳಲ್ಲಿ ದಾಖಲಾಗಿರುವ ಕುರಿತು ಮಾಹಿತಿ ಕೋರಿ, ಜುಲೈ 27, 2013ರಂದು ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠಕ್ಕೆ ದ್ವಿತೀಯ ಮೇಲ್ಮನವಿ ಸಲ್ಲಿಸಿದ್ದರು.

ಜಾಪೂರ ಗ್ರಾಮದ ಸರ್ವೆ ನಂಬರ್ 62 ಹಾಗೂ ಕಾಳನೂರು ಗ್ರಾಮದ ಸರ್ವೆ ನಂಬರ್ 107ರಲ್ಲಿ ಕರದಾ ಶಂಕರಾವ್ ಅವರ ಹೆಸರಿನಲ್ಲಿ ದಾಖಲಾಗಿರುವ 70 ಎಕರೆ 7 ಗುಂಟೆ ಜಮೀನು ಒಂದೇ ಆಗಿದೆ ಎಂದು ಪ್ರಕರಣದಲ್ಲಿ ಉಲ್ಲೇಖಿಸಲಾಗಿದೆ.

ವಾಸ್ತವವಾಗಿ ಜಾಪೂರ ಗ್ರಾಮದ ಸರ್ವೆ ನಂಬರ್ 62ರಲ್ಲಿ ಪ್ರತ್ಯೇಕವಾಗಿ ಆ ಜಮೀನು ಅಸ್ತಿತ್ವದಲ್ಲಿಲ್ಲ. ಕಾಳನೂರು ಗ್ರಾಮದ ಸರ್ವೆ ನಂಬರ್ 107ರಲ್ಲಿರುವ 70 ಎಕರೆ 7 ಗುಂಟೆ ಜಮೀನು ಅದೇ ಭೂಮಿಯಾಗಿದೆ ಎಂದು ಭೂದಾಖಲೆಗಳ ಪರಿಶೀಲನೆಯಿಂದ ತಿಳಿದುಬಂದಿದೆ.

ಈ ಹಿನ್ನೆಲೆಯಲ್ಲಿ ಜಾಪೂರ ಗ್ರಾಮದ ಸರ್ವೆ ನಂಬರ್ 62ರಲ್ಲಿ ಸರ್ಕಾರಿ ಗೈರಾಣ ಜಮೀನು ಎಂದು ಇರುವ ದಾಖಲೆಯನ್ನು ರದ್ದುಗೊಳಿಸಬೇಕು. ಅಲ್ಲದೆ, ಕಾಳನೂರು ಗ್ರಾಮದ ಸರ್ವೆ ನಂಬರ್ 107ರಲ್ಲಿರುವ 70 ಎಕರೆ 7 ಗುಂಟೆ ಜಮೀನನ್ನು 1961ರಲ್ಲಿ ಕರದಾ ಶಂಕರಾವ್ ಅವರ ಹೆಸರಿಗೆ ದಾಖಲಿಸಿರುವ ನಮೂದನ್ನು ರದ್ದುಗೊಳಿಸಿ, ಸದರಿ ಜಮೀನನ್ನು ಸರ್ಕಾರದ ಹೆಸರಿಗೆ ದಾಖಲಿಸುವುದು ಸೂಕ್ತ ಎಂದು ಕಲಬುರಗಿ ಭೂದಾಖಲೆಗಳ ಉಪನಿರ್ದೇಶಕರು ವರದಿ ಸಲ್ಲಿಸಿದ್ದಾರೆ.

ಈ ವರದಿಯ ಆಧಾರದಲ್ಲಿ ಕಲಬುರಗಿ ತಹಶೀಲ್ದಾರ್ ಆನಂದ ಶೀಲ ಅವರು ಅಕ್ಟೋಬರ್ 9, 2026ರಂದು ಕಲಬುರಗಿ ಉಪವಿಭಾಗದ ಸಹಾಯಕ ಆಯುಕ್ತರಿಗೆ ಪತ್ರ ಬರೆದಿದ್ದಾರೆ. ಅಕ್ಟೋಬರ್ 15ರಂದು ಮಾಹಿತಿ ಆಯೋಗದ ವಿಚಾರಣೆಗೆ ಹಾಜರಾದ ಅವರು, ಸಹಾಯಕ ಆಯುಕ್ತರಿಗೆ ಬರೆದ ಪತ್ರದ ಪ್ರತಿಯನ್ನು ಆಯೋಗಕ್ಕೆ ಸಲ್ಲಿಸಿದ್ದಾರೆ.

ತಹಶೀಲ್ದಾರ್ ಸಲ್ಲಿಸಿದ ಪತ್ರ ಹಾಗೂ ಭೂದಾಖಲೆಗಳ ಉಪನಿರ್ದೇಶಕರ ವರದಿಯನ್ನು ಪರಿಶೀಲಿಸಿದ ಮಾಹಿತಿ ಆಯೋಗವು, ಪತ್ರದಲ್ಲಿ ಪ್ರಸ್ತಾಪಿಸಿರುವ ಅಂಶಗಳ ಆಧಾರದಲ್ಲಿ ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳುವಂತೆ ಕಲಬುರಗಿ ಉಪವಿಭಾಗದ ಸಹಾಯಕ ಆಯುಕ್ತೆ ರೀತಿಕಾ ವರ್ಮಾ ಅವರಿಗೆ ನಿರ್ದೇಶನ ನೀಡಿದೆ.

ಮಾಹಿತಿ ಹಕ್ಕು ಅಧಿನಿಯಮ2005ರ ಸೆಕ್ಷನ್ 18(3)ರಡಿ ಈ ನಿರ್ದೇಶನ ನೀಡಲಾಗಿದ್ದು, ಕೈಗೊಂಡ ಕ್ರಮಗಳ ಕುರಿತು 60 ದಿನಗಳೊಳಗೆ ಆಯೋಗಕ್ಕೆ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ.

ಅಲ್ಲದೆ, ಸಹಾಯಕ ಆಯುಕ್ತರು ಕೈಗೊಂಡ ಕ್ರಮಗಳ ಮಾಹಿತಿಯನ್ನು ಮೇಲ್ಮನವಿದಾರರಿಗೆ ಒದಗಿಸಬೇಕು. ಅವರಿಗೆ ನೀಡಿರುವ ಮಾಹಿತಿಯ ಪ್ರತಿ ಹಾಗೂ ಸ್ವೀಕೃತಿ ಪತ್ರವನ್ನು ಆಯೋಗಕ್ಕೆ ಸಲ್ಲಿಸುವಂತೆ ಕಲಬುರಗಿ ತಹಶೀಲ್ದಾರ್ ಆನಂದ ಶೀಲ ಅವರಿಗೆ ಆದೇಶಿಸಲಾಗಿದೆ.

ನಿಗದಿತ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ಮಾಹಿತಿ ಹಕ್ಕು ಅಧಿನಿಯಮ2005ರ ಸೆಕ್ಷನ್ 20(2)ರಡಿ ಕ್ರಮ ಕೈಗೊಳ್ಳುವ ಕುರಿತು ಆಯೋಗ ಎಚ್ಚರಿಕೆ ನೀಡಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಕಲಬುರಗಿ ಉಪವಿಭಾಗದ ಸಹಾಯಕ ಆಯುಕ್ತರು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲು ಕಲಬುರಗಿ ಜಿಲ್ಲಾಧಿಕಾರಿ, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರು, ಕಂದಾಯ ಇಲಾಖೆಯ ಆಯುಕ್ತರು ಹಾಗೂ ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಮಾಹಿತಿ ಹಕ್ಕು ಅಧಿನಿಯಮ 2005ರ ಸೆಕ್ಷನ್ 19(8)ರಡಿ ನಿರ್ದೇಶನ ನೀಡಲಾಗಿದೆ.

ಇದೇ ವೇಳೆ, ಸರ್ಕಾರಿ ಭೂಮಿಯ ದಾಖಲೆಗಳ ಕುರಿತು ಕೈಗೊಂಡ ಕ್ರಮಗಳ ಪಾಲನಾ ವರದಿಯನ್ನು ಆಯೋಗಕ್ಕೆ ಸಲ್ಲಿಸುವಂತೆಯೂ ಸಹಾಯಕ ಆಯುಕ್ತರಿಗೆ ಸೂಚಿಸಲಾಗಿದೆ.

ಸುಮಾರು 13 ವರ್ಷಗಳಿಂದ ವಿಚಾರಣೆಯಲ್ಲಿದ್ದ ಪ್ರಕರಣದಲ್ಲಿ ತಹಶೀಲ್ದಾರ್ ಸಲ್ಲಿಸಿದ ವರದಿ ಹಾಗೂ ಸಹಾಯಕ ಆಯುಕ್ತರಿಗೆ ಬರೆದ ಪತ್ರವನ್ನು ಪರಿಗಣಿಸಿ, ಅದರಂತೆ ಮುಂದಿನ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡುವ ಮೂಲಕ ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠವು ಪ್ರಕರಣವನ್ನು ವಿಲೇವಾರಿ ಮಾಡಿದೆ.

ಲಿಂಗಸುಗೂರು ವಿಧಾನಸಭಾ ಕ್ಷೇತ್ರದಲ್ಲಿ 2.25 ಲಕ್ಷ ಮತದಾರರು: ಅಂತಿಮ ಪಟ್ಟಿ ಪ್ರಕಟ



ಲಿಂಗಸುಗೂರು: ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ 2026ನೇ ಸಾಲಿನಲ್ಲಿ ಕೈಗೊಂಡ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಪೂರ್ಣಗೊಂಡಿದ್ದು, ಲಿಂಗಸುಗೂರು ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 2,25,916 ಮತದಾರರನ್ನು ಒಳಗೊಂಡ ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದೆ ಎಂದು ಮತದಾರರ ನೋಂದಣಾಧಿಕಾರಿ ಹಾಗೂ ಸಹಾಯಕ ಆಯುಕ್ತ ನಾಗೇಂದ್ರ ಬಾಬು ಕುಮಾರ್ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಕ್ಷೇತ್ರದಲ್ಲಿ ಒಟ್ಟು 294 ಮತಗಟ್ಟೆಗಳಿದ್ದು, 1,12,841 ಪುರುಷ ಮತದಾರರು, 1,13,064 ಮಹಿಳಾ ಮತದಾರರು ಹಾಗೂ 11 ತೃತೀಯ ಲಿಂಗದ ಮತದಾರರು ಸೇರಿದಂತೆ ಒಟ್ಟು 2,25,916 ಮತದಾರರು ಅಂತಿಮ ಪಟ್ಟಿಯಲ್ಲಿ ನೋಂದಣಿಯಾಗಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಹೊಸದಾಗಿ 3,250 ಯುವ ಮತದಾರರು ನೋಂದಣಿಯಾಗಿರುವುದಾಗಿ ತಿಳಿಸಿದ್ದಾರೆ.

2025ರಲ್ಲಿ ಲಿಂಗಸುಗೂರು ವಿಧಾನಸಭಾ ಕ್ಷೇತ್ರದಲ್ಲಿ 285 ಮತಗಟ್ಟೆಗಳಿದ್ದು, ಒಟ್ಟು 2,73,705 ಮತದಾರರು ನೋಂದಣಿಯಾಗಿದ್ದರು. 2026ರ ವಿಶೇಷ ತೀವ್ರ ಪರಿಷ್ಕರಣೆ ಅಂಗವಾಗಿ ಚುನಾವಣಾ ಸಿಬ್ಬಂದಿ ಮನೆಮನೆಗೆ ಭೇಟಿ ನೀಡಿ ಮತದಾರರ ವಿವರಗಳನ್ನು ಪರಿಶೀಲಿಸಿದ ನಂತರ ಪ್ರಕಟಿಸಲಾದ ಕರಡು ಮತದಾರರ ಪಟ್ಟಿಯಲ್ಲಿ 2,22,666 ಮತದಾರರಿದ್ದರು.

ಬಳಿಕ ಮತದಾರರ ಪಟ್ಟಿಗೆ ಸಂಬಂಧಿಸಿದ ಪರಿಷ್ಕರಣೆ ಪ್ರಕ್ರಿಯೆ ಪೂರ್ಣಗೊಳಿಸಲಾಗಿದ್ದು, ಅಂತಿಮ ಪಟ್ಟಿಯಲ್ಲಿ ಮತದಾರರ ಸಂಖ್ಯೆ 2,25,916ಕ್ಕೆ ಏರಿಕೆಯಾಗಿದೆ. ಕರಡು ಪಟ್ಟಿಗೆ ಹೋಲಿಸಿದರೆ ಅಂತಿಮ ಪಟ್ಟಿಯಲ್ಲಿ 3,250 ಮತದಾರರು ಹೆಚ್ಚಾಗಿದ್ದಾರೆ.

ಇನ್ನು ಮತಗಟ್ಟೆಗಳ ಪುನರ್‌ವಿಂಗಡಣೆಯಲ್ಲಿಯೂ ಬದಲಾವಣೆ ಮಾಡಲಾಗಿದೆ. ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಯಂತೆ 1,200ಕ್ಕಿಂತ ಹೆಚ್ಚು ಮತದಾರರಿರುವ ಅಥವಾ ಮತದಾರರು ಎರಡು ಕಿಲೋಮೀಟರ್‌ಗಿಂತ ಹೆಚ್ಚಿನ ದೂರ ಕ್ರಮಿಸಬೇಕಾದ ಪರಿಸ್ಥಿತಿಯಿರುವ ಮತಗಟ್ಟೆಗಳ ವ್ಯಾಪ್ತಿಯಲ್ಲಿ ಹೊಸ ಮತಗಟ್ಟೆಗಳನ್ನು ಸ್ಥಾಪಿಸಲು ಸೂಚಿಸಲಾಗಿತ್ತು.

ಈ ಹಿನ್ನೆಲೆಯಲ್ಲಿ ಲಿಂಗಸುಗೂರು ವಿಧಾನಸಭಾ ಕ್ಷೇತ್ರದಲ್ಲಿ ಹೆಚ್ಚುವರಿಯಾಗಿ ಒಂಬತ್ತು ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಈ ಹಿಂದೆ ಇದ್ದ 285 ಮತಗಟ್ಟೆಗಳ ಸಂಖ್ಯೆ ಈಗ 294ಕ್ಕೆ ಏರಿಕೆಯಾಗಿದೆ ಎಂದು ನಾಗೇಂದ್ರ ಬಾಬು ಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಲ್ಕಾವಟಗಿ ಗ್ರಾಪಂ ಪಿಡಿಒ ಅಮಾನತಿಗೆ ನಮ್ಮ ಕರ್ನಾಟಕ ರಕ್ಷಣಾ ವೇದಿಕೆ ಆಗ್ರಹ



ಲಿಂಗಸುಗೂರು: ತಾಲೂಕಿನ ಹಲ್ಕಾವಟಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಂಕನಾಳ ಹಾಗೂ ಉಪನಾಳ ಗ್ರಾಮಗಳಿಗೆ ಗ್ರಾಮೀಣ ಉದ್ಯೋಗ ಯೋಜನೆಯಡಿ ಕಾಮಗಾರಿಗಳನ್ನು ಮಂಜೂರು ಮಾಡುವಲ್ಲಿ ಅಧಿಕಾರಿಗಳು ತಾರತಮ್ಯ ಅನುಸರಿಸುತ್ತಿದ್ದಾರೆ ಎಂದು ಆರೋಪಿಸಿ, ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಪಿಡಿಒ) ಹಾಗೂ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಕೈಗೊಂಡು ಅಮಾನತುಗೊಳಿಸುವಂತೆ ನಮ್ಮ ಕರ್ನಾಟಕ ರಕ್ಷಣಾ ವೇದಿಕೆ ಒತ್ತಾಯಿಸಿದೆ.

ಸಂಘಟನೆಯ ತಾಲೂಕು ಅಧ್ಯಕ್ಷ ತಿಮ್ಮಾರೆಡ್ಡಿ ಮುನ್ನೂರು ನೇತೃತ್ವದಲ್ಲಿ ಪದಾಧಿಕಾರಿಗಳು ಹಾಗೂ ಗ್ರಾಮಸ್ಥರು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗೆ ಮನವಿ ಸಲ್ಲಿಸಿ, ಹಲ್ಕಾವಟಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಲ್ಕಾವಟಗಿ, ಅಂಕನಾಳ, ಉಪನಾಳ ಮತ್ತು ತೊಂಡಿಹಾಳ ಗ್ರಾಮಗಳಲ್ಲಿ ವಿಕಸಿತ ಭಾರತ ರೋಜ್‌ಗಾರ್ ಮತ್ತು ಆಜೀವಿಕಾ ಮಿಷನ್ (ಗ್ರಾಮೀಣ) (-) ಯೋಜನೆಯಡಿ ಕಾಮಗಾರಿಗಳ ಹಂಚಿಕೆಯಲ್ಲಿ ತಾರತಮ್ಯ ನಡೆಯುತ್ತಿದೆ ಎಂದು ದೂರಿದರು.

ಲಿಂಗಸುಗೂರು ತಾಲೂಕು ಬರಗಾಲ ಪೀಡಿತ ಪ್ರದೇಶವಾಗಿದ್ದು, ಗ್ರಾಮೀಣ ಜನರು ಉದ್ಯೋಗದ ಕೊರತೆಯಿಂದ ಸಂಕಷ್ಟ ಎದುರಿಸುತ್ತಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಅಂಕನಾಳ ಮತ್ತು ಉಪನಾಳ ಗ್ರಾಮಗಳಿಗೆ ಉದ್ಯೋಗ ಕಾಮಗಾರಿಗಳನ್ನು ಒದಗಿಸದೆ ನಿರ್ಲಕ್ಷ್ಯ ವಹಿಸಲಾಗುತ್ತಿದೆ ಎಂದು ಆರೋಪಿಸಿದರು.

ಅಂಕನಾಳ ಹಾಗೂ ಉಪನಾಳ ಗ್ರಾಮಸ್ಥರು ಸೆಪ್ಟೆಂಬರ್ 21, 2026ರಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರು. ಇದಲ್ಲದೆ, ಹಲವು ಬಾರಿ ತಾಲೂಕು ಪಂಚಾಯಿತಿ ಅಧಿಕಾರಿಗಳ ಗಮನಕ್ಕೆ ಸಮಸ್ಯೆಯನ್ನು ತಂದಿದ್ದರೂ ಯಾವುದೇ ಪರಿಣಾಮಕಾರಿ ಕ್ರಮ ಕೈಗೊಂಡಿಲ್ಲ. ಗ್ರಾಮಸ್ಥರ ಮನವಿಗಳಿಗೆ ಸ್ಪಂದಿಸದೆ ಅಧಿಕಾರಿಗಳು ನಿರ್ಲಕ್ಷ್ಯ ತೋರುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಗ್ರಾಮೀಣ ಪ್ರದೇಶದ ಜನರಿಗೆ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ಜಾರಿಗೊಳಿಸಿರುವ ಯೋಜನೆಯ ಪ್ರಯೋಜನ ಅರ್ಹ ಫಲಾನುಭವಿಗಳಿಗೆ ತಲುಪಬೇಕು. ಯಾವುದೇ ಗ್ರಾಮವನ್ನು ಕಡೆಗಣಿಸದೆ ಸಮಾನವಾಗಿ ಕಾಮಗಾರಿಗಳನ್ನು ಹಂಚಿಕೆ ಮಾಡಬೇಕು. ಅಂಕನಾಳ ಮತ್ತು ಉಪನಾಳ ಗ್ರಾಮಗಳಲ್ಲಿ ಕೂಡಲೇ ಅಗತ್ಯ ಕಾಮಗಾರಿಗಳನ್ನು ಆರಂಭಿಸುವ ಮೂಲಕ ಗ್ರಾಮೀಣ ಜನರಿಗೆ ಉದ್ಯೋಗ ಒದಗಿಸಬೇಕು ಎಂದು ಆಗ್ರಹಿಸಿದರು.

ಕಾಮಗಾರಿಗಳ ಹಂಚಿಕೆಯಲ್ಲಿ ತಾರತಮ್ಯ ಹಾಗೂ ಕರ್ತವ್ಯಲೋಪ ಎಸಗಿರುವ ಆರೋಪಗಳ ಕುರಿತು ಸಮಗ್ರ ತನಿಖೆ ನಡೆಸಬೇಕು. ತಪ್ಪಿತಸ್ಥರೆಂದು ಕಂಡುಬರುವ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹಾಗೂ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಿ ಅಮಾನತುಗೊಳಿಸಬೇಕು ಎಂದು ಒತ್ತಾಯಿಸಿದರು.

ಮುಂದಿನ ಕೆಲವೇ ದಿನಗಳಲ್ಲಿ ಅಂಕನಾಳ ಹಾಗೂ ಉಪನಾಳ ಗ್ರಾಮಗಳಿಗೆ ಯೋಜನೆಯಡಿ ಕಾಮಗಾರಿಗಳನ್ನು ಮಂಜೂರು ಮಾಡದಿದ್ದರೆ ನಮ್ಮ ಕರ್ನಾಟಕ ರಕ್ಷಣಾ ವೇದಿಕೆ ಹಾಗೂ ಎರಡೂ ಗ್ರಾಮಗಳ ಸಾರ್ವಜನಿಕರು ಒಗ್ಗೂಡಿ ತಾಲೂಕು ಪಂಚಾಯಿತಿ ಕಚೇರಿ ಎದುರು ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದು ಸಂಘಟನೆಯ ತಾಲೂಕು ಅಧ್ಯಕ್ಷ ತಿಮ್ಮಾರೆಡ್ಡಿ ಮುನ್ನೂರು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ನಮ್ಮ ಕರ್ನಾಟಕ ರಕ್ಷಣಾ ವೇದಿಕೆಯ ತಾಲೂಕು ಪ್ರಧಾನ ಕಾರ್ಯದರ್ಶಿ ರಮೇಶ ಗುತ್ತೇದಾರ ಹೊನ್ನಳ್ಳಿ, ಅಶೋಕ ಗಸ್ತಿ, ಯಲ್ಲಪ್ಪ ಬಂಡಿ, ರವಿಕುಮಾರ ಗೋರೆಬಾಳ, ಲಕ್ಷ್ಮಿ ಅಂಕನಾಳ, ಅಮರಮ್ಮ ಅಂಗಡಿ, ಗದ್ದೆಮ್ಮ ತಳವಾರ, ಶರಣಮ್ಮ, ರೇಣುಕಾ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಬಾಪೂರು ನರಸಿಂಹ ಶ್ರೇಷ್ಠಿ ಹತ್ಯೆ ಖಂಡಿಸಿ ಆರ್ಯ ವೈಶ್ಯ ಸಮಾಜದಿಂದ ಶ್ರದ್ಧಾಂಜಲಿ



ಮಾನ್ವಿ: ರಾಯಚೂರು ನಗರದಲ್ಲಿ ಇತ್ತೀಚೆಗೆ ಹತ್ಯೆಗೀಡಾದ ಆರ್ಯ ವೈಶ್ಯ ಸಮುದಾಯದ ಸಣ್ಣ ವ್ಯಾಪಾರಿ ಬಾಪೂರು ನರಸಿಂಹ ಶ್ರೇಷ್ಠಿ ಅವರ ಸಾವಿಗೆ ಸಂತಾಪ ಸೂಚಿಸಿ, ಶ್ರೀ ನಗರೇಶ್ವರ ಆರ್ಯ ವೈಶ್ಯ ಸಂಘದ ವತಿಯಿಂದ ಪಟ್ಟಣದ ಬಸವ ವೃತ್ತದಲ್ಲಿ ಮೇಣದಬತ್ತಿ ಬೆಳಗಿಸಿ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀ ನಗರೇಶ್ವರ ಆರ್ಯ ವೈಶ್ಯ ಸಂಘದ ತಾಲೂಕು ಅಧ್ಯಕ್ಷ ಆರ್. ಮುತ್ತುರಾಜ್ ಶೆಟ್ಟಿ, ರಾಯಚೂರು ನಗರದಲ್ಲಿ ಹಾಡಹಗಲೇ ಸಣ್ಣ ವ್ಯಾಪಾರಿಯೊಬ್ಬರ ಹತ್ಯೆ ನಡೆದಿರುವುದು ಅತ್ಯಂತ ಖಂಡನೀಯವಾಗಿದೆ. ಕ್ಷುಲ್ಲಕ ಕಾರಣಕ್ಕೆ ನಡೆದಿರುವ ಈ ಘಟನೆಯು ವ್ಯಾಪಾರಿಗಳು ಹಾಗೂ ಸಾರ್ವಜನಿಕರಲ್ಲಿ ಆತಂಕ ಮೂಡಿಸಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಉದ್ರಿ ನೀಡಲು ನಿರಾಕರಿಸಿದ ಕಾರಣಕ್ಕೆ ಮಾದಕ ವಸ್ತು ಸೇವಿಸಿದ್ದ ಎನ್ನಲಾದ ವ್ಯಕ್ತಿಯೊಬ್ಬ ಬಾಪೂರು ನರಸಿಂಹ ಶ್ರೇಷ್ಠಿ ಅವರನ್ನು ಹತ್ಯೆ ಮಾಡಿರುವ ಆರೋಪ ಕೇಳಿಬಂದಿದೆ. ಇಂತಹ ಘಟನೆಗಳು ಮರುಕಳಿಸದಂತೆ ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಪ್ರಕರಣದ ಆರೋಪಿಗೆ ಕಾನೂನಿನ ಪ್ರಕಾರ ಕಠಿಣ ಶಿಕ್ಷೆಯಾಗುವಂತೆ ಕ್ರಮ ವಹಿಸಬೇಕು ಎಂದು ಒತ್ತಾಯಿಸಿದರು.

ರಾಯಚೂರು ಜಿಲ್ಲೆಯಲ್ಲಿ ಮಾದಕ ವಸ್ತುಗಳ ಮಾರಾಟ ಮತ್ತು ಸೇವನೆಯ ಹಾವಳಿಗೆ ಕಡಿವಾಣ ಹಾಕಲು ಪೊಲೀಸ್ ಇಲಾಖೆ ವಿಶೇಷ ಕಾರ್ಯಾಚರಣೆ ನಡೆಸಬೇಕು. ವ್ಯಾಪಾರಿಗಳು ನಿರ್ಭಯವಾಗಿ ತಮ್ಮ ವಹಿವಾಟು ನಡೆಸುವಂತಹ ಸುರಕ್ಷಿತ ವಾತಾವರಣ ನಿರ್ಮಿಸಬೇಕು. ಮೃತ ನರಸಿಂಹ ಶ್ರೇಷ್ಠಿ ಅವರ ಕುಟುಂಬಕ್ಕೆ ನ್ಯಾಯ ದೊರಕಿಸಿಕೊಡುವುದರ ಜೊತೆಗೆ ಅಗತ್ಯ ನೆರವು ಒದಗಿಸಬೇಕು ಎಂದು ಆಗ್ರಹಿಸಿದರು.

ಇದಕ್ಕೂ ಮುನ್ನ ಪಟ್ಟಣದ ಶ್ರೀ ನಗರೇಶ್ವರ ದೇವಸ್ಥಾನದಲ್ಲಿ ಆರ್ಯ ವೈಶ್ಯ ಸಮಾಜದ ಮುಖಂಡರು ಹಾಗೂ ಸದಸ್ಯರು ಮೃತ ಬಾಪೂರು ನರಸಿಂಹ ಶ್ರೇಷ್ಠಿ ಅವರ ಆತ್ಮಕ್ಕೆ ಶಾಂತಿ ಕೋರಿ ಪ್ರಾರ್ಥನೆ ಸಲ್ಲಿಸಿದರು.

ಹತ್ಯೆ ಘಟನೆಯನ್ನು ಖಂಡಿಸಿ ಆರ್ಯ ವೈಶ್ಯ ಸಮುದಾಯದ ವ್ಯಾಪಾರಿಗಳು ತಮ್ಮ ಅಂಗಡಿ ಮುಂಗಟ್ಟುಗಳನ್ನು ಬಂದ್ ಮಾಡಿ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಪಾಲ್ಗೊಂಡರು. ಬಳಿಕ ಬಸವ ವೃತ್ತದಲ್ಲಿ ಮೇಣದಬತ್ತಿಗಳನ್ನು ಬೆಳಗಿಸಿ ಮೃತ ವ್ಯಾಪಾರಿಗೆ ಗೌರವ ನಮನ ಸಲ್ಲಿಸಿದರು.

ಶೀಗಿ ಹುಣ್ಣಿಮೆ ಪ್ರಯುಕ್ತ ಅಂಭಾಭವಾನಿ ದೇವಸ್ಥಾನದಲ್ಲಿ ವಿಶೇಷ ಪೂಜೆ, ಅನ್ನದಾಸೋಹ



ದೇವದುರ್ಗ, ಅ.28: ಪಟ್ಟಣದ ಗೌತಮ ಓಣಿಯಲ್ಲಿರುವ ಶ್ರೀ ಅಂಭಾಭವಾನಿ ದೇವಸ್ಥಾನದಲ್ಲಿ ಶೀಗಿ ಹುಣ್ಣಿಮೆ ಅಂಗವಾಗಿ ವಿಶೇಷ ಪೂಜೆ ಹಾಗೂ ಅನ್ನದಾಸೋಹ ಕಾರ್ಯಕ್ರಮವನ್ನು ಭಕ್ತಿ ಮತ್ತು ಶ್ರದ್ಧೆಯಿಂದ ಹಮ್ಮಿಕೊಳ್ಳಲಾಯಿತು.

ಬಾವಸಾರ ಕ್ಷತ್ರಿಯ ಸಮಾಜದ ಬಾಂಧವರು ಹಾಗೂ ಗೆಳೆಯರ ಬಳಗದ ಸಹಯೋಗದಲ್ಲಿ ಆಯೋಜಿಸಿದ್ದ ಧಾರ್ಮಿಕ ಕಾರ್ಯಕ್ರಮದಲ್ಲಿ ದೇವಿಗೆ ವಿಶೇಷ ಪೂಜೆ, ಅಲಂಕಾರ ಹಾಗೂ ಮಂಗಳಾರತಿ ನೆರವೇರಿಸಲಾಯಿತು. ಭಕ್ತರು ದೇವಸ್ಥಾನಕ್ಕೆ ಆಗಮಿಸಿ ದೇವಿಯ ದರ್ಶನ ಪಡೆದು ಆಶೀರ್ವಾದ ಪಡೆದರು.

ಪ್ರಸಕ್ತ ಬರಗಾಲದ ಪರಿಸ್ಥಿತಿಯಿಂದ ರೈತರು ಹಾಗೂ ಸಾರ್ವಜನಿಕರು ಎದುರಿಸುತ್ತಿರುವ ಸಂಕಷ್ಟಗಳು ದೂರವಾಗಲಿ, ನಾಡಿನಲ್ಲಿ ಉತ್ತಮ ಮಳೆಯಾಗಿ ಕೃಷಿ ಚಟುವಟಿಕೆಗಳು ಚೇತರಿಸಿಕೊಳ್ಳಲಿ, ಜನಜೀವನ ಸುಭಿಕ್ಷವಾಗಿರಲಿ ಎಂದು ದೇವಿಯಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು.

ಧಾರ್ಮಿಕ ಆಚರಣೆಗಳೊಂದಿಗೆ ಸಮಾಜದಲ್ಲಿ ಒಗ್ಗಟ್ಟು, ಸಹಬಾಳ್ವೆ ಹಾಗೂ ಸೇವಾ ಮನೋಭಾವ ಬೆಳೆಸುವ ಉದ್ದೇಶದಿಂದ ಬಾವಸಾರ ಕ್ಷತ್ರಿಯ ಸಮಾಜ ಮತ್ತು ಗೆಳೆಯರ ಬಳಗದ ವತಿಯಿಂದ ಅನ್ನದಾಸೋಹ ವ್ಯವಸ್ಥೆ ಮಾಡಲಾಗಿತ್ತು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಭಕ್ತರು ಹಾಗೂ ಸಾರ್ವಜನಿಕರು ಪ್ರಸಾದ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಕ್ಷತ್ರಿಯ ಸಮಾಜದ ಶ್ರೀನಿವಾಸ ಉಭಾಳೆ, ಮೌನೇಶ ಉಭಾಳೆ, ಶಶಿಭೂಷಣಸ್ವಾಮಿ ಗಂಧದಮಠ, ಗುರುಪಾದಯ್ಯಸ್ವಾಮಿ ಹಿರೇಮಠ, ಶಂಕರರಾವ್ ಉಭಾಳೆ, ಮಾಧವರಾವ್ ಉಭಾಳೆ, ಕೇಶವರಾವ್ ಉಭಾಳೆ, ರವಿಕುಮಾರ ಸಾಹು ಕೋರಿ, ಶಂಭುಗೌಡ ಅರಷಣಗಿ, ರಾಜಕುಮಾರ ಸಾಹು ಕೋರಿ, ರವಿಕುಮಾರ್ ಪಾಟೀಲ ಅಳ್ಳುಂಡಿ, ಶಿವಕುಮಾರ ಸ್ವಾಮಿ ಕರ್ನಾಳ, ವೆಂಕನಗೌಡ ಕಕ್ಕಲದೊಡ್ಡಿ, ನವೀನ ಎಲೆಕ್ಟ್ರಿಕಲ್, ಲಕ್ಷ್ಮಣ ಜ್ಯೋತಿ, ದತ್ತುರಾವ್, ವಿರುಪಾಕ್ಷಿ ಸಾಹು ಸೇರಿದಂತೆ ಸಮಾಜದ ಮುಖಂಡರು, ಗೆಳೆಯರ ಬಳಗದ ಸದಸ್ಯರು ಹಾಗೂ ಭಕ್ತಾದಿಗಳು ಉಪಸ್ಥಿತರಿದ್ದರು.

ಡಿಸೆಂಬರ್ ಅಂತ್ಯದವರೆಗೆ ಕಾಲುವೆಗೆ ನೀರು ಹರಿಸಲು ಆಗ್ರಹಿಸಿ ಸಿಂಧನೂರಿನಲ್ಲಿ ರೈತರ ಬೃಹತ್ ಪ್ರತಿಭಟನೆ



ಸಿಂಧನೂರು: ತುಂಗಭದ್ರಾ ಜಲಾಶಯದ ಎಡದಂಡೆ ಕಾಲುವೆಗೆ ಡಿಸೆಂಬರ್ 31ರವರೆಗೆ ನಿರಂತರವಾಗಿ ನೀರು ಹರಿಸಬೇಕು ಎಂದು ಒತ್ತಾಯಿಸಿ ಸಿಂಧನೂರು ಹಾಗೂ ಮಸ್ಕಿ ತಾಲೂಕಿನ ರೈತರು ಮತ್ತು ವಿವಿಧ ಸಂಘಟನೆಗಳ ಮುಖಂಡರು 'ನಮ್ಮ ನೀರು ನಮ್ಮ ಹಕ್ಕು' ಘೋಷಣೆಯಡಿ ಬೃಹತ್ ಪ್ರತಿಭಟನೆಯನ್ನು ಮುಂದುವರಿಸಿದ್ದಾರೆ.

ನವೆಂಬರ್ 20ರವರೆಗೆ ಮಾತ್ರ ಕಾಲುವೆಗೆ ನೀರು ಹರಿಸುವ ನಿರ್ಧಾರವನ್ನು ಕೈಬಿಟ್ಟು, ಡಿಸೆಂಬರ್ ಅಂತ್ಯದವರೆಗೆ ನೀರು ಪೂರೈಸಬೇಕು. ಬೆಳೆಗಳು ಸಮರ್ಪಕವಾಗಿ ರೈತರ ಕೈ ಸೇರಬೇಕಾದರೆ ಕೊನೆಯ ಹಂತದವರೆಗೂ ನೀರಿನ ಅವಶ್ಯಕತೆಯಿದೆ. ಮಧ್ಯದಲ್ಲಿಯೇ ನೀರು ಸ್ಥಗಿತಗೊಳಿಸಿದರೆ ಬೆಳೆಗಳು ಒಣಗಿ ರೈತರು ಮತ್ತಷ್ಟು ಆರ್ಥಿಕ ಸಂಕಷ್ಟಕ್ಕೆ ಸಿಲುಕಬೇಕಾಗುತ್ತದೆ ಎಂದು ಪ್ರತಿಭಟನಾಕಾರರು ಆತಂಕ ವ್ಯಕ್ತಪಡಿಸಿದರು.

ಈಗಾಗಲೇ ಮಳೆ ಕೊರತೆ ಹಾಗೂ ಬರಗಾಲದ ಪರಿಸ್ಥಿತಿಯಿಂದ ರೈತರು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ನೀರಾವರಿ ಕಾಲುವೆಗಳಿಗೆ ಸಮರ್ಪಕವಾಗಿ ನೀರು ಪೂರೈಸದಿದ್ದರೆ ರೈತರ ಬದುಕು ಮತ್ತಷ್ಟು ದುಸ್ತರವಾಗಲಿದೆ. ಸಾವಿರಾರು ರೂಪಾಯಿ ಖರ್ಚು ಮಾಡಿ ಬೆಳೆದ ಬೆಳೆಗಳು ಕೈಗೆ ಸಿಗದಂತಾದರೆ ರೈತರಿಗೆ ಗಾಯದ ಮೇಲೆ ಬರೆ ಎಳೆದಂತಾಗುತ್ತದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕಾಲುವೆ ನೀರಿನ ಕೊರತೆಯಿಂದ ಕೃಷಿ ಚಟುವಟಿಕೆಗಳ ಮೇಲೆ ಮಾತ್ರವಲ್ಲದೆ ಜಾನುವಾರುಗಳ ಮೇವು ಹಾಗೂ ಕುಡಿಯುವ ನೀರಿನ ಲಭ್ಯತೆಯ ಮೇಲೆಯೂ ಪರಿಣಾಮ ಬೀರುತ್ತಿದೆ. ಹಳ್ಳಗಳಿಗೆ ನೀರು ಹರಿಸದಿರುವುದರಿಂದ ಜಾನುವಾರುಗಳು, ಪ್ರಾಣಿ-ಪಕ್ಷಿಗಳು ನೀರಿಗಾಗಿ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ರೈತರು ತಿಳಿಸಿದರು.

ನೀರಾವರಿ ಸಲಹಾ ಸಮಿತಿ (ಐಸಿಸಿ) ಸಭೆಯಲ್ಲಿ ಯಾವ ನಿರ್ಧಾರ ಕೈಗೊಳ್ಳಲಾಗುತ್ತದೆ ಎಂಬುದು ತಿಳಿದಿಲ್ಲ. ಆದರೆ ರೈತರ ಹಿತದೃಷ್ಟಿಯಿಂದ ಡಿಸೆಂಬರ್ 31ರವರೆಗೆ ಕಾಲುವೆಗೆ ನೀರು ಹರಿಸುವ ನಿರ್ಧಾರ ಕೈಗೊಳ್ಳಬೇಕು. ಸಿಂಧನೂರು ಮತ್ತು ಮಸ್ಕಿ ತಾಲೂಕಿನ ರೈತರ ಬೆಳೆಗಳನ್ನು ಉಳಿಸಲು ಸರ್ಕಾರ ಹಾಗೂ ನೀರಾವರಿ ಇಲಾಖೆ ತಕ್ಷಣ ಸ್ಪಂದಿಸಬೇಕು ಎಂದು ಆಗ್ರಹಿಸಿದರು.

ರೈತರ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ, ನೀರಿನ ಲಭ್ಯತೆ ಹಾಗೂ ಬೆಳೆಗಳ ಸ್ಥಿತಿಗತಿಯನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು. ರೈತರು ಬೆಳೆದ ಬೆಳೆಗಳು ಸಂಪೂರ್ಣವಾಗಿ ಕೈ ಸೇರುವವರೆಗೂ ನೀರಾವರಿ ಸೌಲಭ್ಯ ಒದಗಿಸುವುದು ಅಗತ್ಯವಾಗಿದೆ ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಕರಿಬಸವ ನಗರದ ರಂಭಾಪುರಿ ಶಾಖಾ ಮಠದ ಶ್ರೀ ಸೋಮನಾಥ ಶಿವಾಚಾರ್ಯ ಸ್ವಾಮೀಜಿ, ಯದ್ದಲದೊಡ್ಡಿಯ ಶ್ರೀ ಮಹಾಲಿಂಗ ಸ್ವಾಮೀಜಿ, ಜೆಡಿಎಸ್ ತಾಲೂಕು ಅಧ್ಯಕ್ಷ ಬಸವರಾಜ ನಾಡಗೌಡ, ಡಾ. ನಾಗವೇಣಿ ಪಾಟೀಲ್, ನಿರುಪಾದಿ ಗೋಮರ್ಸಿ, ಬಸವರಾಜ ಗೋಡಿಹಾಳ, ಅಮೀನ್ ಪಾಷಾ ದಿದ್ದಗಿ, ವನಸಿರಿ ಫೌಂಡೇಶನ್ ಅಧ್ಯಕ್ಷ ಅಮರೇಗೌಡ ಮಲ್ಲಾಪುರ, ವೀರೇಶ ಬಾವಿಮನಿ, ಮಂಜುನಾಥ ಗಾಣಿಗೇರ, ದೌಲಸಾಬ ದೊಡ್ಡಮನಿ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಹಾಗೂ ನೂರಾರು ರೈತರು ಭಾಗವಹಿಸಿದ್ದರು.

ಎನ್‌ಡಿಎ ಅಭ್ಯರ್ಥಿಗಳ ಗೆಲುವು: ಮಾನ್ವಿಯಲ್ಲಿ ಜೆಡಿಎಸ್ ಕಾರ್ಯಕರ್ತರ ವಿಜಯೋತ್ಸವ



ಮಾನ್ವಿ: ವಿಧಾನ ಪರಿಷತ್ತಿನ ಈಶಾನ್ಯ ಶಿಕ್ಷಕರ ಕ್ಷೇತ್ರ ಹಾಗೂ ಬೆಂಗಳೂರು ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿಗಳು ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಪಟ್ಟಣದ ಬಸವ ವೃತ್ತದಲ್ಲಿ ಜನತಾದಳ (ಜಾತ್ಯತೀತ) ಪಕ್ಷದ ಕಾರ್ಯಕರ್ತರು ವಿಜಯೋತ್ಸವ ಆಚರಿಸಿ ಸಂಭ್ರಮಿಸಿದರು.

ಈಶಾನ್ಯ ಶಿಕ್ಷಕರ ಕ್ಷೇತ್ರದಿಂದ ಶಶೀಲ್ ಜಿ. ನಮೋಶಿ ಹಾಗೂ ಬೆಂಗಳೂರು ಶಿಕ್ಷಕರ ಕ್ಷೇತ್ರದಿಂದ ಎ.ಪಿ. ರಂಗನಾಥ್ ಅವರು ಜಯಗಳಿಸಿರುವುದಕ್ಕೆ ಹರ್ಷ ವ್ಯಕ್ತಪಡಿಸಿದ ಜೆಡಿಎಸ್ ಮುಖಂಡರು ಮತ್ತು ಕಾರ್ಯಕರ್ತರು, ಪರಸ್ಪರ ಅಭಿನಂದನೆ ಸಲ್ಲಿಸಿ ವಿಜಯೋತ್ಸವದಲ್ಲಿ ಪಾಲ್ಗೊಂಡರು.

ಈ ಸಂದರ್ಭದಲ್ಲಿ ಜೆಡಿಎಸ್ ತಾಲೂಕು ಅಧ್ಯಕ್ಷ ಡಾ. ಈರಣ್ಣ ಮರ್ಲಟ್ಟಿ ಹಾಗೂ ನಗರ ಘಟಕದ ಅಧ್ಯಕ್ಷ ಎಚ್. ಮೌನೇಶ್ ಗೌಡ ನೇತೃತ್ವದಲ್ಲಿ ಕಾರ್ಯಕರ್ತರು ಸಂಭ್ರಮಾಚರಣೆ ನಡೆಸಿದರು.

ಶಿಕ್ಷಕರ ಕ್ಷೇತ್ರಗಳ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿಗಳಿಗೆ ದೊರೆತ ಗೆಲುವು ಮೈತ್ರಿಕೂಟದ ಸಂಘಟನಾ ಶಕ್ತಿಗೆ ಮತ್ತಷ್ಟು ಬಲ ನೀಡಿದೆ ಎಂದು ಪಕ್ಷದ ಮುಖಂಡರು ಅಭಿಪ್ರಾಯಪಟ್ಟರು. ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸುವುದರ ಜೊತೆಗೆ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ನೂತನವಾಗಿ ಆಯ್ಕೆಯಾದ ಪ್ರತಿನಿಧಿಗಳು ಶ್ರಮಿಸಲಿದ್ದಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ವಿಜಯೋತ್ಸವದಲ್ಲಿ ಜೆಡಿಎಸ್ ಮುಖಂಡರಾದ ಪಿ. ರವಿಕುಮಾರ್, ಭಾಷಾ ಸಾಬ್, ಮೌಲಾಸಾಬ್, ಮಿರ್ಜಾ ಸುಭಾನ್ ಬೇಗ್, ಬಸವರಾಜ್ ಸ್ವಾಮಿ, ಸಾಜೀದ್ ಪಾಷಾ, ಅಮರೇಗೌಡ ಖರಾಬದಿನ್ನಿ, ವಿಜಯ ನಾಯಕ ಕೊಟ್ನೆಕಲ್, ಮೌನೇಶ ನಾಯಕ ಮ್ಯಾಕಲ್, ಸಂತೋಷ ಹೂಗಾರ, ಶಿವಕುಮಾರ್ ಚಲ್ಮಲ್, ವೆಂಕಟೇಶ ನಾಯಕ ಕರಡಿಗುಡ್ಡ, ನಾಗರಾಜ ಪೆರಕಲ್, ಮಲ್ಲನಗೌಡ, ಹೊಯ್ಸಳ ಸ್ವಾಮಿ, ನಾರಾಯಣ ಗಣದಿನ್ನಿ, ನರಸಪ್ಪ ರಬ್ಬಣಕಲ್, ಶಿವು ಸಂಗಾಪೂರ್ ಸೇರಿದಂತೆ ನೂರಾರು ಜೆಡಿಎಸ್ ಕಾರ್ಯಕರ್ತರು ಭಾಗವಹಿಸಿದ್ದರು.

ಕೃಷಿಕರ ಸಮಸ್ಯೆಗಳ ಪರಿಹಾರಕ್ಕೆ ಕೃಷಿ ಸಮಾಜದಿಂದ ಸಂಘಟಿತ ಪ್ರಯತ್ನ



ರಾಯಚೂರು, ಅ. 28: ರೈತರ ಹಿತಾಸಕ್ತಿಗಳ ರಕ್ಷಣೆ, ಕೃಷಿಕರು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವುದು ಹಾಗೂ ಕೃಷಿ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಪೂರಕವಾದ ಕಾರ್ಯಕ್ರಮಗಳನ್ನು ರೂಪಿಸುವ ಉದ್ದೇಶದಿಂದ ಕೃಷಿ ಸಮಾಜದ ರಾಜ್ಯ ಪ್ರತಿನಿಧಿಗಳು ಹಾಗೂ ಪದಾಧಿಕಾರಿಗಳ ಸಭೆ ಬುಧವಾರ ನಗರದ ಜಂಟಿ ಕೃಷಿ ನಿರ್ದೇಶಕರ ಕಚೇರಿಯ ಸಭಾಂಗಣದಲ್ಲಿ ನಡೆಯಿತು.

2026-27ರಿಂದ 2029-30ನೇ ಸಾಲಿನ ಅವಧಿಗೆ ಸಂಬಂಧಿಸಿದಂತೆ ಆಯೋಜಿಸಿದ್ದ ಸಭೆಯಲ್ಲಿ ಕೃಷಿ ಸಮಾಜದ ಸಂಘಟನಾತ್ಮಕ ಚಟುವಟಿಕೆಗಳು, ರೈತರ ಸಮಸ್ಯೆಗಳು ಹಾಗೂ ಕೃಷಿ ಕ್ಷೇತ್ರದ ಅಭಿವೃದ್ಧಿಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸಮಾಲೋಚನೆ ನಡೆಸಲಾಯಿತು.

ಕೃಷಿ ಸಮಾಜವು ರೈತರು ಮತ್ತು ಕೃಷಿ ಇಲಾಖೆಯ ನಡುವೆ ಸಂಪರ್ಕ ಸೇತುವೆಯಾಗಿ ಕಾರ್ಯನಿರ್ವಹಿಸುವ ಮೂಲಕ ಕೃಷಿಕರ ಸಮಸ್ಯೆಗಳನ್ನು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದು ಪರಿಹಾರ ಕಲ್ಪಿಸಲು ಪ್ರಯತ್ನಿಸಬೇಕು. ಕೃಷಿ ಕ್ಷೇತ್ರದಲ್ಲಿ ಎದುರಾಗುತ್ತಿರುವ ಸವಾಲುಗಳನ್ನು ಗುರುತಿಸಿ, ರೈತರಿಗೆ ಅನುಕೂಲವಾಗುವಂತಹ ಕಾರ್ಯಚಟುವಟಿಕೆಗಳಿಗೆ ಹೆಚ್ಚಿನ ಆದ್ಯತೆ ನೀಡುವ ಅಗತ್ಯವಿದೆ ಎಂಬ ಅಭಿಪ್ರಾಯ ಸಭೆಯಲ್ಲಿ ವ್ಯಕ್ತವಾಯಿತು.

ಇದೇ ವೇಳೆ ಕೃಷಿ ಸಮಾಜದ ಸಂಘಟನೆಯನ್ನು ಗ್ರಾಮೀಣ ಮಟ್ಟದಿಂದ ಮತ್ತಷ್ಟು ಬಲಪಡಿಸುವುದು, ರೈತರ ಸಮಸ್ಯೆಗಳಿಗೆ ಸ್ಪಂದಿಸುವುದು ಹಾಗೂ ಕೃಷಿ ಅಭಿವೃದ್ಧಿಗೆ ಸಂಬಂಧಿಸಿದ ವಿಷಯಗಳಲ್ಲಿ ಇಲಾಖೆಯೊಂದಿಗೆ ಸಮನ್ವಯ ಸಾಧಿಸುವ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಕೃಷಿ ಸಮಾಜದ ರಾಜ್ಯ ಪ್ರತಿನಿಧಿ ವಿಜಯಕುಮಾರ ಪಾಟೀಲ ಶಾವಂತಿಗೇರ, ನೂತನ ರಾಜ್ಯ ಪ್ರತಿನಿಧಿ ಚಂದ್ರಶೇಖರ ಪಾಟೀಲ ಗುಗೇಬಾಳ, ಮಾಜಿ ರಾಜ್ಯ ಪ್ರತಿನಿಧಿ ಎಸ್.ಎಂ. ಸಿದ್ದಾರೆಡ್ಡಿ, ಮಾಜಿ ಜಿಲ್ಲಾಧ್ಯಕ್ಷ ಸುರೇಂದ್ರ ಗೌಡ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜೇಶ್ ಮಲ್ಲಟ್, ಕೋಶಾಧ್ಯಕ್ಷ ಉಮೇಶ್ ಮತ್ತೂರು ಹಾಗೂ ತಾಲೂಕು ಅಧ್ಯಕ್ಷ ಈಶಪ್ಪ ದೇಸಾಯಿ ಭಾಗವಹಿಸಿದ್ದರು.

ಶಿವಪ್ಪ ಗೌಡ ಕಲ್ಲೂರು, ಬಸವರಾಜ ಗೌರಂಪೇಟೆ, ಬಸವರಾಜ ಗಾಣದಾಳ, ಮಲ್ಲಿಕಾರ್ಜುನ ಸಂಕೇಶ್ರಾಳ, ಹೊನ್ನನಗೌಡ ಸಿಂಧನೂರು, ಮಹಾಬಲೇಶ ಗೌಡ ಮಾನ್ವಿ, ಮಂಜುನಾಥ ಪಾಟೀಲ ವಟಗಲ್ ಸೇರಿದಂತೆ ಜಂಟಿ ಕೃಷಿ ನಿರ್ದೇಶಕರು ಹಾಗೂ ಕೃಷಿ ಇಲಾಖೆಯ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

ಕೃಷಿಕರ ಹಿತ ರಕ್ಷಣೆ ಮತ್ತು ಕೃಷಿ ಕ್ಷೇತ್ರದ ಪ್ರಗತಿಗೆ ಕೃಷಿ ಸಮಾಜದ ಚಟುವಟಿಕೆಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಮುನ್ನಡೆಸುವ ಅಗತ್ಯವನ್ನು ಸಭೆಯಲ್ಲಿ ಪ್ರತಿಪಾದಿಸಲಾಯಿತು. ಕೃಷಿ ಸಮಾಜದಿಂದ ಸಂಘಟಿತ ಪ್ರಯತ್ನ

ರಾಯಚೂರು, ಅ. 28: ರೈತರ ಹಿತಾಸಕ್ತಿಗಳ ರಕ್ಷಣೆ, ಕೃಷಿಕರು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವುದು ಹಾಗೂ ಕೃಷಿ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಪೂರಕವಾದ ಕಾರ್ಯಕ್ರಮಗಳನ್ನು ರೂಪಿಸುವ ಉದ್ದೇಶದಿಂದ ಕೃಷಿ ಸಮಾಜದ ರಾಜ್ಯ ಪ್ರತಿನಿಧಿಗಳು ಹಾಗೂ ಪದಾಧಿಕಾರಿಗಳ ಸಭೆ ಬುಧವಾರ ನಗರದ ಜಂಟಿ ಕೃಷಿ ನಿರ್ದೇಶಕರ ಕಚೇರಿಯ ಸಭಾಂಗಣದಲ್ಲಿ ನಡೆಯಿತು.

2026-27ರಿಂದ 2029-30ನೇ ಸಾಲಿನ ಅವಧಿಗೆ ಸಂಬಂಧಿಸಿದಂತೆ ಆಯೋಜಿಸಿದ್ದ ಸಭೆಯಲ್ಲಿ ಕೃಷಿ ಸಮಾಜದ ಸಂಘಟನಾತ್ಮಕ ಚಟುವಟಿಕೆಗಳು, ರೈತರ ಸಮಸ್ಯೆಗಳು ಹಾಗೂ ಕೃಷಿ ಕ್ಷೇತ್ರದ ಅಭಿವೃದ್ಧಿಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸಮಾಲೋಚನೆ ನಡೆಸಲಾಯಿತು.

ಕೃಷಿ ಸಮಾಜವು ರೈತರು ಮತ್ತು ಕೃಷಿ ಇಲಾಖೆಯ ನಡುವೆ ಸಂಪರ್ಕ ಸೇತುವೆಯಾಗಿ ಕಾರ್ಯನಿರ್ವಹಿಸುವ ಮೂಲಕ ಕೃಷಿಕರ ಸಮಸ್ಯೆಗಳನ್ನು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದು ಪರಿಹಾರ ಕಲ್ಪಿಸಲು ಪ್ರಯತ್ನಿಸಬೇಕು. ಕೃಷಿ ಕ್ಷೇತ್ರದಲ್ಲಿ ಎದುರಾಗುತ್ತಿರುವ ಸವಾಲುಗಳನ್ನು ಗುರುತಿಸಿ, ರೈತರಿಗೆ ಅನುಕೂಲವಾಗುವಂತಹ ಕಾರ್ಯಚಟುವಟಿಕೆಗಳಿಗೆ ಹೆಚ್ಚಿನ ಆದ್ಯತೆ ನೀಡುವ ಅಗತ್ಯವಿದೆ ಎಂಬ ಅಭಿಪ್ರಾಯ ಸಭೆಯಲ್ಲಿ ವ್ಯಕ್ತವಾಯಿತು.

ಇದೇ ವೇಳೆ ಕೃಷಿ ಸಮಾಜದ ಸಂಘಟನೆಯನ್ನು ಗ್ರಾಮೀಣ ಮಟ್ಟದಿಂದ ಮತ್ತಷ್ಟು ಬಲಪಡಿಸುವುದು, ರೈತರ ಸಮಸ್ಯೆಗಳಿಗೆ ಸ್ಪಂದಿಸುವುದು ಹಾಗೂ ಕೃಷಿ ಅಭಿವೃದ್ಧಿಗೆ ಸಂಬಂಧಿಸಿದ ವಿಷಯಗಳಲ್ಲಿ ಇಲಾಖೆಯೊಂದಿಗೆ ಸಮನ್ವಯ ಸಾಧಿಸುವ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಕೃಷಿ ಸಮಾಜದ ರಾಜ್ಯ ಪ್ರತಿನಿಧಿ ವಿಜಯಕುಮಾರ ಪಾಟೀಲ ಶಾವಂತಿಗೇರ, ನೂತನ ರಾಜ್ಯ ಪ್ರತಿನಿಧಿ ಚಂದ್ರಶೇಖರ ಪಾಟೀಲ ಗುಗೇಬಾಳ, ಮಾಜಿ ರಾಜ್ಯ ಪ್ರತಿನಿಧಿ ಎಸ್.ಎಂ. ಸಿದ್ದಾರೆಡ್ಡಿ, ಮಾಜಿ ಜಿಲ್ಲಾಧ್ಯಕ್ಷ ಸುರೇಂದ್ರ ಗೌಡ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜೇಶ್ ಮಲ್ಲಟ್, ಕೋಶಾಧ್ಯಕ್ಷ ಉಮೇಶ್ ಮತ್ತೂರು ಹಾಗೂ ತಾಲೂಕು ಅಧ್ಯಕ್ಷ ಈಶಪ್ಪ ದೇಸಾಯಿ ಭಾಗವಹಿಸಿದ್ದರು.

ಶಿವಪ್ಪ ಗೌಡ ಕಲ್ಲೂರು, ಬಸವರಾಜ ಗೌರಂಪೇಟೆ, ಬಸವರಾಜ ಗಾಣದಾಳ, ಮಲ್ಲಿಕಾರ್ಜುನ ಸಂಕೇಶ್ರಾಳ, ಹೊನ್ನನಗೌಡ ಸಿಂಧನೂರು, ಮಹಾಬಲೇಶ ಗೌಡ ಮಾನ್ವಿ, ಮಂಜುನಾಥ ಪಾಟೀಲ ವಟಗಲ್ ಸೇರಿದಂತೆ ಜಂಟಿ ಕೃಷಿ ನಿರ್ದೇಶಕರು ಹಾಗೂ ಕೃಷಿ ಇಲಾಖೆಯ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

ಕೃಷಿಕರ ಹಿತ ರಕ್ಷಣೆ ಮತ್ತು ಕೃಷಿ ಕ್ಷೇತ್ರದ ಪ್ರಗತಿಗೆ ಕೃಷಿ ಸಮಾಜದ ಚಟುವಟಿಕೆಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಮುನ್ನಡೆಸುವ ಅಗತ್ಯವನ್ನು ಸಭೆಯಲ್ಲಿ ಪ್ರತಿಪಾದಿಸಲಾಯಿತು.

ನಮೋಶಿ ಐದನೇ ಬಾರಿ ಗೆಲುವು: ಬಿಜೆಪಿ ಕಾರ್ಯಕರ್ತರ ಸಂಭ್ರಮಾಚರಣೆ





ರಾಯಚೂರು: ಕರ್ನಾಟಕ ವಿಧಾನ ಪರಿಷತ್ತಿನ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಶಶೀಲ್ ಜಿ. ನಮೋಶಿ ಅವರು ಸತತ ಐದನೇ ಬಾರಿಗೆ ಜಯಭೇರಿ ಬಾರಿಸಿದ ಹಿನ್ನೆಲೆಯಲ್ಲಿ ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ನಮೋಶಿ ಅವರ ಗೆಲುವಿನ ಸುದ್ದಿ ತಿಳಿಯುತ್ತಿದ್ದಂತೆ ಅಂಬೇಡ್ಕರ್ ವೃತ್ತದಲ್ಲಿ ಜಮಾಯಿಸಿದ ಪಕ್ಷದ ಕಾರ್ಯಕರ್ತರು ಪಟಾಕಿ ಸಿಡಿಸಿ, ಪರಸ್ಪರ ಸಿಹಿ ವಿತರಿಸಿ ಸಂಭ್ರಮಿಸಿದರು. ಬಿಜೆಪಿ ಪರ ಘೋಷಣೆಗಳನ್ನು ಕೂಗಿ ವಿಜಯದ ಸಂತಸ ಹಂಚಿಕೊಂಡರು.

ಈ ವೇಳೆ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂತೋಷ್ ರಾಜಗುರು ಮಾತನಾಡಿ, ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ ಶಶೀಲ್ ಜಿ. ನಮೋಶಿ ಅವರಿಗೆ ಮತ್ತೊಮ್ಮೆ ದೊರೆತ ಜನಾದೇಶವು ಅವರ ಕಾರ್ಯವೈಖರಿ ಹಾಗೂ ನಾಯಕತ್ವದ ಮೇಲೆ ಶಿಕ್ಷಕ ಮತದಾರರು ಇಟ್ಟಿರುವ ನಂಬಿಕೆಗೆ ಸಾಕ್ಷಿಯಾಗಿದೆ ಎಂದು ಅಭಿಪ್ರಾಯಪಟ್ಟರು.

ಶಿಕ್ಷಕರು ಹಾಗೂ ಪದವೀಧರ ಮತದಾರರು ಬಿಜೆಪಿ ಮತ್ತು ಎನ್‌ಡಿಎ ಅಭ್ಯರ್ಥಿಗಳ ಪರ ವ್ಯಕ್ತಪಡಿಸಿರುವ ಬೆಂಬಲವು ಪಕ್ಷದ ಸಂಘಟನಾತ್ಮಕ ಶಕ್ತಿಯನ್ನು ಮತ್ತಷ್ಟು ಹೆಚ್ಚಿಸಿದೆ. ಈ ಚುನಾವಣೆಯ ಫಲಿತಾಂಶವು ಮುಂಬರುವ ತಾಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಪಕ್ಷಕ್ಕೆ ಹೊಸ ಹುರುಪು ನೀಡಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳ ಗೆಲುವಿಗಾಗಿ ಶ್ರಮಿಸಿದ ಮುಖಂಡರು, ಕಾರ್ಯಕರ್ತರು ಹಾಗೂ ಬೆಂಬಲ ನೀಡಿದ ಮತದಾರರಿಗೆ ಕೃತಜ್ಞತೆ ಸಲ್ಲಿಸಿದ ಅವರು, ಚುನಾವಣೆಯ ಗೆಲುವಿನ ಉತ್ಸಾಹವನ್ನು ಸಂಘಟನೆ ಬಲಪಡಿಸುವ ನಿಟ್ಟಿನಲ್ಲಿ ಬಳಸಿಕೊಳ್ಳಬೇಕು. ಪಕ್ಷದ ಕಾರ್ಯಕರ್ತರು ಜನರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ತಳಮಟ್ಟದಲ್ಲಿ ಪಕ್ಷವನ್ನು ಮತ್ತಷ್ಟು ಸದೃಢಗೊಳಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಬಿಜೆಪಿ ನಗರ ಘಟಕದ ಮುಖಂಡರಾದ ರವೀಂದ್ರ ಜಲ್ದಾರ್, ಶರಣಬಸವ ಜೋಳದಡಗಿ, ಮಲ್ಲಿಕಾರ್ಜುನ ಪಾಟೀಲ್, ಪಲುಗುಲ ನಾಗರಾಜ ಸೇರಿದಂತೆ ಶರಣಮ್ಮ, ಮಹಿಳಾ ಕಾರ್ಯಕರ್ತರು, ಪಕ್ಷದ ಪದಾಧಿಕಾರಿಗಳು ಹಾಗೂ ಹಲವಾರು ಕಾರ್ಯಕರ್ತರು ಭಾಗವಹಿಸಿದ್ದರು.

ಹತ್ಯೆಯಾದ ಬಾಪೂರು ನರಸಿಂಹ ಕುಟುಂಬಕ್ಕೆ ಕೊಪ್ಪಳ ಆರ್ಯವೈಶ್ಯ ಸಮಾಜದಿಂದ ₹1.50 ಲಕ್ಷ ನೆರವು



ರಾಯಚೂರು: ನಗರದ ಎಲ್‌ಬಿಎಸ್ ನಗರದಲ್ಲಿ ಇತ್ತೀಚೆಗೆ ಹಾಡಹಗಲೇ ಹತ್ಯೆಗೀಡಾದ ವ್ಯಾಪಾರಿ ಬಾಪೂರು ನರಸಿಂಹ ಅವರ ಕುಟುಂಬಕ್ಕೆ ಕೊಪ್ಪಳದ ಆರ್ಯವೈಶ್ಯ ಸಮಾಜದ ಮುಖಂಡರು ₹1.50 ಲಕ್ಷ ಆರ್ಥಿಕ ನೆರವು ನೀಡುವ ಮೂಲಕ ಮಾನವೀಯತೆ ಮೆರೆದಿದ್ದಾರೆ.

ಕೊಪ್ಪಳದಿಂದ ಆಗಮಿಸಿದ ಆರ್ಯವೈಶ್ಯ ಸಮಾಜದ ಮುಖಂಡರು ಮೃತ ನರಸಿಂಹ ಅವರ ಮನೆಗೆ ಭೇಟಿ ನೀಡಿ ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿದರು. ಕುಟುಂಬದ ಇಬ್ಬರು ಹೆಣ್ಣುಮಕ್ಕಳ ಭವಿಷ್ಯದ ಹಿತದೃಷ್ಟಿಯಿಂದ ಸಂಗ್ರಹಿಸಿದ ₹1.50 ಲಕ್ಷ ಹಣವನ್ನು ಕುಟುಂಬಕ್ಕೆ ಹಸ್ತಾಂತರಿಸಿ, ಸಂಕಷ್ಟದ ಸಂದರ್ಭದಲ್ಲಿ ಇಡೀ ಸಮಾಜ ನಿಮ್ಮೊಂದಿಗಿದೆ ಎಂದು ಧೈರ್ಯ ತುಂಬಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕೊಪ್ಪಳ ಆರ್ಯವೈಶ್ಯ ಸಮಾಜದ ಮುಖಂಡ ಆನಂದ ಶಿರಹಟ್ಟಿ, ರಾಯಚೂರಿನಲ್ಲಿ ಬಾಪೂರು ನರಸಿಂಹ ಅವರ ಹತ್ಯೆ ನಡೆದಿರುವ ಸುದ್ದಿ ತಿಳಿದು ತೀವ್ರ ನೋವಾಯಿತು. ಇಂತಹ ಸಂದರ್ಭದಲ್ಲಿ ಕೇವಲ ಸಂತಾಪ ಸೂಚಿಸುವುದಷ್ಟೇ ನಮ್ಮ ಕರ್ತವ್ಯವಾಗಬಾರದು. ಸಂಕಷ್ಟದಲ್ಲಿರುವ ಕುಟುಂಬಕ್ಕೆ ಆರ್ಥಿಕವಾಗಿ ನೆರವಾಗುವುದು ಕೂಡ ಸಮಾಜದ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಘಟನೆ ಕುರಿತು ಕೊಪ್ಪಳದಲ್ಲಿ ಸಮಾಜದ ಮುಖಂಡರ ಸಭೆ ನಡೆಸಿ, ಮೃತರ ಕುಟುಂಬಕ್ಕೆ ನೆರವು ನೀಡಲು ತೀರ್ಮಾನಿಸಲಾಯಿತು. ಸಮಾಜದ ಬಾಂಧವರು ಸ್ವಯಂಪ್ರೇರಿತವಾಗಿ ನೀಡಿದ ಸಹಕಾರದಿಂದ ಅಲ್ಪಾವಧಿಯಲ್ಲಿಯೇ ₹1.50 ಲಕ್ಷ ಸಂಗ್ರಹವಾಯಿತು. ಈ ಮೊತ್ತವನ್ನು ಕುಟುಂಬಕ್ಕೆ ನೀಡಲಾಗಿದ್ದು, ಮೃತ ನರಸಿಂಹ ಅವರ ಇಬ್ಬರು ಹೆಣ್ಣುಮಕ್ಕಳ ಹೆಸರಿನಲ್ಲಿ ಬ್ಯಾಂಕ್‌ನಲ್ಲಿ ಠೇವಣಿ ಇಡುವಂತೆ ಸಲಹೆ ನೀಡಲಾಗಿದೆ ಎಂದು ತಿಳಿಸಿದರು.

ಮಕ್ಕಳ ಭವಿಷ್ಯಕ್ಕೆ ಆರ್ಥಿಕ ಭದ್ರತೆ ಒದಗಿಸುವುದು ನಮ್ಮ ಮುಖ್ಯ ಉದ್ದೇಶವಾಗಿದೆ. ಈ ಹಣವನ್ನು ದೀರ್ಘಾವಧಿಯ ಠೇವಣಿಯಾಗಿ ಇಟ್ಟರೆ, ಬಡ್ಡಿ ಹಾಗೂ ಹೂಡಿಕೆಯ ಅವಧಿಗೆ ಅನುಗುಣವಾಗಿ ಮಕ್ಕಳು ವಯಸ್ಕರಾಗುವ ವೇಳೆಗೆ ಉತ್ತಮ ಮೊತ್ತ ಸಂಗ್ರಹವಾಗಬಹುದು. ಅದು ಅವರ ಶಿಕ್ಷಣ ಹಾಗೂ ಭವಿಷ್ಯದ ಅಗತ್ಯಗಳಿಗೆ ನೆರವಾಗಲಿದೆ ಎಂದು ಅಭಿಪ್ರಾಯಪಟ್ಟರು.

ರಾಯಚೂರು ಆರ್ಯವೈಶ್ಯ ಸಮಾಜದ ಅಧ್ಯಕ್ಷೆ ಸಾವಿತ್ರಿ ಪುರುಷೋತ್ತಮ ಮಾತನಾಡಿ, ನರಸಿಂಹ ಅವರ ಹತ್ಯೆ ಘಟನೆಯಿಂದ ಕುಟುಂಬ ತೀವ್ರ ಸಂಕಷ್ಟಕ್ಕೆ ಸಿಲುಕಿದೆ. ಇಂತಹ ಸಂದರ್ಭದಲ್ಲಿ ಕೊಪ್ಪಳದ ಆರ್ಯವೈಶ್ಯ ಸಮಾಜದ ಮುಖಂಡರು ಸ್ವಯಂಪ್ರೇರಿತವಾಗಿ ಆಗಮಿಸಿ ಆರ್ಥಿಕ ನೆರವು ನೀಡಿರುವುದು ಶ್ಲಾಘನೀಯವಾಗಿದೆ ಎಂದು ಹೇಳಿದರು.

ಕೊಪ್ಪಳದ ಸಮಾಜದ ಬಾಂಧವರು ಕೇವಲ ಹಣಕಾಸಿನ ನೆರವು ನೀಡದೆ, ನೊಂದ ಕುಟುಂಬಕ್ಕೆ ಸಾಂತ್ವನ ಹೇಳಿ ಧೈರ್ಯ ತುಂಬಿದ್ದಾರೆ. ನಿಮ್ಮೊಂದಿಗೆ ನಾವಿದ್ದೇವೆ ಎಂಬ ಅವರ ಮಾತುಗಳು ಕುಟುಂಬಕ್ಕೆ ಆತ್ಮಸ್ಥೈರ್ಯ ನೀಡಿವೆ. ಸಮಾಜದ ಎಲ್ಲರೂ ಒಗ್ಗಟ್ಟಿನಿಂದ ಇಂತಹ ಕುಟುಂಬಗಳ ನೆರವಿಗೆ ನಿಲ್ಲಬೇಕು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಸಮಾಜದ ಮುಖಂಡರಾದ ಪಲುಗುಲ ನಾಗರಾಜ ಹಾಗೂ ವಿಜ್ಞಾನ ವೆಂಕಟೇಶ ಮಾತನಾಡಿ, ಬಾಪೂರು ನರಸಿಂಹ ಅವರ ಕುಟುಂಬಕ್ಕೆ ಸಾಂತ್ವನ ಹೇಳಿದರು.

ಕಾರ್ಯಕ್ರಮದಲ್ಲಿ ಕೊಪ್ಪಳದಿಂದ ಆಗಮಿಸಿದ ರಾಘವೇಂದ್ರ ಚಿತ್ರಾಲಿ, ಶ್ರೀನಿವಾಸ ವೇಮಲಿ, ಸೋಮನಾಥ ಮೆಣೆದಾಳ, ನಾಗಭೂಷಣ ವೇಮಲಿ, ಲಕ್ಷ್ಮಣ ಚೌದರಿ, ಗಂಗಾ ಸೋಮನಾಥ ಸೇರಿದಂತೆ ರಾಯಚೂರು ಆರ್ಯವೈಶ್ಯ ಸಮಾಜ, ಎಲ್‌ಬಿಎಸ್ ಆರ್ಯವೈಶ್ಯ ಸಂಘ ಹಾಗೂ ವಾಸವಿ ಯುವಜನ ಸಂಘದ ಪದಾಧಿಕಾರಿಗಳು ಮತ್ತು ಸಮಾಜದ ಮುಖಂಡರು ಉಪಸ್ಥಿತರಿದ್ದರು.

ಬಾಪೂರು ನರಸಿಂಹ ಹತ್ಯೆ ಖಂಡಿಸಿ ಆರ್ಯವೈಶ್ಯ ಸಮಾಜದಿಂದ ಶ್ರದ್ಧಾಂಜಲಿ ಸಭೆ



ರಾಯಚೂರು: ನಗರದ ಎಲ್‌ಬಿಎಸ್ ನಗರದಲ್ಲಿ ಇತ್ತೀಚೆಗೆ ಹತ್ಯೆಗೀಡಾದ ಆರ್ಯವೈಶ್ಯ ಸಮಾಜದ ಯುವ ವ್ಯಾಪಾರಿ ಬಾಪೂರು ನರಸಿಂಹ ಅವರ ಸಾವಿಗೆ ಸಂತಾಪ ಸೂಚಿಸಿ, ಆರ್ಯವೈಶ್ಯ ಸಮಾಜದ ವತಿಯಿಂದ ನಗರದ ನಗರೇಶ್ವರ ದೇವಸ್ಥಾನದಲ್ಲಿ ಶ್ರದ್ಧಾಂಜಲಿ ಸಭೆ ಆಯೋಜಿಸಲಾಯಿತು. ಈ ಸಂದರ್ಭದಲ್ಲಿ ಸಮಾಜದ ಮುಖಂಡರು ಹತ್ಯೆ ಘಟನೆಯನ್ನು ತೀವ್ರವಾಗಿ ಖಂಡಿಸಿ, ನೊಂದ ಕುಟುಂಬಕ್ಕೆ ಎಲ್ಲ ರೀತಿಯ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಸಭೆಯಲ್ಲಿ ಮಾತನಾಡಿದ ಆರ್ಯವೈಶ್ಯ ಸಮಾಜದ ಅಧ್ಯಕ್ಷೆ ಸಾವಿತ್ರಿ ಪುರುಷೋತ್ತಮ, ಬಾಪೂರು ನರಸಿಂಹ ಅವರ ಹತ್ಯೆ ಅತ್ಯಂತ ಖಂಡನೀಯವಾಗಿದ್ದು, ಈ ಘಟನೆಯಿಂದ ಇಡೀ ಸಮಾಜಕ್ಕೆ ನೋವುಂಟಾಗಿದೆ. ಕುಟುಂಬದ ಆಧಾರಸ್ತಂಭವಾಗಿದ್ದ ವ್ಯಕ್ತಿಯನ್ನು ಕಳೆದುಕೊಂಡಿರುವುದರಿಂದ ಅವರ ಕುಟುಂಬ ಸಂಕಷ್ಟಕ್ಕೆ ಸಿಲುಕಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ನರಸಿಂಹ ಅವರ ಕುಟುಂಬ ಯಾವುದೇ ಕಾರಣಕ್ಕೂ ಆತಂಕಕ್ಕೆ ಒಳಗಾಗಬಾರದು. ದುಃಖದ ಈ ಸಂದರ್ಭದಲ್ಲಿ ಕುಟುಂಬದ ಸದಸ್ಯರು ಧೈರ್ಯ ಕಳೆದುಕೊಳ್ಳದೆ ಜೀವನವನ್ನು ಮುನ್ನಡೆಸಬೇಕು. ಅವರೊಂದಿಗೆ ಇಡೀ ಆರ್ಯವೈಶ್ಯ ಸಮಾಜವಿದ್ದು, ಅಗತ್ಯವಿರುವ ಎಲ್ಲ ರೀತಿಯ ನೆರವು ಮತ್ತು ಸಹಕಾರ ಒದಗಿಸಲಾಗುವುದು ಎಂದು ಭರವಸೆ ನೀಡಿದರು.

ಸಮಾಜದ ಹಿರಿಯ ಮುಖಂಡ ಜಗದೀಶ್ ಗುಪ್ತ ಮಾತನಾಡಿ, ನರಸಿಂಹ ಅವರ ಹತ್ಯೆ ಪ್ರಕರಣದಲ್ಲಿ ಆರೋಪಿಗೆ ಕಾನೂನಿನ ಪ್ರಕಾರ ಕಠಿಣ ಶಿಕ್ಷೆಯಾಗುವವರೆಗೂ ಸಮಾಜದ ಹೋರಾಟ ಮುಂದುವರಿಯಲಿದೆ. ಈ ವಿಚಾರದಲ್ಲಿ ಯಾವುದೇ ಕಾರಣಕ್ಕೂ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟಪಡಿಸಿದರು.

ಆರ್ಯವೈಶ್ಯ ಸಮಾಜದ ಒಗ್ಗಟ್ಟು ಹಾಗೂ ನಿರಂತರ ಒತ್ತಾಯದಿಂದ ಪೊಲೀಸರು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಆರೋಪಿಯನ್ನು ಬಂಧಿಸಿದ್ದಾರೆ. ಆದರೆ ಆರೋಪಿಯ ಬಂಧನದಿಂದ ಮಾತ್ರ ಕುಟುಂಬಕ್ಕೆ ಸಂಪೂರ್ಣ ನ್ಯಾಯ ದೊರೆತಂತಾಗುವುದಿಲ್ಲ. ಪ್ರಕರಣದ ತನಿಖೆ ಸಮರ್ಪಕವಾಗಿ ನಡೆದು ತಪ್ಪಿತಸ್ಥರಿಗೆ ಕಾನೂನಿನ ಪ್ರಕಾರ ಶಿಕ್ಷೆಯಾಗುವವರೆಗೂ ಸಮಾಜವು ಕುಟುಂಬದ ಬೆಂಬಲಕ್ಕೆ ನಿಲ್ಲಲಿದೆ ಎಂದು ಹೇಳಿದರು.

ನರಸಿಂಹ ಅವರ ಹತ್ಯೆಯ ನಂತರ ನೊಂದ ಕುಟುಂಬಕ್ಕೆ ವಿವಿಧೆಡೆಯಿಂದ ಸಮಾಜದ ಬಾಂಧವರು ಸಹಾಯಹಸ್ತ ಚಾಚುತ್ತಿರುವುದು ಮಾನವೀಯತೆಯ ಪ್ರತೀಕವಾಗಿದೆ. ಕುಟುಂಬದ ಸಂಕಷ್ಟಕ್ಕೆ ಸ್ಪಂದಿಸುವುದರ ಜೊತೆಗೆ ಅವರ ಮಕ್ಕಳ ಭವಿಷ್ಯಕ್ಕೆ ನೆರವಾಗುವ ನಿಟ್ಟಿನಲ್ಲಿ ಸಮಾಜದ ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂಬ ಅಭಿಪ್ರಾಯ ಸಭೆಯಲ್ಲಿ ವ್ಯಕ್ತವಾಯಿತು.

ಈ ಸಂದರ್ಭದಲ್ಲಿ ಸಮಾಜದ ಮುಖಂಡರು ಮೃತ ಬಾಪೂರು ನರಸಿಂಹ ಅವರ ಆತ್ಮಕ್ಕೆ ಶಾಂತಿ ಕೋರಿ ಶ್ರದ್ಧಾಂಜಲಿ ಸಲ್ಲಿಸಿದರು.

ಸಭೆಯಲ್ಲಿ ಜಟಂ ಶ್ರೀನಿವಾಸ, ಕೆ.ಸಿ. ವೀರೇಶ್, ಭೀಮಶಂಕರ ಸೇರಿದಂತೆ ಆರ್ಯವೈಶ್ಯ ಸಮಾಜದ ಮುಖಂಡರು ಹಾಗೂ ಸಮಾಜದ ಬಾಂಧವರು ಉಪಸ್ಥಿತರಿದ್ದರು.

ಕ್ಷಯರೋಗ ಪತ್ತೆ ಆಂದೋಲನ: ಡಿಸೆಂಬರ್ 8ರವರೆಗೆ ಮನೆಮನೆ ಸಮೀಕ್ಷೆ



ಲಿಂಗಸುಗೂರು: ಕ್ಷಯರೋಗವನ್ನು ಆರಂಭಿಕ ಹಂತದಲ್ಲಿಯೇ ಪತ್ತೆಹಚ್ಚಿ ಸೂಕ್ತ ಚಿಕಿತ್ಸೆ ನೀಡುವ ಉದ್ದೇಶದಿಂದ ತಾಲೂಕಿನಲ್ಲಿ ಕ್ಷಯರೋಗ ಪತ್ತೆ ಆಂದೋಲನ ಹಮ್ಮಿಕೊಳ್ಳಲಾಗಿದ್ದು, ಡಿಸೆಂಬರ್ 8ರವರೆಗೆ ಆಶಾ ಕಾರ್ಯಕರ್ತೆಯರು ಮನೆಮನೆಗೆ ಭೇಟಿ ನೀಡಿ ಸಮೀಕ್ಷೆ ನಡೆಸಲಿದ್ದಾರೆ ಎಂದು ತಾಲೂಕು ಆರೋಗ್ಯಾಧಿಕಾರಿ ಡಾ. ಹನುಮಂತರಾಯ ತಳ್ಳಳ್ಳಿ ತಿಳಿಸಿದರು.

ಪಟ್ಟಣದ ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ ಕ್ಷಯರೋಗ ಪತ್ತೆ ಆಂದೋಲನದ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿ ಮಾತನಾಡಿದ ಅವರು, ತಾಲೂಕಿನ ಒಟ್ಟು ಜನಸಂಖ್ಯೆಯ ಶೇ.20ರಷ್ಟು ಜನರನ್ನು ಸಮೀಕ್ಷೆಗೆ ಒಳಪಡಿಸುವ ಗುರಿ ಹೊಂದಲಾಗಿದೆ. ಸುಮಾರು 82,610 ಜನಸಂಖ್ಯೆ ಹಾಗೂ 16,266 ಮನೆಗಳನ್ನು ಸಮೀಕ್ಷೆಗೆ ಗುರುತಿಸಲಾಗಿದ್ದು, 80 ಆಶಾ ಕಾರ್ಯಕರ್ತೆಯರ ತಂಡಗಳು ನಿಗದಿಪಡಿಸಿದ ಗ್ರಾಮಗಳು ಮತ್ತು ವಾರ್ಡ್‌ಗಳಲ್ಲಿ ಮನೆಮನೆಗೆ ಭೇಟಿ ನೀಡಲಿವೆ ಎಂದು ಹೇಳಿದರು.

ಸಮೀಕ್ಷೆಯ ಸಂದರ್ಭದಲ್ಲಿ ಕ್ಷಯರೋಗದ ಲಕ್ಷಣಗಳು ಕಂಡುಬರುವ ವ್ಯಕ್ತಿಗಳಿಂದ ಕಫದ ಮಾದರಿಗಳನ್ನು ಸಂಗ್ರಹಿಸಿ ಪ್ರಯೋಗಾಲಯಕ್ಕೆ ಪರೀಕ್ಷೆಗಾಗಿ ಕಳುಹಿಸಲಾಗುವುದು. ರೋಗವನ್ನು ಆರಂಭದಲ್ಲಿಯೇ ಪತ್ತೆಹಚ್ಚುವುದರಿಂದ ಸಕಾಲದಲ್ಲಿ ಚಿಕಿತ್ಸೆ ನೀಡಿ ಗುಣಮುಖರಾಗಲು ನೆರವಾಗಬಹುದು ಎಂದು ತಿಳಿಸಿದರು.

ವಿಶೇಷವಾಗಿ ವೃದ್ಧರು, ಕ್ಷಯರೋಗಿಗಳ ಸಂಪರ್ಕದಲ್ಲಿರುವವರು, ಮಧುಮೇಹ ಹೊಂದಿರುವವರು, ಸಿಮೆಂಟ್ ಕಾರ್ಮಿಕರು, ಗಣಿ ಮತ್ತು ಹತ್ತಿ ಗಿರಣಿಗಳಲ್ಲಿ ಕೆಲಸ ಮಾಡುವವರು, ಧೂಮಪಾನ ಹಾಗೂ ಮದ್ಯಪಾನದ ಅಭ್ಯಾಸ ಹೊಂದಿರುವವರು, ಅಪೌಷ್ಟಿಕತೆಯಿಂದ ಬಳಲುತ್ತಿರುವ ಮಕ್ಕಳು ಮತ್ತು ಇತರ ಗಂಭೀರ ಕಾಯಿಲೆಗಳಿಂದ ಬಳಲುತ್ತಿರುವವರು ಕ್ಷಯರೋಗದ ತಪಾಸಣೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಅಗತ್ಯವಿರುವ ವ್ಯಕ್ತಿಗಳಿಗೆ ಎಕ್ಸ್‌ರೇ ಸೇರಿದಂತೆ ವಿವಿಧ ವೈದ್ಯಕೀಯ ಪರೀಕ್ಷೆಗಳನ್ನು ನಡೆಸಲಾಗುವುದು. ಪರೀಕ್ಷೆಯಲ್ಲಿ ಕ್ಷಯರೋಗ ದೃಢಪಟ್ಟವರಿಗೆ ಸರ್ಕಾರದ ವತಿಯಿಂದ ಸಂಪೂರ್ಣ ಉಚಿತ, ಗುಣಮಟ್ಟದ ಹಾಗೂ ಪರಿಣಾಮಕಾರಿ ಚಿಕಿತ್ಸೆಯನ್ನು ಒದಗಿಸಲಾಗುವುದು ಎಂದು ಹೇಳಿದರು.

ಕ್ಷಯರೋಗದ ಕುರಿತು ಸಾರ್ವಜನಿಕರು ಯಾವುದೇ ಭಯ ಅಥವಾ ತಪ್ಪು ಕಲ್ಪನೆ ಹೊಂದಬಾರದು. ರೋಗದ ಲಕ್ಷಣಗಳು ಕಂಡುಬಂದಲ್ಲಿ ನಿರ್ಲಕ್ಷ್ಯ ವಹಿಸದೆ ಸಮೀಪದ ಸರ್ಕಾರಿ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ತಪಾಸಣೆ ಮಾಡಿಸಿಕೊಳ್ಳಬೇಕು. ಆರೋಗ್ಯ ಇಲಾಖೆಯ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತೆಯರು ಮನೆಗಳಿಗೆ ಭೇಟಿ ನೀಡುವ ಸಂದರ್ಭದಲ್ಲಿ ಸಾರ್ವಜನಿಕರು ಅಗತ್ಯ ಮಾಹಿತಿ ನೀಡಿ ಸಹಕರಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ತಜ್ಞ ವೈದ್ಯ ಡಾ. ನೀಲಕಂಠ, ಆಪ್ತ ಸಮಾಲೋಚಕ ರವಿ ಬಳಿಗಾರ, ಪ್ರಯೋಗಾಲಯ ಮೇಲ್ವಿಚಾರಕ ಮಹಾಂತೇಶ ಬ್ಯಾಳಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಕರಿಬಸಪ್ಪ, ಆರೋಗ್ಯ ಸುರಕ್ಷತಾ ಅಧಿಕಾರಿ ಸೀತಾ, ಆಶಾ ಕಾರ್ಯಕರ್ತೆ ರಾಜಕುಮಾರಿ ಸೇರಿದಂತೆ ಆರೋಗ್ಯ ಇಲಾಖೆಯ ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ನಗರ, ಗ್ರಾಮೀಣ ಕ್ಷೇತ್ರಗಳಲ್ಲಿ ಎಸ್ಐಆರ್ ಪೂರ್ಣ: 1.06 ಲಕ್ಷಕ್ಕೂ ಅಧಿಕ ಮತದಾರರ ಹೆಸರು ಕೈಬಿಟ್ಟಿರುವ ಮಾಹಿತಿ



ರಾಯಚೂರು: ರಾಯಚೂರು ಗ್ರಾಮೀಣ ಹಾಗೂ ನಗರ ವಿಧಾನಸಭಾ ಕ್ಷೇತ್ರಗಳ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್) ಕಾರ್ಯ ಪೂರ್ಣಗೊಂಡಿದ್ದು, ಗೈರುಹಾಜರಿ, ವಲಸೆ, ಸ್ಥಳಾಂತರ ಹಾಗೂ ಮೃತಪಟ್ಟಿರುವುದು ಸೇರಿದಂತೆ ವಿವಿಧ ಕಾರಣಗಳಿಂದ ಎರಡೂ ಕ್ಷೇತ್ರಗಳಲ್ಲಿ ಒಟ್ಟು 1,06,922 ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡಲಾಗಿದೆ ಎಂದು ತಹಶೀಲ್ದಾರ್ ಸುರೇಶ ವರ್ಮಾ ಮಾಹಿತಿ ನೀಡಿದರು.

ನಗರದ ಮಹಾನಗರ ಪಾಲಿಕೆಯ ಹಳೆಯ ಕಟ್ಟಡದ ಸಭಾಂಗಣದಲ್ಲಿ ಅಕ್ಟೋಬರ್ 28ರಂದು ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಪರಿಷ್ಕೃತ ಮತದಾರರ ಪಟ್ಟಿಯ ವಿವರಗಳನ್ನು ಅವರು ಪ್ರಕಟಿಸಿದರು.

ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ಪರಿಷ್ಕರಣೆಗೆ ಮುನ್ನ 2,39,883 ಮತದಾರರು ನೋಂದಣಿಯಾಗಿದ್ದರು. ಪರಿಶೀಲನಾ ಕಾರ್ಯದ ಬಳಿಕ ಈ ಸಂಖ್ಯೆ 2,03,686ಕ್ಕೆ ಇಳಿಕೆಯಾಗಿದೆ. ಪರಿಷ್ಕೃತ ಪಟ್ಟಿಯಲ್ಲಿ 1,00,855 ಪುರುಷರು, 1,02,810 ಮಹಿಳೆಯರು ಹಾಗೂ 21 ಇತರೆ ಮತದಾರರು ಸೇರಿದ್ದಾರೆ. ವಿವಿಧ ಕಾರಣಗಳಿಂದ 36,197 ಮತದಾರರ ಹೆಸರುಗಳನ್ನು ತೆಗೆದುಹಾಕಲಾಗಿದೆ ಎಂದು ವಿವರಿಸಿದರು.

ಗ್ರಾಮೀಣ ಕ್ಷೇತ್ರದಲ್ಲಿ ಈ ಹಿಂದೆ 275 ಮತಗಟ್ಟೆಗಳಿದ್ದು, ಮತದಾರರ ಅನುಕೂಲತೆ ಹಾಗೂ ಆಡಳಿತಾತ್ಮಕ ಅಗತ್ಯಗಳಿಗೆ ಅನುಗುಣವಾಗಿ ಮೂರು ಹೆಚ್ಚುವರಿ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಇದರೊಂದಿಗೆ ಒಟ್ಟು ಮತಗಟ್ಟೆಗಳ ಸಂಖ್ಯೆ 278ಕ್ಕೆ ಏರಿಕೆಯಾಗಿದೆ ಎಂದರು.

ಅದೇ ರೀತಿ, ರಾಯಚೂರು ನಗರ ವಿಧಾನಸಭಾ ಕ್ಷೇತ್ರದಲ್ಲಿ ಪರಿಷ್ಕರಣೆಗೆ ಮೊದಲು 2,54,403 ಮತದಾರರಿದ್ದು, ಪರಿಷ್ಕೃತ ಪಟ್ಟಿಯಲ್ಲಿ 1,84,678 ಮತದಾರರಿದ್ದಾರೆ. ಇವರಲ್ಲಿ 89,971 ಪುರುಷರು, 94,660 ಮಹಿಳೆಯರು ಹಾಗೂ 47 ಇತರೆ ಮತದಾರರು ಸೇರಿದ್ದಾರೆ. ಗೈರುಹಾಜರಿ, ಸ್ಥಳಾಂತರ ಹಾಗೂ ಮರಣ ಸೇರಿದಂತೆ ವಿವಿಧ ಕಾರಣಗಳಿಂದ 70,725 ಹೆಸರುಗಳನ್ನು ಮತದಾರರ ಪಟ್ಟಿಯಿಂದ ಕೈಬಿಡಲಾಗಿದೆ ಎಂದು ತಿಳಿಸಿದರು.

ನಗರಕ್ಷೇತ್ರದಲ್ಲಿ ಈ ಹಿಂದೆ 250 ಮತಗಟ್ಟೆಗಳು ಕಾರ್ಯನಿರ್ವಹಿಸುತ್ತಿದ್ದವು. ಇದೀಗ ನಾಲ್ಕು ಹೊಸ ಮತಗಟ್ಟೆಗಳನ್ನು ಸೇರ್ಪಡೆಗೊಳಿಸಿರುವುದರಿಂದ ಒಟ್ಟು ಸಂಖ್ಯೆ 254ಕ್ಕೆ ತಲುಪಿದೆ. ಎರಡೂ ವಿಧಾನಸಭಾ ಕ್ಷೇತ್ರಗಳಲ್ಲಿಯೂ ಪುರುಷ ಮತದಾರರಿಗಿಂತ ಮಹಿಳಾ ಮತದಾರರ ಸಂಖ್ಯೆ ಹೆಚ್ಚಿರುವುದು ಪರಿಷ್ಕೃತ ಪಟ್ಟಿಯ ಅಂಕಿಅಂಶಗಳಿಂದ ತಿಳಿದುಬಂದಿದೆ.

ಮತದಾರರ ಪಟ್ಟಿಯ ಪರಿಷ್ಕರಣೆ ಪೂರ್ಣಗೊಂಡಿದ್ದರೂ ಅರ್ಹ ನಾಗರಿಕರಿಗೆ ಹೆಸರು ನೋಂದಾಯಿಸಿಕೊಳ್ಳುವ ಅವಕಾಶ ಮುಂದುವರಿಯಲಿದೆ. 18 ವರ್ಷ ತುಂಬಿದ ಯುವಕ-ಯುವತಿಯರು ಹೊಸದಾಗಿ ಮತದಾರರ ಪಟ್ಟಿಗೆ ಸೇರ್ಪಡೆಯಾಗಬಹುದು. ಈಗಾಗಲೇ ನೋಂದಣಿಯಾಗಿರುವ ಮತದಾರರು ತಮ್ಮ ಹೆಸರು, ವಿಳಾಸ ಸೇರಿದಂತೆ ಅಗತ್ಯ ವಿವರಗಳಲ್ಲಿ ತಿದ್ದುಪಡಿ ಮಾಡಿಸಿಕೊಳ್ಳಬಹುದು ಎಂದು ಸುರೇಶ ವರ್ಮಾ ಸ್ಪಷ್ಟಪಡಿಸಿದರು.

ರಾಯಚೂರು ಗ್ರಾಮೀಣ ಕ್ಷೇತ್ರದ ಮತದಾರರ ನೋಂದಣಾಧಿಕಾರಿಯಾಗಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ ಹಾಗೂ ನಗರ ಕ್ಷೇತ್ರದ ಮತದಾರರ ನೋಂದಣಾಧಿಕಾರಿಯಾಗಿ ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮಹಾಪಾತ್ರ ಜವಾಬ್ದಾರಿ ನಿರ್ವಹಿಸಿದ್ದಾರೆ. ಎರಡೂ ಕ್ಷೇತ್ರಗಳ ಸಹಾಯಕ ಮತದಾರರ ನೋಂದಣಾಧಿಕಾರಿಯಾಗಿ ತಹಶೀಲ್ದಾರ್ ಕಾರ್ಯನಿರ್ವಹಿಸಿದ್ದು, ಕಂದಾಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಹಭಾಗಿತ್ವ ವಹಿಸಿದ್ದಾರೆ.

ಸುಮಾರು ಎರಡು ತಿಂಗಳ ಕಾಲ ನಡೆದ ಪರಿಷ್ಕರಣಾ ಕಾರ್ಯದಲ್ಲಿ ಬೂತ್ ಮಟ್ಟದ ಅಧಿಕಾರಿಗಳು, ಮೇಲ್ವಿಚಾರಕರು, ನೋಡಲ್ ಅಧಿಕಾರಿಗಳು, ಹೆಚ್ಚುವರಿ ಸಹಾಯಕ ಮತದಾರರ ನೋಂದಣಾಧಿಕಾರಿಗಳು ಮತ್ತು ತಾಂತ್ರಿಕ ಸಿಬ್ಬಂದಿ ನಿರಂತರವಾಗಿ ಕಾರ್ಯನಿರ್ವಹಿಸಿದ್ದಾರೆ. ಜಿಲ್ಲಾಧಿಕಾರಿ ಪೂವಿತಾ ಎಸ್., ಅಪರ ಜಿಲ್ಲಾಧಿಕಾರಿ ಹಾಗೂ ಸಹಾಯಕ ಆಯುಕ್ತರ ಮಾರ್ಗದರ್ಶನದಲ್ಲಿ ಕಾರ್ಯವನ್ನು ವ್ಯವಸ್ಥಿತವಾಗಿ ಪೂರ್ಣಗೊಳಿಸಲಾಗಿದೆ ಎಂದು ಹೇಳಿದರು.

ಮತದಾರರ ಮಾಹಿತಿ ಸಂಗ್ರಹಣೆ, ದಾಖಲೆಗಳ ಪರಿಶೀಲನೆ ಹಾಗೂ ಪಟ್ಟಿಯ ಪರಿಷ್ಕರಣೆ ಕಾರ್ಯಕ್ಕೆ ಸಹಕರಿಸಿದ ರಾಜಕೀಯ ಪಕ್ಷಗಳ ಪ್ರತಿನಿಧಿಗಳು, ಸಾರ್ವಜನಿಕರು, ಮತದಾರರು, ಮಾಧ್ಯಮ ಪ್ರತಿನಿಧಿಗಳು ಮತ್ತು ಅಧಿಕಾರಿಗಳಿಗೆ ಸುರೇಶ ವರ್ಮಾ ಕೃತಜ್ಞತೆ ಸಲ್ಲಿಸಿದರು.

ಸಭೆಯಲ್ಲಿ ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತ ಶರಣಪ್ಪ, ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ಚುನಾವಣಾ ವಿಭಾಗದ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಶಶೀಲ್ ನಮೋಶಿ ಗೆಲುವಿಗೆ ವಿಜಯರಾಜೇಶ್ವರಿ ಗೋಪಿಶೆಟ್ಟಿ ಅಭಿನಂದನೆ



ರಾಯಚೂರು: ವಿಧಾನ ಪರಿಷತ್ತಿನ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ವಿರುದ್ಧ ಗೆಲುವು ಸಾಧಿಸಿದ ಬಿಜೆಪಿ ಅಭ್ಯರ್ಥಿ ಶಶೀಲ್ ಜಿ. ನಮೋಶಿ ಅವರಿಗೆ ಬಿಜೆಪಿ ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ವಿಜಯರಾಜೇಶ್ವರಿ ಗೋಪಿಶೆಟ್ಟಿ ಅಭಿನಂದನೆ ಸಲ್ಲಿಸಿ ಹರ್ಷ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಚುನಾವಣಾ ಪ್ರಚಾರದ ಸಂದರ್ಭದಲ್ಲಿ ಶಿಕ್ಷಕ ಮತದಾರರು ನೀಡಿದ್ದ ಬೆಂಬಲದ ಭರವಸೆಯನ್ನು ಮತದಾನದ ಮೂಲಕ ಈಡೇರಿಸಿದ್ದಾರೆ. ಶಿಕ್ಷಣ ಕ್ಷೇತ್ರದ ಅಭಿವೃದ್ಧಿ ಹಾಗೂ ಶಿಕ್ಷಕರ ಸಮಸ್ಯೆಗಳ ಪರಿಹಾರಕ್ಕಾಗಿ ನಿರಂತರವಾಗಿ ಶ್ರಮಿಸಿರುವ ನಮೋಶಿ ಅವರ ಅನುಭವ ಮತ್ತು ಕಾರ್ಯವೈಖರಿಯನ್ನು ಗುರುತಿಸಿ ಮತದಾರರು ಮತ್ತೊಮ್ಮೆ ಅವಕಾಶ ನೀಡಿದ್ದಾರೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಈಶಾನ್ಯ ಕರ್ನಾಟಕ ಭಾಗದ ಶಿಕ್ಷಣ ಸಂಸ್ಥೆಗಳ ಅಭಿವೃದ್ಧಿಗೆ ಅನುದಾನ ಒದಗಿಸುವುದು ಹಾಗೂ ಶಿಕ್ಷಕರು ಎದುರಿಸುತ್ತಿರುವ ವಿವಿಧ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ಪರಿಹರಿಸಲು ನಮೋಶಿ ಅವರು ಶ್ರಮಿಸಿದ್ದಾರೆ. ಶಿಕ್ಷಕರ ಹಿತಾಸಕ್ತಿಗಾಗಿ ಅವರು ತೋರಿದ ಬದ್ಧತೆ ಮತ್ತು ಸೇವಾ ಮನೋಭಾವವೇ ಐದನೇ ಬಾರಿಗೆ ಗೆಲುವು ಸಾಧಿಸಲು ಕಾರಣವಾಗಿದೆ ಎಂದು ತಿಳಿಸಿದ್ದಾರೆ.

ಚುನಾವಣೆಯಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಕೂಟದ ಮುಖಂಡರು ಹಾಗೂ ಕಾರ್ಯಕರ್ತರು ಸಂಘಟಿತವಾಗಿ ಪ್ರಚಾರ ನಡೆಸಿದ್ದಾರೆ. ರಾಯಚೂರು ನಗರ ಶಾಸಕ ಡಾ. ಶಿವರಾಜ ಪಾಟೀಲ್, ಪಕ್ಷದ ಜಿಲ್ಲಾಧ್ಯಕ್ಷರು, ವಿವಿಧ ಘಟಕಗಳ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಅಭ್ಯರ್ಥಿಯ ಗೆಲುವಿಗಾಗಿ ಶ್ರಮಿಸಿದ್ದು, ಎಲ್ಲರ ಪರಿಶ್ರಮಕ್ಕೆ ಉತ್ತಮ ಫಲಿತಾಂಶ ದೊರೆತಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

ಬೆಂಗಳೂರು ಶಿಕ್ಷಕರ ಕ್ಷೇತ್ರ ಹಾಗೂ ಆಗ್ನೇಯ ಮತ್ತು ಪಶ್ಚಿಮ ಪದವೀಧರರ ಕ್ಷೇತ್ರಗಳಲ್ಲಿಯೂ ಬಿಜೆಪಿ ಅಭ್ಯರ್ಥಿಗಳು ಗೆಲುವು ಸಾಧಿಸಿರುವುದು ಪಕ್ಷದ ಸಂಘಟನೆಗೆ ಮತ್ತಷ್ಟು ಬಲ ನೀಡಿದೆ. ರಾಜ್ಯ ಕಾಂಗ್ರೆಸ್ ಸರ್ಕಾರದ ಆಡಳಿತದ ವಿರುದ್ಧ ಮತದಾರರು ತಮ್ಮ ಅಸಮಾಧಾನವನ್ನು ಚುನಾವಣೆಯ ಮೂಲಕ ವ್ಯಕ್ತಪಡಿಸಿದ್ದಾರೆ ಎಂದು ವಿಜಯರಾಜೇಶ್ವರಿ ಗೋಪಿಶೆಟ್ಟಿ ಅಭಿಪ್ರಾಯಪಟ್ಟಿದ್ದಾರೆ.

ಈ ಚುನಾವಣಾ ಫಲಿತಾಂಶವು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ನಾಯಕತ್ವ ಹಾಗೂ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರ ಸಂಘಟಿತ ಪ್ರಯತ್ನಕ್ಕೆ ದೊರೆತ ಯಶಸ್ಸಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K